## ಒಂದನೇ ಪುಟದಿಂದ

# ಪರಿಹಾರ ನೀಡಲು ಈಶ್ವರ ಖಂಡ್ರೆ ಸೂಚನೆ

ನಡೆಯುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿರುವ ಸಚಿವರು, ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ತುರ್ತು ಸಭೆಯಲ್ಲಿ, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯ್ತಿ ಸಿಇಓ, ತಹಶೀಲ್ದಾರ್ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಂದ ಮಳೆ ಹಾನಿಯ ಸ್ಥಿತಿ–ಗತಿ ಮತ್ತು ರಕ್ಷಣೆ ಹಾಗೂ ಪರಿಹಾರ ಕಾಮಗಾರಿಗಳ ಮಾಹಿತಿ ಪಡೆದರು.

ಮಳೆ ಮತ್ತು ಪ್ರವಾಹದಂತ ಪರಿಸ್ಥಿತಿಯಿಂದ ಜಾನುವಾರುಗಳು ಮೃತಪಟ್ಟಿದ್ದು, ಮನೆಗಳಿಗೆ ಹಾನಿ ಆಗಿದೆ, ಈ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸಲು ಮತ್ತು ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ, ದವಸ, ಧಾನ್ಯ, ಬಟ್ಟೆ, ಪಾತ್ರೆ ಇತ್ಯಾದಿ ಹಾಳಾಗಿರುವ ಪ್ರಕರಣಗಳಲ್ಲಿ ತುರ್ತಾಗಿ 5 ಸಾವಿರ ರೂಪಾಯಿ ಪರಿಹಾರ ನೀಡಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.ಮನೆಗಳಿಗೆ ಆಗಿರುವ ಹಾನಿಯ ಪ್ರಮಾಣದ ನಿರ್ಧರಣೆಯ ಬಗ್ಗೆ ಎಂಜಿನಿಯರುಗಳನ್ನು ತತ್ ಕ್ಷಣವೇ ಕಳುಹಿಸಿ 48 ಗಂಟೆಯೊಳಗೆ ವರದಿ ತರಿಸಿಕೊಂಡು, ವಿಳಂಬ ಇಲ್ಲದಂತೆ ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್. ನಿಯಮಗಳ ರೀತ್ಯ ಪರಿಹಾರ ನೀಡಲು ಕ್ರಮ ವಹಿಸುವಂತೆ ಆದೇಶಿಸಿದರು.ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಬೆಳೆಗೆ ಹಾನಿ ಆಗಿದ್ದು, ಈ ಬಗ್ಗೆ ಸಮಗ್ರ ಸಮೀಕ್ಷೆ ನಡೆಸಿ, ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಕಳಿಸಲು ಸೂಚಿಸಿದ ಅವರು, ಸೇತುವೆಗಳು ಕುಸಿದು ರಸ್ತೆ ಸಂಪರ್ಕ ಕಳೆದುಕೊಂಡಿರುವ ಗ್ರಾಮಗಳಿಗೆ ತುರ್ತಾಗಿ ಸಂಪರ್ಕ ಕಲ್ಪಿಸಲು ತಿಳಿಸಿದ ಸಚಿವರು ಪುನರ್ ನಿರ್ಮಾಣ ಮಾಡುವ ಅಗತ್ಯ ಇರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕೂಡಲೇ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

ಕಳಪೆ ಕಾಮಗಾರಿಯಿಂದ ರಸ್ತೆ, ಸೇತುವೆ ಇತ್ಯಾದಿ ಹಾಳಾಗಿದ್ದರೆ ಆ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆಯೂ ತಿಳಿಸಿದ ಈಶ್ವರ ಖಂಡ್ರೆ, ಇಂದು ಸಂಜೆ ಅಥವಾ ರಾತ್ರಿಯೊಳಗೆ ವಿದ್ಯುತ್ ಸಂಪರ್ಕಗಳ ಪುನರ್ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು, ಆಗದಿದ್ದರೆ ವಾಟ್ಸ್ ಅಪ್ ಮೂಲಕ ಮಾಹಿತಿ ನೀಡಬೇಕು ಎಂದು ವಿದ್ಯುತ್ ಸರಬರಾಜು ಇಲಾಖೆಗೆ ಸೂಚಿಸಿದರು.ಅಂಗನವಾಡಿ, ಸರ್ಕಾರಿ ಶಾಲೆ ಮತ್ತು ಕಾಲೇಜು ಕಟ್ಟಡಗಳ ಛಾವಣಿಯಲ್ಲಿ ಸೋರಿಕೆ ಆಗುತ್ತಿದ್ದರೆ, ಕೊಠಡಿ ಅಥವಾ ಕಟ್ಟಡ ಶಿಥಿಲವಾಗಿದ್ದರೆ ಕೂಡಲೇ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಲು ಮತ್ತು ಈ ಬಗ್ಗೆ ಸಮಗ್ರ ಮಾಹಿತಿ ತರಿಸಿಕೊಂಡು ವರದಿ ಸಲ್ಲಿಸಲು ತಿಳಿಸಿದ ಸಚಿವರು, ಯಾವುದೇ ಶಾಲೆಯಲ್ಲಿ ದುರಂತ ಸಂಭವಿಸಿದರೆ ಸಂಬಂಧಿತ ಶಾಲಾ ಶಿಕ್ಷಣ ಅಧಿಕಾರಿಗಳನ್ನೇ ಹೊಣೆ ಮಾಡುವುದಾಗಿ ಎಚ್ಚರಿಸಿದರು.ಔರಾದ್, ಕಮಲನಗರ ಸೇರಿದಂತೆ ಹಲವೆಡೆ ಸೇತುವೆಗಳು ಕೊಚ್ಚಿಹೋಗಿದ್ದರೂ, ಕೆಲವರು ಅದೇ ಮಾರ್ಗವಾಗಿ ತಮ್ಮ ಖಾಸಗಿ ವಾಹನದಲ್ಲಿ ಸಂಚರಿಸುತ್ತಿದ್ದು, ಅನಾಹುತ ಸಂಭವಿಸಿದಂತೆ ಪೊಲೀಸ್ ಕಾವಲು ಹಾಕಲು, ತಾತ್ಕಾಲಿಕ ತಡೆಗೋಡೆ ಅಳವಡಿಸಲು ಹಾಗೂ ಸೇತುವೆ ದುರಸ್ತಿಗೆ ತುರ್ತು ಕ್ರಮ ಕೈಗೊಳ್ಳಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ಸ್ಪಷ್ಟ ನಿರ್ದೇಶನ ನೀಡಿದರು.ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಸೂಚನೆ: ಪ್ರವಾಹ ಪರಿಸ್ಥಿತಿ ಉಂಟಾದಾಗ, ಮನೆಗಳಿಗೆ ನೀರು ನುಗ್ಗಿದಾಗ ನಾನಾ ಬಗೆಯ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಳ್ಳುತ್ತವೆ. ಈ ಹಿನ್ನೆಲೆಯಲ್ಲಿ ಔರಾದ್, ಕಮಲನಗರ ತಾಲೂಕು ಸೇರಿದಂತೆ ಜಿಲ್ಲೆಯಲ್ಲಿ ಮಳೆ ನೀರು ನುಗ್ಗಿರುವ ಪ್ರದೇಶಗಳಲ್ಲಿ ಸಮುದಾಯ ಆರೋಗ್ಯದ ಬಗ್ಗೆ ನಿಗಾ ಇಡುವಂತೆ ಸೂಚಿಸಿದರು. ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಯಾವುದೇ ಆಸ್ಪತ್ರೆ ಸೋರುತ್ತಿದ್ದರೆ, ಗೋಡೆ ಶಿಥಿಲವಾಗಿದ್ದರೆ ರೋಗಿಗಳನ್ನು ಸ್ಥಳಾಂತರಿಸುವಂತೆ ಸೂಚಿಸಿದರು.ನೆರೆಯ ಮಹಾರಾಷ್ಟ್ರದಿಂದ ನದಿಗೆ ನೀರು ಹರಿಯ ಬಿಟ್ಟರೆ ಮತ್ತೆ ಸಮಸ್ಯೆ ಎದುರಾಗುತ್ತದೆ. ಹೀಗಾಗಿ ಕೆಳದಂಡೆಯ ಜನರಿಗೆ ಮುನ್ನೆಚ್ಚರಿಕೆ ನೀಡಲು ಸೂಚಿಸಿದ ಈಶ್ವರ ಖಂಡ್ರೆ, ಕೆಲವೇ ಮನೆಗಳಿರುವ ಕಡೆ ಪದೇ ಪದೇ ಪ್ರವಾಹದಿಂದ ಸಮಸ್ಯೆ ಎದುರಾಗುವುದನ್ನು ತಪ್ಪಿಸಲು ಮತ್ತು ಶಾಶ್ವತ ಪರಿಹಾರ ಕಲ್ಪಿಸಲು ಅವರಿಗೆ ಬೇರೆಡೆ ಸರ್ಕಾರಿ ಜಮೀನು ನೀಡಿ ಸ್ಥಳಾಂತರಿಸಲು ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.ಎಲ್ಲ ಗ್ರಾಮ ಪಂಚಾಯ್ತಿಯ ಪಿಡಿಓಗಳಿಗೆ ಕೇಂದ್ರ ಸ್ಥಾನದಲ್ಲಿಯೇ ಇರುವಂತೆ ಮತ್ತು ಮಳೆ ಪೀಡಿತ ಪ್ರದೇಶಗಳಿಗೆ ತೆರಳಿ ರಕ್ಷಣೆ ಪರಿಹಾರ ಕಾಮಗಾರಿ ಕೈಗೊಳ್ಳುವಂತೆ ಸೂಚಿಸುವಂತೆ ತಿಳಿಸಿದ ಸಚಿವರು, ಕೆರೆಯ ದಂಡೆ ಒಡೆದಿದ್ದರೆ ಕೂಡಲೇ ತಜ್ಞರನ್ನು ಕಳುಹಿಸಿ, ದುರಸ್ತಿ ಮಾಡಲು ನಿರ್ದೇಶನ ನೀಡಿದರು. ಈ ಕಾಮಗಾರಿಯಲ್ಲಿ ಲೋಪ ಆಗದಂತೆ ಎಚ್ಚರಿಕೆ ವಹಿಸಲು ತಿಳಿಸಿದರು.ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಜಿಲ್ಲಾ ವೈದ್ಯಾಧಿಕಾರಿ ಡಾ. ನಿರ್ಗುಡೆ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

# 24 ಗಂಟೆಯಲ್ಲಿ ದಾಖಲೆಯ 41 ಮಿ.ಮೀ ಮಳೆ

ದಾಬಕಾ ಹೋಬಳಿಯಲ್ಲಿ 224 ಮಿ.ಮೀ ಮಳೆ ಬಂದಿದೆ. ಕಮಲನಗರ ತಾಲೂಕಿನಲ್ಲಿ 112 ಮಿ.ಮೀ, ಔರಾದನಲ್ಲಿ 86 ಮಿ.ಮೀ, ಭಾಲ್ಕಿಯಲ್ಲಿ 43 ಮಿ.ಮೀ, ಹುಮನಾಬಾದ್‌ನಲ್ಲಿ 28 ಮಿ.ಮೀ, ಹುಲಸೂರಿನಲ್ಲಿ 26 ಮಿ.ಮೀ, ಬೀದರನಲ್ಲಿ 21 ಮಿ.ಮೀ, ಬಸವಕಲ್ಯಾಣದಲ್ಲಿ 16 ಮಿ.ಮೀ ಮತ್ತು ಚಿಟಗುಪ್ಪದಲ್ಲಿ 7.7 ಮಿ.ಮೀ ನಷ್ಟು ಮಳೆ ದಾಖಲಾಗಿದೆ. ಭಾರಿ ಮಳೆ ಕಾರಣ ಔರಾದ ಮತ್ತು ಕಮಲನಗರ ತಾಲೂಕಿನಲ್ಲಿ ಸೋಮವಾರ ಶಾಲೆ– ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಲಾಗಿತ್ತು. ವರ್ಷಧಾರೆಗೆ ಕಮಲನಗರ ಮತ್ತು ಔರಾದ ತಾಲೂಕುಗಳಲ್ಲಿ ಭಾರಿ ಪ್ರಮಾಣದ ಹಾನಿ ಆಗಿದ್ದು, ಜನ ಅಕ್ಷರಶ: ನಲುಗಿ ಹೋಗಿದ್ದಾರೆ. ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದ ಹಳ್ಳ– ಕೊಳ್ಳಗಳು ತುಂಬಿ ಹರಿಯುತ್ತಿವೆ. ಕಮಲನಗರ ತಾಲೂಕಿನ ನಂದಿಬಿಜಲಗಾಂವ್‌ನ ಬ್ರಿಡ್ಜ್ ಒಡೆದು ಗ್ರಾಮಕ್ಕೆ ಹೊಕ್ಕಿದ್ದು, ಇಲ್ಲಿನ 10 ಸೇರಿದಂತೆ ಸುತ್ತಲಿನ ಗ್ರಾಮಗಳ ಒಟ್ಟು 30ಕ್ಕೂ ಹೆಚ್ಚು ಜಾನುವಾರುಗಳು ಸಾವನ್ನಪ್ಪಿವೆ ಎಂದು ಅಧಿಕಾರಿಗಳು ಅಂದಾಜಿಸಿದ್ದಾರೆ. ಜತೆಗೆ 500 ಕ್ಕೂ ಹೆಚ್ಚು ಹೆಕ್ಟೇರ್‌ಗಳಲ್ಲಿ ಬೆಳೆದಿದ್ದ ಬೆಳೆ ನೀರು ಪಾಲಾಗಿದೆ. ಚಿಕ್ಲಿ– ಮುರ್ಕಿ, ಠಾಣಾಕುಶನೂರ– ಸಂತಪೂರ ಮತ್ತು ತೋರಣಾ– ಔರಾದ ಮಾರ್ಗದ ಸೇತುವೆಗಳ ಮೇಲಿಂದ ಅಪಾಯದ ಮಟ್ಟದಲ್ಲಿ ನೀರು ಹರಿದು ಕೆಲ ಕಾಲ ಸಂಚಾರ ಸಂಪೂರ್ಣ ಬಂದ್ ಆಗಿತ್ತು. ಔರಾದ ತಾಲೂಕಿನ ಬೋಂತಿ ಗ್ರಾಮದ ಕರೆಯ ಒಡಲು ಒಡೆದು ಕೆಳ ಭಾಗದಲ್ಲಿರುವ ರೈತರ ಹೊಲಗಳಿಗೆ ನೀರು ನುಗ್ಗಿ ನೂರಾರು ಎಕರೆಯಲ್ಲಿದ್ದ ಬೆಳೆಗೆ ಹಾನಿಯಾಗಿದೆ. ಭಂಡಾರಕಮಠಾ ಮತ್ತು ಬಾವಲಗಾಂವ ಗ್ರಾಮದಲ್ಲಿನ ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ ಆಹಾರ ಪದಾರ್ಥಗಳು ಹರಿದುಕೊಂಡು ಹೋಗಿವೆ. ಸೇತುವೆಗಳ ಮೇಲಿಂದ ನೀರು ಹರಿದ ಹಿನ್ನಲೆ ಯನಗುಂದಾ–ಔರಾದ, ಸುಂಧಾಳ–ಔರಾದ, ಬೆಳಕುಣಿ–ಔರಾದ, ಕಮಲನಗರ–ಔರಾದ, ತೋರಣಾ–ಔರಾದ, ಮುದೋಳ–ಔರಾದ್ ಸೇರಿದಂತೆ ಇನ್ನಿತರ ಮಾರ್ಗಗಳಲ್ಲಿ ಸಂಚಾರ ಕಡಿತವಾಗಿ, ಪ್ರಯಾಣಿಕರು ಪರದಾಡಬೇಕಾಯಿತು. ಜಿಲ್ಲೆಯಲ್ಲಿ ಸೋಮವಾರ ಸಂಜೆಯೂ ಮಳೆ ಮುಂದುವರೆದಿದ್ದು, ರಾತ್ರಿಯಿಡಿ ಮಳೆಯಾಗುವ ಸಾಧ್ಯತೆ ಹೆಚ್ಚಿದೆ. ಜಿಲ್ಲೆಯ ಮಾಂಜ್ರಾದಲ್ಲಿ ನದಿ ನೀರಿನ ಹರಿವು ಸಹ ಹೆಚ್ಚಾಗಿದೆ. ಮಳೆ ನೀರು ಜತೆಗೆ ಮಹಾರಾಷ್ಟ್ರದ ಧನೆಗಾಂವ್ ಜಲಾಶಯದಿಂದ ಹೊರ ಬಿಡುತ್ತಿರುವ ಕಾರಣ ನದಿ ತಟದ ಗ್ರಾಮಗಳಲ್ಲಿ ನೆರೆ ಭೀತಿ ಆವರಿಸಿದೆ. ಈಗಾಗಲೇ ಜಿಲ್ಲಾಡಳಿತದಿಂದ ನದಿ ತಟದ ಗ್ರಾಮಗಳಲ್ಲಿ ಮುಂಜಾಗ್ರತೆ ವಹಿಸುವಂತೆ ಸೂಚನೆ ನೀಡಿದೆ. ಜಿಲ್ಲೆಯಲ್ಲಿ ಮುಂಗಾರು ಮಾರುತ ವಿಳಂಬದಿದಾಗಿ ಆತಂಕಕ್ಕೆ ಒಳಗಾಗಿದ್ದ ರೈತರು ಈಗ ಬೆಂಬಿಡದೆ ಸುರಿಯುತ್ತಿರುವ ಮಳೆಯಿಂದ ಬೆಳೆ ಕಳೆದುಕೊಳ್ಳುವ ಭೀತಿ ಎದುರಿಸುತ್ತಿದ್ದಾರೆ. ಸಾಲ ಮಾಡಿ ಭೂ ಒಡಲಿಗೆ ಬೀಜ ಮತ್ತು ಗೊಬ್ಬರ ಸುರಿದಿದ್ದಾರೆ. ಆರಂಭದಲ್ಲಿ ಮಳೆ ಕೊರತೆಯಿಂದ ಬೆಳೆ ಸುಟ್ಟು ಹೋಗಿದ್ದವು. ಈಗ ಅತಿಯಾದ ಮಳೆಯಿಂದ ಇರುವ ಬೆಳೆ ಸಹ ಮಣ್ಣಿನೊಂದಿಗೆ ಕೊಚ್ಚಿಕೊಂಡು ಹೋಗುತ್ತಿದೆ. ಕಟಾವಿಗೆ ಬಂದಿರುವ ಉದ್ದು, ಹೆಸರು ಮಣ್ಣು ಪಾಲಾಗಿದ್ದರೆ, ವಾಣಿಜ್ಯ ಬೆಳೆ ಕಬ್ಬು ಮತ್ತು ಸೋಯಾಬಿನ್ ಬೆಳೆಗೂ ಧಕ್ಕೆ ಆಗಿದೆ.

**ಬೀದರ ಜಿಲ್ಲೆಯ ತಾಲೂಕುಗಳಲ್ಲಿ 24 ಗಂಟೆಯಲ್ಲಿ ಸುರಿದ ಮಳೆ (ಮಿ.ಮೀನಲ್ಲಿ)**

ಔರಾದ 8.3 86.5,ಬೀದರ 8.1 21,ಭಾಲ್ಕಿ 6.3 43,ಬಸವಕಲ್ಯಾಣ 5.6 16.2,ಹುಮನಾಬದ್ 6.1 28,ಚಿಟಗುಪ್ಪ 4.8 7.7,ಕಮಲನಗರ 3.9 112.3,ಹುಲಸೂರ 5.1 26.5

# ಸೆಂಥಿಲ್ ಕೈವಾಡ:ಶಾಸಕ ಜನಾರ್ಧನ ರೆಡ್ಡಿ ಆರೋಪ

ಕೈಗೊಂಡಿತ್ತು.ಆದರೆ, ಧರ್ಮಸ್ಥಳದಂತಹ ಹಿಂದೂ ಧಾರ್ಮಿಕ ಸ್ಥಳಗಳಿಗೆ ಧಕ್ಕೆ ಬಂದಾಗ ಸರ್ಕಾರ ಯಾಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಪ್ರಶ್ನೆ ಮಾಡಿದ್ದಾರೆ. ಕೆಲವರು, ಇದು ಷಡ್ಯಂತ್ರ ಮಾಡಿದವರ ಓಲೈಕೆ ಮಾಡುವ ಸರ್ಕಾರದ ಪ್ರಯತ್ನವೇ ಎಂಬ ಅನುಮಾನ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ತಮಿಳುನಾಡಿನ ತಿರುವಲ್ಲೂರು ಕ್ಷೇತ್ರದ ಕಾಂಗ್ರೆಸ್ ಸಂಸದರಾಗಿರುವ ಸಸಿಕಾಂತ್ ಸೆಂಥಿಲ್, 2009ರಿಂದ 2019ರವರೆಗೆ ರಾಜ್ಯ ಸರ್ಕಾರದಲ್ಲಿ ಐಎಎಸ್ ಅಧಿಕಾರಿಯಾಗಿ ವಿವಿಧ ಹುದ್ದೆ ನಿಭಾಯಿಸಿದ್ದರು. ಐಎಎಸ್ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ 2020ರಲ್ಲಿ ಅವರು ಕಾಂಗ್ರೆಸ್ ಪಕ್ಷ ಸೇರಿ ಸಂಸದರಾಗಿದ್ದರು. 2019ರಲ್ಲಿ ರಾಜೀನಾಮೆ ನೀಡುವ ವೇಳೆ ಅವರು ದಕ್ಷಿಣ ಕನ್ನಡದ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದರು. 2017ರಿಂದ ಅವರು ದಕ್ಷಿಣ ಕನ್ನಡದ ಜಿಲ್ಲಾಧಿಕಾರಿಯಾಗಿದ್ದರು.

# ಲೋಕಾಯುಕ್ತರ ದಾಳಿ

ದಾಳಿ ಮಾಡಿದರು.ಲೋಕಾಯುಕ್ತ ಎಸ್‌ಪಿ ಸಿದ್ಧರಾಜು ಅವರ ನೇತೃತ್ವದಲ್ಲಿನ ತಂಡವು ಕಚೇರಿಯಲ್ಲಿನ ಎಲ್ಲ ತಾಲ್ಲೂಕುಗಳ ಪ್ರಗತಿ ಪರಿಶೀಲನೆಯ ದಾಖಲೆಗಳು, ವಿಭಾಗ ಮತ್ತು ಉಪ ವಿಭಾಗದ ಪರಿಶೀಲನೆ, ದಾಖಲೆಗಳು ಮುಂತಾದವುಗಳನ್ನು ಪರಿಶೀಲಿಸಿದರು. ಸುಮಾರು ಐದು ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿವೆ.

ಡಿವೈಎಸ್‌ಪಿ ಗೀತಾ ಬೇನಾಳ್, ಶೀಲವಂತ್ ಮತ್ತು ರಾಜಶೇಖರ ಹಳೆಗೋಧಿ, ಪಿಐ ಅಕ್ಕಮಹಾದೇವಿ, ಸಿಬ್ಬಂದಿಗಳಾದ ಪ್ರದೀಪ್, ಬಸವರಾಜ್, ಮಸೂದ್, ಯಮನೂರಪ್ಪ, ರಾಣೋಜಿ, ರಾಜೇಶ್, ಇಂಜಿನಿಯರ್ ಮತ್ತು ಅಧಿಕಾರಿಗಳು ಕಾರ್ಯಾಚರಣೆಯಲ್ಲಿ ತೊಡಗಿದರು.ಜೆಡಿಎಸ್ ಮುಖಂಡ ಕೃಷ್ಣಾರೆಡ್ಡಿ ಅವರು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದಲ್ಲಿನ ಅಕ್ರಮ, ಅವ್ಯವಹಾರ ಕುರಿತು ಆರೋಪಿಸಿದ ಹಿನ್ನೆಲೆಯಲ್ಲಿ ಲೋಕಾಯುಕ್ತರ ದಾಳಿ ಕುತೂಹಲ ಕೆರಳಿಸಿದೆ.

# ಬೆಳೆ ಹಾನಿ ಪ್ರದೇಶ ವೀಕ್ಷಣೆ

ಇದೇ ಸಂದರ್ಭದಲ್ಲಿ ಮಳೆಯಿಂದ ಹಾನಿಗೊಳಗಾದ ಮನೆಗಳನ್ನು ಸಹ ಪರಿಶೀಲಿಸಿ ತುರ್ತಾಗಿ ಸೂಕ್ತ ಕ್ರಮ ಕೈಗೊಳ್ಳಲು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ತಿಳಿಸಿದರು. ಕಂದಾಯ ಇಲಾಖೆಯ ಅಧಿಕಾರಿಗಳ ಸಭೆ ಕರೆದು ವಿಪತ್ತು ನಿರ್ವಹಣಾ ಕೆಲಸಗಳನ್ನು ಪ್ರಥಮಾದ್ಯತೆ ಮೇಲೆ ಮಾಡುವಂತೆ ಸೂಚಿಸಿದರು.

ಕಾಳಗಿಯಲ್ಲಿ ನಿರ್ಮಿಸಲಾಗಿರುವ ಚುನಾವಣಾ ಸ್ಟ್ರಾಂಗ್ ರೂಮ್ ವೀಕ್ಷಿಸಿದ ಜಿಲ್ಲಾಧಿಕಾರಿಗಳು ನಂತರ ಲೋಕೋಪಯೋಗಿ ಇಲಾಖೆಯಿಂದ ಕೊಡ್ಲಿ ಕ್ರಾಸ್ ನಲ್ಲಿನ ವಿವಿಧ ಕಾಮಗಾರಿಗಳು ಮತ್ತು ಕೋರವಾರದಿಂದ ವಚ್ಚಾದವರೆಗೆ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಾಮಗಾರಿ ಪರಿವೀಕ್ಷಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ನಿಗದಿತ ಸಮಯದಲ್ಲಿ ಕಾಮಗಾರಿಗಳನ್ನು ಮುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಹಾಯಕ ಆಯುಕ್ತರಾದ ಸಾಹಿತ್ಯ, ಪ್ರಭುರೆಡ್ಡಿ, ತಹಶೀಲ್ದಾರರಾದ ಸುಬ್ಬಣ್ಣ ಜಮಖಂಡಿ, ಪೃಥ್ವಿರಾಜ್, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತ ಸುಭಾಷ ಬಿರಾದಾರ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

# ಈದ್ ಮಿಲಾದ್ ಹಬ್ಬ ಆಚರಿಸೋಣ:ಎಸ್ಪಿ ಪ್ರದೀಪ ಗುಂಟಿ

ಪೊಲೀಸ್ ಅಧೀಕ್ಷಕರ ಕಛೇರಿಯಲ್ಲಿ ನಡೆದ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬ ಆಚರಣೆ ಹಿನ್ನೆಲೆಯಲ್ಲಿ ಸೌಹಾರ್ದತೆ ಸಭೆ ಉದ್ದೇಶಿಸಿ ಮಾತನಾಡಿದರು.

ದೇಶದಲ್ಲಿಯೇ ಅತ್ಯಂತ ದೊಡ್ಡ ಪ್ರಮಾಣದಲ್ಲಿ ಗಣೇಶ ಹಬ್ಬವನ್ನು ಆಚರಿಸುತ್ತಾರೆ. ನಮ್ಮ ಬೀದರ ಜಿಲ್ಲೆಯಲ್ಲಿ ಕೂಡ ಬಹಳ ಸಂಭ್ರಮ, ಸಡಗರ, ಸೌಹಾರ್ದತೆಯಿಂದ ಗಣೇಶ ಹಬ್ಬ ಆಚರಣೆ ಮಾಡಲಾಗುತ್ತದೆ. ಜಿಲ್ಲೆಯಲ್ಲಿ ಹಬ್ಬದ ಪ್ರಯುಕ್ತ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವುದು ತಮ್ಮ ಮೊದಲ ಆದ್ಯತೆಯಾಗಿದೆ. ಗಣೇಶ ಹಬ್ಬವನ್ನು ಅದ್ದೂರಿಯಾಗಿ, ಶಾಂತಿಯುತವಾಗಿ ಹಾಗೂ ಸೌಹಾರ್ದತೆಯಿಂದ ಆಚಾರಿಸೋಣ. ತಮ್ಮ ಇಲಾಖೆ ಯಾವಾಗಲೂ ಸಾರ್ವಜನಿಕರ ಸಹಾಯಕ್ಕೆ ಇರುತ್ತದೆ ಮತ್ತು ಸಾರ್ವಜನಿಕರು ಕೂಡ ತಮ್ಮ ನಿರ್ದೇಶನಗಳನ್ನು ಪಾಲನೆ ಮಾಡಬೇಕು ಎಂದರು.

ಹೆಚ್ಚು ಶಬ್ದ ಹೊಂದಿರುವ ಡಿಜೆ ಅಥವಾ ಧ್ವನಿ ವರ್ಧಕಗಳು ಬಳಸಕೂಡದು ಮತ್ತು ಸಮಯ ಪಾಲನೆ ಕಟ್ಟು ನಿಟ್ಟಾಗಿ ಪಾಲಿಸಬೇಕು ಹಾಗೂ ಪೋಲಿಸ್ ಇಲಾಖೆಯ 31 ಮಾರ್ಗ ಸೂಚಿಗಳನ್ನು ಪಾಲಿಸಬೇಕು. ಹಬ್ಬದ ನಿಮಿತ್ತವಾಗಿ ಧ್ವನಿ ವರ್ಧಕವನ್ನು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆವರೆಗೆ ಹಚ್ಚಬೇಕು ಮತ್ತು ವಿಸರ್ಜನೆ ದಿವಸ ಸಮಯ ಪಾಲನೆ ಬಹಳ ಮುಖ್ಯವಾಗಿದೆ ಎಂದರು. ಹಿಂದಿನ ವರ್ಷ ಆಗಿರುವ ತಪ್ಪುಗಳು ಈ ವರ್ಷ ಆಗದಂತೆ ನೋಡಿಕೊಳ್ಳಬೇಕು. ವಿಸರ್ಜನೆಯ ಮೆರವಣಿಗೆ ವೇಳೆ ಆಂಬುಲೆನ್ಸ್ , ಅಗ್ನಿಶಾಮಕ ಮತ್ತು ಇತರೆ ತುರ್ತು ವಾಹನಗಳಿಗೆ ದಾರಿ ಮಾಡಿಕೊಡಬೇಕು ಎಂದರು. ಪ್ರತಿಯೊಬ್ಬರ ಜೀವ ನಮಗೆ ಮಹತ್ವದಾಗಿದೆ. ಎಲ್ಲರನ್ನೂ ರಕ್ಷಣೆ ನೀಡುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದರು. ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಮತ್ತು ಅಧಿಕಾರಿಗಳು ನೀಡುವಂತಹ ಮಾರ್ಗ ಸೂಚಿಗಳನ್ನು ಪಾಲನೆ ಮಾಡುವುದು ಸಾರ್ವಜನಿಕರ ಕರ್ತವ್ಯವಾಗಿದೆ ಎಂದರು.

ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್ ಮಾತನಾಡಿ, ಜಿಲ್ಲೆಯಲ್ಲಿ ಹವಾಮಾನದ ವೈಪರೀತ್ಯ ಕಾಣುತ್ತಿದ್ದೇವೆ, ನಗರದಲ್ಲಿ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದು ಮತ್ತು ಎಲ್ಲರೂ ಒಂದಾಗಿ ಹಬ್ಬಗಳನ್ನು ಆಚಾರಿಸೋಣ ಎಂದರು.

ಗಣೇಶ ಮಂಡಳಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ ಗಾದಗಿ ಮಾತನಾಡಿ, ಬೀದರ ಜಿಲ್ಲೆ ಸೌಹಾರ್ದತೆಗೆ ಹೆಸರಾದ ಜಿಲ್ಲೆಯಾಗಿದೆ. ಈ ಸಲಾ ಕೂಡ ಗಣೇಶ ಹಬ್ಬವನ್ನು ಅದ್ದೂರಿಯಾಗಿ, ಶಾಂತಿಯುತವಾಗಿ, ಸೌಹಾರ್ದತೆಯಿಂದ ಮತ್ತು ಸಮಯ ಪಾಲನೆ ಹಾಗೂ ಪೋಲಿಸ್ ಇಲಾಖೆಯ ಮಾರ್ಗ ಸೂಚಿಗಳಂತೆ ಆಚರಿಸಲಾಗುವುದು ಎಂದರು.

ಗಣೇಶ ಮಂಡಳಿಯ ಕಾರ್ಯಾಧ್ಯಕ್ಷ ಬಾಬು ವಾಲಿ ಮಾತನಾಡಿ, ಜೆಸ್ಕಾಂ ಅವರು ವಿದ್ಯುತ್ ತೊಂದರೆ ಆಗದಂತೆ ಮತ್ತು ನಗರಸಭೆಯಿಂದ ಸ್ವಚ್ಛತೆ ಮತ್ತು ನೈರ್ಮಲ್ಯ ಸಮಸ್ಯೆ ಆಗದಂತೆ ಹಾಗೂ ರಸ್ತೆಗಳಲ್ಲಿ ನೀರು ನಿಲ್ಲದಂತೆ, ಸಾಂಕ್ರಾಮಿಕ ರೋಗಗಳು ಹರಡದಂತೆ ನೋಡಿಕೊಳ್ಳಬೇಕು ಎಂದರು.

ಶಾಹೀನ್ ಪಟೇಲ್ ಮಾತನಾಡಿ, ಜಿಲ್ಲೆಯಲ್ಲಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬವನ್ನು ಭಾವೈಕ್ಯತೆಯಿಂದ ಆಚಾರಿಸೋಣ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪುಜಾರಿ, ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ, ಡಿವೈಎಸ್ಪಿ ಶಿವನಗೌಡ ಪಾಟೀಲ, ಶಶಿ ಹೊಸಳ್ಳಿ, ನಂದಕುಮಾರ ವರ್ಮಾ, ಮುನ್ನಾ ಕೌನ್ಸರ್, ನಿಜಾಮುದ್ದೀನ್ ಸೇರಿದಂತೆ ಎಲ್ಲಾ ಧರ್ಮಗಳ ಮುಖಂಡರು ಉಪಸ್ಥಿತರಿದ್ದರು

# ಜವಳಿ ಪಾರ್ಕ್: ಪಾಟೀಲ್

ಭೂಮಿ ವಶಪಡಿಸಿಕೊಳ್ಳಲಾಗಿದೆ. ಈ ಜವಳಿ ಪಾರ್ಕ್ ಬಂದರೆ 1 ಲಕ್ಷ ಉದ್ಯೋಗ ಸಿಗಲಿದೆ ಎಂದು ಹೇಳಿದ್ದಾರೆ.

ಕೇಂದ್ರದ ಜೊತೆ ಒಪ್ಪಂದ ಮಾಡಿಕೊಳ್ಳಲಾಗಿದೆ. ನಮ್ಮ ಸರ್ಕಾರದಿಂದ ಜವಳಿ ಪಾರ್ಕ್ಗೆ 390 ಕೋಟಿ ರೂ. ಹಣ ಮೀಸಲು ಇಡಲಾಗಿದೆ. ಕೇಂದ್ರದ ಹಣ ಸಹಾಯದಿಂದ ಕಾಲಕ್ಕೆ ಸರಿಯಾಗಿ ಪಾರ್ಕ್ ನಿರ್ಮಾಣದ ಕೆಲಸ ಆಗಲಿದೆ. ರೈತರು ಗುಳೆ ಹೋಗೊದನ್ನ ತಡೆಯಲು ಕ್ರಮವಹಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

# ಮಹಿಳೆ; ಹತ್ಯೆ ಬಗ್ಗೆ ಸಾಕ್ಷಿ ನುಡಿದ ಪುತ್ರ

ಅದರಲ್ಲಿ ಅಪ್ಪನ ಶವವನ್ನು ಅಮ್ಮ ಹಾಕುತ್ತಿದ್ದುದನ್ನು ನಾನು ನೋಡಿದೆ ಎಂದು ಪೊಲೀಸರಿಗೆ ಬಾಲಕ ತಿಳಿಸಿದ್ದಾನೆ.

ಹಂಸರಾಜ್ ಕೊಲೆಯಾದ ವ್ಯಕ್ತಿ. ಆತನ ಹಿರಿಯ ಮಗ ಹರ್ಷಲ್, ಕೊಲೆಗೆ ಮೊದಲು ಮತ್ತು ನಂತರ ಕಿಶನ್‌ಗಢದಲ್ಲಿರುವ ತನ್ನ ಮನೆಯಲ್ಲಿ ಏನಾಯಿತು ಎಂಬುದನ್ನು ಬಹಿರಂಗಪಡಿಸಿದ್ದಾನೆ.

ನನ್ನ ತಂದೆ, ತಾಯಿ ಮತ್ತು ಚಿಕ್ಕಪ್ಪ (ಅವರ ಮನೆ ಮಾಲೀಕರ ಮಗ) ಒಟ್ಟಿಗೆ ಕುಡಿಯುತ್ತಿದ್ದರು. ನನ್ನ ತಾಯಿಯ ಬಳಿ ಕೇವಲ ಎರಡು ಪೆಗ್‌ಗಳು ಮಾತ್ರ ಇತ್ತು. ಆದರೆ ನನ್ನ ತಂದೆಯನ್ನು ಕೊಂದ ಚಿಕ್ಕಪ್ಪ ತುಂಬಾ ಕುಡಿದಿದ್ದರು. ಈ ವೇಳೆ ಅಪ್ಪ, ಅಮ್ಮನನ್ನು ಹೊಡೆಯುತ್ತಿದ್ದರು. ನನ್ನ ಚಿಕ್ಕಪ್ಪ ಮಧ್ಯಪ್ರವೇಶಿಸಲು ಮುಂದಾದರು. ಆದರೆ ನನ್ನ ತಂದೆ, 'ನೀನು ಅವಳನ್ನು ಉಳಿಸಿದರೆ, ನಾನು ನಿನ್ನನ್ನೂ ಕೊಲ್ಲುತ್ತೇನೆ' ಎಂದು ಕೂಗಾಡಿದರು. ಆಗ ತಂದೆಯ ಮೇಲೆ ಚಿಕ್ಕಪ್ಪ ಹಲ್ಲೆ ಮಾಡಲು ಮುಂದಾದರು ಎಂದು ಬಾಲಕ ಘಟನೆ ಬಗ್ಗೆ ವಿವರಿಸಿದ್ದಾನೆ.

ನಾನು ಎಚ್ಚರವಾದಾಗ, ನನ್ನ ತಂದೆ ಹಾಸಿಗೆಯ ಮೇಲೆ ಇರುವುದನ್ನು ನೋಡಿದೆ. ನಂತರ ನಾನು ಮತ್ತೆ ಮಲಗಿದೆ. ಆದರೆ ಮತ್ತೆ ಎಚ್ಚರವಾದಾಗ, ನಾನು ಚಿಕ್ಕಪ್ಪ ಮತ್ತು ನನ್ನ ತಾಯಿಯನ್ನು ನೋಡಿದೆ. ಮನೆ ಮಾಲೀಕರು ನನ್ನ ತಂದೆಯನ್ನು ಕೇಳಲು ಪ್ರಾರಂಭಿಸಿದರು. ಪೊಲೀಸರಿಗೆ ದೂರು ಕೊಡುವುದಾಗಿ ಬೆದರಿಕೆ ಹಾಕಿದರು. ಆಗ, ಚಿಕ್ಕಪ್ಪ ನಮ್ಮನ್ನು ಇಟ್ಟಿಗೆ ಗೂಡುಗೆ ಕರೆದೊಯ್ದರು ಎಂದು ತಿಳಿಸಿದ್ದಾನೆ.

ಇಟ್ಟಿಗೆಗೂಡಿನ ಮಾಲೀಕ ಕರೆ ಮಾಡಿ ದೂರು ನೀಡಿದ್ದರು. ವಿಚಾರಣೆ ವೇಳೆ ಬಾಲಕ ನಡೆದಿದ್ದೆಲ್ಲವನ್ನೂ ವಿವರಿಸಿದ್ದಾನೆ. ಡ್ರಮ್‌ನಲ್ಲಿ ತಂದೆಯ ದೇಹವನ್ನು ಯಾಕೆ ಹಾಕುತ್ತಿದ್ದೀರಿ ಎಂದು ಕೇಳಿದಾಗ, ನಿಮ್ಮಪ್ಪ ಸತ್ತಿದ್ದಾನೆಂದು ತಾಯಿ ವಿವರಿಸಿದ್ದಾಳೆ. ಮಹಿಳೆ ಮತ್ತು ಪ್ರಿಯಕರನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ, ದಿಂಬಿನಿಂದ ಉಸಿರುಗಟ್ಟಿಸಿ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆಂದು ಪೊಲೀಸರು ತಿಳಿಸಿದ್ದಾರೆ.

# ಇರಕಲ್ ಗಡ ರಸ್ತೆಗಳು

ಪ್ರಾಣ ಕೈಯಲ್ಲಿ ಹಿಡಿದು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ ಇಲ್ಲಿನ ರಸ್ತೆ ಇರಕಲ್ಲಗಡದಿಂದ ಮುಸಲಾಪುರ ವರೆಗೂ ದುರಸ್ತಿಯಾಗಬೇಕಿದ್ದು ಈ ಸಂಪೂರ್ಣ ಹದಗೆಟ್ಟ ರಸ್ತೆ ಯಾವಾಗ ಆಗುತ್ತದೋ ಎಂದು ಜನರು ಪ್ರತಿನಿತ್ಯ ಸಂಚರಿಸುವ ವಾಹನ ಸವಾರರು ಅಧಿಕಾರಿಗಳು ಹಾಗೂ ಮತ ನೀಡಿದ ಜನಪ್ರತಿನಿದಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ರಸ್ತೆ ತೆಗ್ಗು ದಿನ್ನೆಗಳಿಂದ ಕೂಡಿದ್ದರೂ ದುರಸ್ತಿ ಮಾಡಿಸುವಲ್ಲಿ ಅಧಿಕಾರಿಗಳು ಮತ್ತು ಶಾಸಕ, ಜನಪ್ರತಿನಿಧಿಗಳು ನಿರ್ಲಕ್ಷ್ಯ ತೋರುತ್ತಿದ್ದು ಇದರಿಂದಾಗಿ ಜನರು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ.

ರಸ್ತೆ ದುರಸ್ತಿ ಹಾಗೂ ಅಭಿವೃದ್ಧಿಗೆ ಪ್ರತಿವರ್ಷ ಸರ್ಕಾರ ಹಣ ನೀಡುತ್ತದೆಯೋ ಇಲ್ಲವೋ ಗೊತ್ತಿಲ್ಲ ರಸ್ತೆಗಳನ್ನು ನೆಪಮಾತ್ರಕ್ಕೆ ತಾತ್ಕಾಲಿಕವಾಗಿ ದುರಸ್ತಿ ಮಾಡುವುದರಿಂದ ಕೆಲವೇ ದಿನಗಳಲ್ಲಿ ಹಾಳಾಗುತ್ತದೆ. ಈ ರಸ್ತೆ ಅಭಿವೃದ್ಧಿ ಪಡಿಸಿದರೆ ಬಹಳಷ್ಟು ಜನರಿಗೆ ಅನುಕೂಲವಾಗುತ್ತದೆಜಿಲ್ಲಾ ಕೇಂದ್ರಕ್ಕೆ ತೆರಳುವಂತಾಗಿದೆ. ಇದೆ ರಸ್ತೆ ಮೂಲಕ ಭತ್ತ ಲಾರಿಗಳು ಹೆಚ್ಚಾಗಿ ಓಡಾಡುತ್ತಿದ್ದು ಮುಂಬರುವ ದಿನಗಳಲ್ಲಿ ಇನ್ನಷ್ಟು ಹಾಳಾಗುವ ಭೀತಿ ಎದುರಾಗಿದೆ. ಶೀಘ್ರದಲ್ಲಿ ರಸ್ತೆ ದುರಸ್ತಿ ಕಾರ್ಯ ಮಾಡಬೇಕು' ಎಂದು ಸಾಮಾಜಿಕ ಹೋರಾಟಗಾರ ಮಂಜುನಾಥ ಬೇವುರು ಆಗ್ರಹಿಸಿದ್ದಾರೆ.

ರಸ್ತೆ ಅಭಿವೃದ್ಧಿ ಪಡಿಸಿದರೆ ಬಹಳಷ್ಟು ಜನರಿಗೆ ಅನುಕೂಲವಾಗುತ್ತದೆ ಜಿಲ್ಲಾ ಕೇಂದ್ರಕ್ಕೆ ತೆರಳುವ ರಸ್ತೆ ಇದಾಗಿದ್ದು ಇದನ್ನು ಶೀಘ್ರದಲ್ಲಿ ದುರಸ್ತಿ ಮಾಡಬೇಕು ಇಂತಹ ಗುಂಡಿಗಳಿಂದ ವಾಹನ ಸವಾರರು ಹಲವು ಬಾರಿ ಬಿದ್ದು ಕೈ, ಕಾಲು ಮುರಿದುಕೊಂಡಿದ್ದಾರೆ ಇಂತಹ ಘಟನೆಗಳಿಂದ ದಿನನಿತ್ಯ ನೋಡಿ ಸಾಕಾಗಿದೆ ಕೂಡಲೇ ಈ ರಸ್ತೆಯನ್ನು ಅಭಿವೃದ್ಧಿ ಪಡಿಸಬೇಕು.

# ಜೆಜೆಬಿವೈ, ಎಸ್‌ಬಿವೈ ನೋಂದಣಿಗೆ 20 ರಿಂದ ಮೆಗಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆ. 19 : ಕೇಂದ್ರ ಸರಕಾರದ ಮಹತ್ವಾಕಾಂಕ್ಷಿಯೋಜನೆಗಳಾದ ಪ್ರಧಾನಮಂತ್ರಿಜೀವನ್‌ಜ್ಯೋತಿ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿಸುರಕ್ಷಾಬಿಮಾ ಯೋಜನೆಗಳ ನೋಂದಣಿಗೆ ಆಗಸ್ಟ 20 ರಿಂದ 25 ವರೆಗೆ ಮೆಗಾ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿಂದುಜರುಗಿದ ವಿವಿಧ ಬ್ಯಾಂಕ್ ಪ್ರತಿನಿಧಿಗಳ ಪ್ರಗತಿ ಪರಿಶಿಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಈ ಅಭಿಯಾನದಲ್ಲಿ ಪ್ರತಿಯೊಂದು ಬ್ಯಾಂಕ್ ಶಾಖೆಗಳಲ್ಲಿ ತಲಾ 100 ಫಲಾನುಭವಿಗಳ ನೋಂದಣಿಗೆ ಗುರಿ ಹೊಂದಲಾಗಿದ್ದು, ನೋಂದಣಿಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದರು. ಗ್ರಾಮ ಪಂಚಾಯತ ಮಟ್ಟದಲ್ಲಿ ಹಮ್ಮಿಕೊಂಡ ನೋಂದಣಿ ಅಭಿಯಾನದಲ್ಲಿ ಪಂಚಾಯತ ಮಟ್ಟದ ಅಧಿಕಾರಿಗಳ ಸಹಕಾರ ನೀಡಲು ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ಗೆ ಗ್ರಾಮ ಪಂಚಾಯತಿವಾರು ಅಭಿಯಾನ ನಡೆಸಲು ನಬಾರ್ಡನಿಂದ ಅನುಮೋದನೆ ಪಡೆದು–ಕೊಂಡಿದೆ. ಸಾಮಾಜಿಕ ಭದ್ರತಾ ಯೋಜನೆಯಡಿ ನೋಂದಣಿ ಮತ್ತು ಪ್ರಧಾನಮಂತ್ರಿಗಳ ಜನಧನ ಯೋಜನೆ ಖಾತೆಗಳನ್ನು ತೆರೆಯುವ ಬಗ್ಗೆ ಪದವಿ ಕಾಲೇಜುಗಳಲ್ಲಿ ಜಾಗೃತಿ ಅಭಿಯಾನ ಸಹ ಹಮ್ಮಿಕೊಳ್ಳಲಾಗುತ್ತಿದೆ. ಭಾರತೀಯ ಅಂಚೆ ಪಾವತಿ ಬ್ಯಾಂಕ್ ಶಾಖೆಗಳು ತಮ್ಮ ವ್ಯಾಪ್ತಿಯಲ್ಲಿ ಜಾಗೃತಿ ಶಿಬಿರ ನಡೆಸಲು ತಿಳಿಸಿದ ಅವರು ಮುಖ್ಯವಾಗಿ ಗೃಹಲಕ್ಷ್ಮೀ ಫಲಾನುಭವಿಗಳು, ಕೆಸಿಸಿ ರೈತರು, ಮುದ್ರಾ ಯೋಜನೆ ಫಲಾನುಭವಿಗಳು, ಎನ್.ಆರ್.ಎಲ್.ಎಂ, ಎಸ್‌ಎಚ್‌ಜಿ, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಬಿಸಿ ಊಟದ ಸಿಬ್ಬಂದಿಗಳು, ಕಟ್ಟಡ ಕೆಲಸಗಾರರು ಹಾಗೂ ನರೇಗಾ ಕೆಲಸಗಾರರನ್ನು ನೋಂದಣಿಗೆ ಗುರಿಯಾಗಿಟ್ಟುಕೊಳ್ಳಲು ತಿಳಿಸಿದರು.

> ಸರಕಾರದ ವಿವಿಧ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಹಮ್ಮಿಕೊಂಡ ಅಭಿಯಾನಗಳಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ 5 ಬ್ಯಾಂಕ್ ಶಾಖೆ ಮತ್ತು ಬ್ಯಾಂಕ್‌ಗಳಿಗೆ ಮೆಚ್ಚುಗೆ ಪತ್ರ ನೀಡಲಾಗುವುದು.
>
> ಶಶಿಧರ ಕುರೇರ, ಜಿ.ಪಂ ಸಿಇಓ

ಜೆಜೆಬಿಐ ಮತ್ತು ಎಸ್‌ಬಿವೈ ಯೋಜನೆಗಳ ಪ್ರಗತಿಗೆ ಈಗಾಗಲೇ 45 ದಿನಗಳ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಭಾರತೀಯ ಸ್ಟೇಟ್ ಬ್ಯಾಂಕ್ ಮತ್ತು ಮಹಾರಾಷ್ಟ್ರ ಬ್ಯಾಂಕ್, ಕೆನರಾ ಬ್ಯಾಂಕ್‌ಗಳು ಪ್ರಗತಿ ಸಾಧಿಸಿದ ಹಿನ್ನಲೆಯಲ್ಲಿ ಅಭಿನಂದನೆಗಳನ್ನು ಸಹ ಸಲ್ಲಿಸಿದರು. ಉಳಿದ ಬ್ಯಾಂಕ್‌ಗಳು ಇನ್ನು 10 ದಿನಗಳ ಅವಧಿಯಲ್ಲಿ ಪ್ರಗತಿ ಸಾಧಿಸಲು ಕ್ರಮವಹಿಸಬೇಕು. ಸರಕಾರ ಯೋಜನೆಗಳ ಅನುಷ್ಠಾನದಲ್ಲಿ ಬೇಜವಾಬ್ದಾರಿತನ ಸಲ್ಲದು. ನಿಮ್ಮ ಪ್ರವೃತ್ತಿ ಬದಲಾವಣೆ ಮಾಡಿಕೊಂಡು ನಿಗದಿಪಡಿಸಿದ ದಿನದಂದು ಪ್ರಗತಿ ಸಾಧಿಸಿ ತೋರಿಸಲು ಸೂಚಿಸಿದರು.

ಪ್ರಗತಿಯಲ್ಲಿ ಹಿಂದುಳಿದ ಬ್ಯಾಂಕ್‌ಗಳು ಮುಂದಿನ 10 ದಿನಗಳಲ್ಲಿ ಪ್ರಗತಿ ಸಾಧಿಸಿದ ಬಗ್ಗೆ ವರದಿ ನೀಡಬೇಕು. ಪ್ರಗತಿ ವರದಿಯ ಬಗ್ಗೆ ಬರುವ ಆಗಸ್ಟ 29 ರಂದು ಮತ್ತೆ ಸಭೆ ಕರೆಯಲಾಗುವುದು. ಪ್ರಗತಿ ಸಾಧಿಸದೇ ಇದ್ದಲ್ಲಿ ಸೂಕ್ತಕ್ರಮಕ್ಕಾಗಿ ಮೇಲಾಧಿಕಾರಿಗಳಿಗೆ ಪತ್ರ ಬರೆಯುವುದಾಗಿ ತಿಳಿಸಿದರು. ಆದ್ದರಿಂದ ಜವಾಬ್ದಾರಿಯನ್ನು ಅರಿತು ಕೆಲಸ ನಿರ್ವಹಿಸಬೇಕು. ಇಲ್ಲವಾದರೆ ಯೋಜನೆಗಳ ಸಮರ್ಪಕ ಅನುಷ್ಠಾನ ಸಾರ್ಥಯವಾಗುವದಿಲ್ಲ. ಇದನ್ನು ಅರಿವು ಕೆಲಸ ಮಾಡಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ನಬಾರ್ಡ ಬ್ಯಾಂಕ್‌ನ ಡಿಡಿಎಂ ಮಂಜುನಾಥ ರೆಡ್ಡಿ, ಜಿಲ್ಲಾ ಅಗ್ರಣಿ ಬ್ಯಾಂಕನ ವ್ಯವಸ್ಥಾಪಕ ರಾಜಶೇಖರ ಹೂಗಾರ ಸೇರಿದಂತೆ ವಿವಿಧ ಬ್ಯಾಂಕ್‌ನ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಏಷ್ಯಾ ಕಪ್ ಟೀಂ ಇಂಡಿಯಾ ಪ್ರಕಟ: ಸೂರ್ಯಕುಮಾರ್ ನಾಯಕ




ಮುಂಬೈ:ಅ.19:ಏಷ್ಯಾಕಪ್ 2025ರ ಟೂರ್ನಿಗಾಗಿ ಟೀಂ ಇಂಡಿಯಾ ಪ್ರಕಟಿಸಲಾಗಿದೆ. ಸೂರ್ಯಕುಮಾರ್ ಯಾದವ್ ತಂಡವನ್ನು ಮುನ್ನಡೆಸಲಿದ್ದಾರೆ. ಶುಭಮನ್ ಗಿಲ್ ಉಪನಾಯಕರಾಗಿದ್ದಾರೆ.

ಮಂಗಳವಾರ ಮಧ್ಯಾಹ್ನ ಏಷ್ಯಾಕಪ್‌ಗಾಗಿ ಭಾರತದ 15 ಸದಸ್ಯರ ತಂಡವನ್ನು ಘೋಷಿಸಲಾಯಿತು. ಶುಭಮನ್ ಗಿಲ್, ಜಸ್ಪ್ರೀತ್ ಬುಮ್ರಾ ಮತ್ತು ಸಂಜು ಸ್ಯಾಮ್ಸನ್ ತಂಡದಲ್ಲಿದ್ದಾರೆ. ಕುಲದೀಪ್ ಯಾದವ್, ವರುಣ್ ಚಕ್ರವರ್ತಿ ಮತ್ತು ಅಕ್ಷರ್ ಪಟೇಲ್ ಅವರನ್ನು ಸ್ಪಿನ್ನರ್‌ಗಳಾಗಿ ಆಯ್ಕೆ ಮಾಡಲಾಗಿದೆ.

ಸೆಪ್ಟೆಂಬರ್ 9 ರಂದು ಯುಎಇಯಲ್ಲಿ ಆರಂಭವಾಗುವ ಏಷ್ಯಾಕಪ್‌ನೊಂದಿಗೆ ಭಾರತವು ಮುಂದಿನ ಫೆಬ್ರವರಿಯಲ್ಲಿ ಪುರುಷರ ಟಿ20 ವಿಶ್ವಕಪ್‌ಗೆ ಸಿದ್ಧತೆ ಪ್ರಾರಂಭಿಸಲಿದೆ. ಒಂದು ದಿನದ ನಂತರ ಭಾರತ ತನ್ನ ಮೊದಲ ಪಂದ್ಯವನ್ನು ಆಡಲಿದೆ.

ಭಾರತ ತಂಡ: ಸೂರ್ಯಕುಮಾರ್ ಯಾದವ್(ನಾಯಕ), ಶುಭಮನ್ ಗಿಲ್(ಉಪನಾಯಕ), ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್, ಜಿತೇಶ್ ಶರ್ಮಾ (ಡಬ್ಲ್ಯುಕೆ), ಜಸ್ಪ್ರೀತ್ ಬುಮ್ರಾ, ಅರ್ಷ್‌ದೀಪ್ ಸಿಂಗ್, ವರುಣ್ ಚಕ್ರವರ್ತಿ, ಕುಲದೀಪ್ ಯಾದವ್, ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಹರ್ಷಿತ್ ರಾಣಾ, ರಿಂಕು ಸಿಂಗ್.

ಐದು ಸ್ಟ್ಯಾಂಡ್–ಬೈಗಳು: ಪ್ರಸಿದ್ಧ್ ಕೃಷ್ಣ, ವಾಷಿಂಗ್ಟನ್ ಸುಂದರ್, ರಿಯಾನ್ ಪರಾಗ್, ಧ್ರುವ್ ಜುರೆಲ್, ಯಶಸ್ವಿ ಜೈಸ್ವಾಲ್.

# ವಚನ ಸಾಹಿತ್ಯ ಕುರಿತು 7 ನೇಯ ವಿಶೇಷ ಉಪನ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಆ19 ಧರ್ಮಾ ಧರ್ಮಗಳಿಂದ ಬಂದ ದ್ರವ್ಯವು ಪುನ: ಅದೇ ಮಾರ್ಗದಲ್ಲಿ ವ್ಯಯವಾಗಿ ಹೋಗುತ್ತದೆ ಎಂದು ನಗರದ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ.ಬ್ರ.ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರಶ್ರಾವಣಮಾಸಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿಶಿವಾಚಾರ್ಯಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ 7ನೇ ವಿಶೇಷ ಉಪನ್ಯಾಸಮಾಲೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಅನ್ಯಾಯದಿಂದ ಸಂಪಾದಿತವಾದ ಹಣವು ಕೆಲವು ವರ್ಷಗಳವರೆಗೆ ಮಾತ್ರ ಇದ್ದು ಕೊನೆಗೆ ಸರ್ವವೆಲ್ಲವೂ ನಷ್ಟವಾಗಿ ಹೋಗುತ್ತದೆ ಧರ್ಮ ಅಧರ್ಮಗಳ ಮಾರ್ಗಗಳಿಂದ ಬಂದ ದ್ರವ್ಯವು ದೂದಕಾ ದೂದ. ಪಾನಿಕಾ ಪಾನಿ ಎಂಬ ಯುಕ್ತಿಗನುಸಾರವಾಗಿ ಧರ್ಮ ಮತ್ತು ಅಧರ್ಮ ಮಾರ್ಗ ಗಳೆರಡರಲ್ಲಿಯೂ ಅದು ವ್ಯಯವಾಗುತ್ತದೆ ಎಂದು ಆಶೀರ್ವಚನ ನೀಡಿದರು. ವಿಶೇಷ ಸನ್ಮಾನ ಕಲ್ಯಾಣ ಕರ್ನಾಟಕ ಬಾಗದ ಖ್ಯಾತ ಕಲಾವಿದರಾದ ಸೂರ್ಯಕಾಂತ ಬಿರಾದಾರ ಖಾನಾಪುರ ಅವರಿಗೆ ವಿಶೇಷ ಸನ್ಮಾನ ಮಾಡಿ ಆಶೀರ್ವದಿಸಲಾಯಿತು.

ಮುಖ್ಯ ಅತಿಥಿ ಲಕ್ಷ್ಮಿಪುತ್ರ ನಿಂಬಾಳ್ಕರ್ ಮಾತನಾಡಿ ಪೂಜ್ಯರು ಯಾವುದೇ ಒಂದು ಕಾರ್ಯಕ್ಕೆ ನಾವು ಸಿದ್ಧರಿದ್ದೇವೆ ಪೂಜ್ಯರು ಗವಿಮಠದಲ್ಲಿ ಜ್ಞಾನಾಮೃತ ಉಣಿಸುವಂತಹ ಹತ್ತು ಹಲವಾರು ಕಾರ್ಯಕ್ರಮ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿರುವುದು ನಮ್ಮೆಲ್ಲರಿಗೂ ಸಂತೋಷ ತಂದಿದೆ ನಾವು ಕೂಡ ಪೂಜ್ಯರ ಜೊತೆ ಇದ್ದೇವೆ ಎಂದು ನುಡಿದರು.

ಅಧ್ಯಕ್ಷತೆ ವಹಿಸಿದ್ದ ಕಲ್ಯಾಣ ನಾಡು ಗ್ರಾಮೀಣ ಜನಪದ ಕಲಾ ಸಂಘದ ಕಾರ್ಯಾಧ್ಯಕ್ಷರಾದ ವೀರಶೆಟ್ಟಿ ಮಲ್ಲಶೆಟ್ಟಿ ಮಾತನಾಡಿ ಘಟದಿಂದ ಮಠ ವಾಗಿ ಮಾಡಿರುವಂತಹ ಕೀರ್ತಿ ಅಭಿನವ ಪೂಜ್ಯರಿಗೆ ಸಲ್ಲುತ್ತದೆ.ಈ ಗವಿಮಠದಲ್ಲಿ ನಿರಂತರ ಭಜನೆ,ಪ್ರವಚನ, ಸತ್ಸಂಗ,ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವಂತಹ ಸಾಧಕರಿಗೆ ಸನ್ಮಾನ ಹಾಗೆ ಧಾರ್ಮಿಕ,ಶೈಕ್ಷಣಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಮಾಡುತ್ತಿರುವುದು ನಮ್ಮೆಲ್ಲರಿಗೂ ಸಂತೋಷ ತಂದಿದೆ ಮತ್ತು ನಮ್ಮ ಕಲಾ ತಂಡದವರಿಗೆ ಶ್ರೀಮಠ ತವರು ಮನೆ ಆಗಿದೆ ಎಂದು ಸಂತಸದಿಂದ ನುಡಿದರು.

ಅತಿಥಿಯಾಗಿ ಜಗನ್ನಾಥ ಪಾಟೀಲ ಚಿಕನಾಗಾಂವ್.

ಕಲ್ಯಾಣ ನಾಡು ಜಾನಪದ ಕಲಾಸಂಘದ ಅಧ್ಯಕ್ಷರಾದ ದಿಲೀಪ್ ದೇಸಾಯಿ. ಬಸವರಾಜ ಶಾಸ್ತ್ರಿ ಕಣಜೆ, ವಿಠ್ಠಲ ದೋಮೆ, ಶ್ಯಾಮ ಸುಂದರ ಗುಂಡುರೆ. ಶರಣಬಸಪ್ಪ ಅಲಗುಡೆ. ಶಿಕ್ಷಕ ಮಲ್ಲಿಕಾರ್ಜುನ ಅಲಗುಡೆ. ರಾಕೇಶ ಪುರವಂತ, ರಾಜು ರೆಡ್ಡಿ, ಬಸವಂತಪ್ಪ ಲವಾರೆ, ವಿಠ್ಠಲ ರಾಯಪ್ಪನೋರ, ಸಾಗರ ಮಾಲಗರ, ವೀರಶೇಟ್ಟಿ ಪಾಟೀಲ, ಶಿವಕುಮಾರ ಮುನ್ನೋಳಿ ಇನ್ನಿತರರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಕಲ್ಯಾಣ ನಾಡು ಜನಪದ ಕಲಾ ವೃಂದ ಸಂಘದ ಸಂಯುಕ್ತ ಆಶ್ರಯದಲ್ಲಿ ಹರ ಘರ್ ತಿರಂಗಾ ಅಭಿಯಾನದ ಮೂಲಕ ತಿರಂಗಾ ಮೇಳ ಮೇರವಣಿಗೆಗೆ ಪೂಜ್ಯ ಶ್ರೀ ಷ.ಬ್ರ.ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ನಗರಸಭೆಯ ಪೌರಾಯುಕ್ತರಾದ ರಾಜು ಡಿ.ಬಣಕಾರ ಚಾಲನೆ ನೀಡಿದರು. ಇಲ್ಲಿನ ಕೋಟೆಯಿಂದ ಗಾಂಧಿ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ಮುಖ್ಯ ರಸ್ತೆಯ ಮಾರ್ಗವಾಗಿ ಗವಿಮಠದವರೆಗೆ ದೇಶದ ಧ್ವಜವನ್ನು ಹಿಡಿದು ಜೈಘೋಶ ದೊಂದಿಗೆ ಅದ್ದೂರಿಯಾಗಿ ಮೆರವಣಿಗೆ ನಡೆಯಿತು. ತದನಂತರ ಗವಿಮಠದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ ಜನಪದ ಕಲಾ ತಂಡದವರಿಂದ ರಾಷ್ಟ್ರಗೀತೆಯೊಂದಿಗೆ ಸಂಗೀತೋತ್ಸವ ಕಾರ್ಯಕ್ರಮ ಜರುಗಿತು.



ಬಸವಕಲ್ಯಾಣ :– ಪವಿತ್ರ ಶ್ರಾವಣ ಮಾಸ ಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು 7 ನೇಯ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದಲ್ಲಿ ಮಹಿಳಾ ಗೋಷ್ಠಿಯಲ್ಲಿ ಹಣಮಂತವಾಡಿ (ಆರ್) ಶ್ರೀ ಮಹಾಲಕ್ಷ್ಮೀ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷರು ಹಾಗೂ ಸದಸ್ಯರಿಗೆ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಪ್ರಮಾಣ ಪತ್ರ ವಿತರಿಸಲಾಯಿತು. ಈ ಸಂದರ್ಭದಲ್ಲಿ ಇನ್ನಿತರರು ಉಪಸ್ಥಿತರಿದ್ದರು.

(ಮಲ್ಲಮ್ಮ ನುಡಿ ಚಿತ್ರ)

# ಕಲಬುರಗಿ ಜಿಲ್ಲೆಯ ಸ್ಥಗಿತಗೊಂಡ ಸಹಕಾರ ಸಂಘಗಳ ಸಮಾಪನೆಯ ಪ್ರಕಟಣೆ :

ಕಲಬುರಗಿ: ಜು 18 (ಕ.ವಾ.,) ಕಲಬುರಗಿ ಜಿಲ್ಲೆಯ ಸಹಕಾರ ಸಂಘಗಳ ಸದಸ್ಯರುಗಳಿಗೆ ಮತ್ತು ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಮಾರ್ಚ 31 ರಂದು 2025 ರಲ್ಲಿ ಇದ್ದಂತೆ ಒಟ್ಟು 33 ವಿವಿಧ ರೀತಿಯ ಸಹಕಾರ ಸಂಘಗಳ ಪೈಕಿ ಸೇಡಂ ಉಪ ವಿಭಾಗಕ್ಕೆ ಸಂಬಂಧಿಸಿದಂತೆ 14 ವಿವಿಧ ರೀತಿಯ ಸಹಕಾರ ಸಂಘಗಳು ಹಾಗೂ ಕಲಬುರಗಿ ಉಪ ವಿಭಾಗಕ್ಕೆ ಸಂಬಂಧಿಸಿದಂತೆ 19, ಹೀಗೆ 33 ವಿವಿಧ ರೀತಿಯ ಸಹಕಾರ ಸಂಘಗಳು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಅಡಿಯಲ್ಲಿ ನೊಂದಣಿಗೊಂಡು ಸಂಘದ ಬೈಲಾ ರಿತ್ಯ ಕಾರ್ಯನಿರ್ವಹಿಸದೆ ಸ್ಥಗಿತಗೊಂಡಿರುತ್ತವೆ. ಸದರಿ ಸ್ಥಗಿತಗೊಂಡ ಸಹಕಾರ ಸಂಘಗಳನ್ನು ಕಲಂ 72 ರ ಅಡಿ ಸಮಾಪನೆಗೊಳಿಸಲು ಕ್ರಮವಹಿಸಲಾಗುತ್ತಿದೆ ಎಂದು ಕಲಬುರಗಿ ಜಿಲ್ಲೆಯ ಸಹಕಾರ ಸಂಘಗಳ ಸಹಾಯಕ ಉಪ ನಿಬಂಧಕರು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.


**ಗೊಂಡ (ಕುರುಬ) ಸರಕಾರಿ ನೌಕರರ/ನಿವೃತ ನೌಕರರ ಪತ್ತಿನ ಸೌಹಾರ್ದ ಸಹಕಾರಿ ನಿ.,**
**ನ್ಯೂ ಸೋನಾರ ಮಾರ್ಕೆಟ್, ಗಂಜ ಏರಿಯಾ ಭಾಲ್ಕಿ –585328, ಬೀದರ ಜಿಲ್ಲೆ.**

**12ನೇ ಸಾಮಾನ್ಯ ಸಭೆಯ ನೋಟಿಸ್**

ದಿನಾಂಕ:11–08–2025

**ಆತ್ಮೀಯ ಸಹಕಾರಿ ಬಂಧುಗಳೇ,**
ದಿನಾಂಕ 14–09–2025ರ ರವಿವಾರ ರಂದು ಸಮಯ ಬೆಳಿಗ್ಗೆ 10:30 ಗಂಟೆಗೆ ಭಾಲ್ಕಿ ನಗರದ ಕನಕ ಭವನ ಉದಗೀರ ರಸ್ತೆ ಭಾಲ್ಕಿ ಯಲ್ಲಿ ಸಹಕಾರಿಯ ಅಧ್ಯಕ್ಷರಾದ ಶ್ರೀ ಶಿವಾಜಿ ದಂಡಿನ ಇವರ ಅಧ್ಯಕ್ಷತೆಯಲ್ಲಿ ಸಹಕಾರಿಯ 12ನೇ ವಾರ್ಷಿಕ ಮಹಾ ಸಭೆಯನ್ನು ಕರೆಯಲಾಗಿದೆ. ಸಹಕಾರಿಯ ಸದಸ್ಯರಾದ ತಾವು ಸದರಿ ಸಭೆಯಲ್ಲಿ ಸಮಯಕ್ಕೆ ಸರಿಯಾಗಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೊರಿದೆ.

**ಸಭೆಯಲ್ಲಿ ಚರ್ಚಿಸುವ ವಿಷಯಗಳು.**
1) 12ನೇ ಮಹಾಸಭೆಯ ನೋಟಿಸ್ ಓದಿ ದಾಖಲಿಸುವುದು.
2) 11ನೇ ಮಹಾಸಭೆಯ ನಡಾವಳಿ ಮತ್ತು ನಿರ್ಣಯಗಳನ್ನು ಓದಿ ದೃಢಿಕರಿಸುವುದು.
3) 2024–25ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಮತ್ತು ಆರ್ಥಿಕ ತಖ್ತೆಗಳನ್ನು ಅಂಗೀಕರಿಸುವ ಕುರಿತು.
4) 2024–25ನೇ ಸಾಲಿನ ವಾರ್ಷಿಕ ವರದಿಯ ಮಂಡನೆ.
5) 2025–26ನೇ ಸಾಲಿನ ಕ್ರೀಯಾ ಯೋಜನೆ ಅನುಮೊದನೆ.
6) 2025–26ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕ ಮಾಡುವ ಬಗ್ಗೆ.
7) 2024–25ನೇ ಸಾಲಿನ ಲಾಭ ವಿಂಗಡನೆ ಬಗ್ಗೆ.
8) 2024–25ನೇ ಸಾಲಿನ ಲಾಭಾಂಶ ವಿಂಗಡನೆ ಬಗ್ಗೆ.
9) ಸಹಕಾರಿ ಉಪವಿಧಿ(ಬೈಲಾ) ಸಮಗ್ರವಾಗಿ ತಿದ್ದುಪಡಿ ಮಾಡುವ ಬಗ್ಗೆ.
10) ಸಾಲದ ಮತ್ತು ಠೇವಣಿಗಳ ನಿಯಮಗಳನ್ನು ಮತ್ತು ಬಡ್ಡಿದರಗಳ ನಿಗದಿ ಮಾಡುವ ಬಗ್ಗೆ.
11) ಅಧ್ಯಕ್ಷರ ಅಪ್ಪಣೆಯ ಮೇರೆಗೆ ಇತರೆ ವಿಷಯಗಳು.

ವಂದನೆಗಳೊಂದಿಗೆ,

ಸೂಚನೆಗಳು:–
1) ಸಾಮಾನ್ಯ ಸಭೆಯಲ್ಲಿ ಭಾಗವಹಿಸುವ ಸದಸ್ಯರು ಸಹಕಾರಿಯ ಗುರುತಿನ ಚಿಟಿ ಕಡ್ಡಾಯವಾಗಿ ತರಬೇಕು.
2) ಸಹಕಾರಿಯ ವಿಷಯದ ಕುರಿತು ತಮ್ಮ ಪ್ರಶ್ನೆಗಳನ್ನು ಇದ್ದರೆ ದಿನಾಂಕ 01–09–2025ರ ಒಳಗಾಗಿ ಲಿಖಿತವಾಗಿ ಸಹಕಾರಿಗೆ ನೀಡಬೇಕು.

**ಆಡಳಿತ ಮಂಡಳಿಯ ಪರವಾಗಿ,**
**ಸಹಿ/–**
ಮುಖ್ಯ ಕಾರ್ಯನಿರ್ವಾಹಕರು. ಗೊಂಡ(ಕುರುಬ)
ಸರಕಾರಿ ನೌಕರರ ನಿವೃತ ನೌಕರರ ಪತ್ತಿನ
ಸೌಹಾರ್ದ ಸಹಕಾರಿ ನಿ., ಭಾಲ್ಕಿ.




ಬಸವಕಲ್ಯಾಣ :– ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ತಾಲೂಕಿನ ಅತಲಾಪುರ ಗ್ರಾಮದ ಸೂಚಿತ ಜ್ಞಾನೇಶ್ವರ ರಚಪನೋರವರ ಕೃಷ್ಣ ವೇಷ ಧರಿಸಿ ಗಮನ ಸೆಳೆದನು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :– ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಇಲ್ಲಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಖಾನಾಪುರ (ಕೆ) ಸಾರ್ಥಕ ವೀ. ಪಾಟೀಲ ರವರ ಕೃಷ್ಣನ ವೇಷ ಧರಿಸಿ ಗಮನ ಸೆಳೆದನು.

(ಮಲ್ಲಮ್ಮ ನುಡಿ ಚಿತ್ರ)

# ಸಾವಯವ ಗೊಬ್ಬರ ಬಳಕೆ ಮಾಡುವಂತೆ ರೈತರಿಗೆ ಮನವೊಲಿಸಿ: ಪ್ರಕಾಶ್ ವಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:–ಸಾವಯವ ಗೊಬ್ಬರ ಬಳಕೆಯಿಂದ ಆಗುವ ಅನುಕೂಲಗಳ ಕುರಿತು ರೈತರಿಗೆ ಜಾಗೃತಿ ಮೂಡಿಸಿ ಮನವೊಲಿಸಬೇಕೆಂದು ತಾಲೂಕ ಪಂಚಾಯತಿಯ ಆಡಳಿತಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಪ್ರಕಾಶ ವಿ ಹೇಳಿದರು.

ಕೊಪ್ಪಳ ತಾಲೂಕ ಪಂಚಾಯತಿಯಲ್ಲಿ 2025–26ನೇ ಸಾಲಿನ ಸಾಮಾನ್ಯಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಂಡು ನಿರ್ದೇಶನ ನೀಡಿದರು. ಮಿತಿ ಮಿರಿದ ರಾಸಾಯನಿಕ ಗೊಬ್ಬರ ಬಳಕೆಯಿಂದ ಬೆಳೆದ ಆಹಾರವನ್ನು ನಾವು ಸೇವಿಸುತ್ತಿರುವದರಿಂದ ಅನೇಕ ರೋಗಗಳಿಗೆ ತುತ್ತಾಗುತ್ತಿದ್ದೆವೆ. ಸಾವಯವ ಗೊಬ್ಬರ ಬಳಕೆಯತ್ತ ರೈತರು ಹೆಚ್ಚಿನ ಪ್ರಮಾಣದಲ್ಲಿ ಗಮನಹರಿಸಲು ರೈತರನ್ನು ಗುರುತಿಸಿ ಆದ್ಯತೆ ನೀಡಬೇಕೆಂದು ಕೃಷಿ ಮತ್ತು ತೋಟಗಾರಿಕೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು. ತೋಟಗಾರಿಕೆ ಬೆಳೆಗಳನ್ನು ಬೆಳೆಯುವಂತಹ ರೈತರಿಗೆ ಸಾವಯವ ಗೊಬ್ಬರದಿಂದ ಆಗುವ ಉಪಯೋಗಗಳ ಕುರಿತು ವ್ಯಾಪಕ ಪ್ರಮಾಣದಲ್ಲಿ ಜಾಗೃತಿ ಮೂಡಿಸಬೇಕೆಂದರು. ಪ್ರತಿ ಗ್ರಾಮದಲ್ಲಿ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಮೊದಲ ಹಂತದಲ್ಲಿ ಇಲಾಖೆ ವತಿಯಿಂದ ಸೌಲಭ್ಯಗಳನ್ನು ನೀಡುವ ಪೂರ್ವದಲ್ಲಿ ಸಾವಯವ ಗೊಬ್ಬರದ ಮಹತ್ವದ ಬಗ್ಗೆ ಅರಿವು ಮೂಡಿಸಬೇಕೆಂದರು.

ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಕೊಪ್ಪಳ ತಾಲೂಕಿನಲ್ಲಿ ವಿಪುಲ ಅವಕಾಶಗಳಿದ್ದು ಇಲಾಖೆ ವತಿಯಿಂದ ರೈತರಿಗೆ ಅವಶ್ಯವಿರುವ ಬೆಳೆ ಬೆಳೆಯಲು ಅಗತ್ಯ ಸೌಲಭ್ಯ ಕಲ್ಪಿಸಲು ನೆರವಾಗಬೇಕೆಂದರು. ಇದರಿಂದ ರೈತರು ಇಲಾಖೆ ಬಗ್ಗೆ ನಂಬಿಕೆ ಬರುವಂತೆ ಕಾರ್ಯನಿರ್ವಹಿಸಿರಿ ಇದರಿಂದ ತಾಲೂಕಿನಲ್ಲಿ ತೋಟಗಾರಿ–ಕೆ ಬೆಳೆಗಳನ್ನು ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಲೇಬಗೇರಿ, ಮತ್ತೂರು, ಇಂದರಗಿ, ಹೊಸಹಳ್ಳಿ ಗ್ರಾಮ ಪಂಚಾಯತಿಗಳಲ್ಲಿ ಮಂಗಗಳ ಹಾವಳಿ ಹೆಚ್ಚಾಗುತ್ತಿದ್ದು ಇದ–ರಿಂದ ಗ್ರಾಮಸ್ಥರಿಗೆ ಕಿರಿ ಕಿರಿ ಉಂಟಾಗುತ್ತಿರುವ ಕುರಿತು ಗ್ರಾಮ ಪಂಚಾಯತಿಯವರು ಸಭೆಯಲ್ಲಿ ಗಮನಕ್ಕೆ ತಂದರು. ಮಂಗಗಳ ಹಾವಳಿ ತಪ್ಪಿಸಲು ಅವುಗಳನ್ನು ಗ್ರಾಮ ಪಂಚಾಯತಿ ಹಾಗು ಅರಣ್ಯ ಇಲಾಖೆ ಜಂಟಿಯಾಗಿ ಅವುಗಳನ್ನು ಹಿಡಿದು ಸುರಕ್ಷಿತ ಪ್ರದೇಶಗಳಿಗೆ ಬಿಡುವಂತೆ ಅಧಿಕಾರಿಗಳಿಗೆ ತಾಲೂಕ ಪಂಚಾಯತಿಯ ಆಡಳಿತಾಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

ವಿವಿಧ ಇಲಾಖಾ ತಾಲೂಕ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿ ವರದಿಯನ್ನು ಸಭೆಯಲ್ಲಿ ಮಂಡಿಸಿದರು.

ಸಭೆಯಲ್ಲಿ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್, ಸಹಾಯಕ ಲೆಕ್ಕಾಧಿಕಾರಿ ರವಿಕುಮಾರ, ತಾಲೂಕ ಯೋಜನಾಧಿಕಾರಿ ರಾಜೇಸಾಬ ನದಾಫ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ, ತಾಲೂಕ ಮಟ್ಟದ ಅಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ ಮಾಡಲಾಯಿತು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ತಾಲೂಕಿನ ಹಳ್ಳಿಖೇದ (ಬಿ) ಪಟ್ಟಣದ ಜ್ಞಾನದೇವೇಂದ್ರ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ಬಾಲ ಸ್ವಾಸ್ಥ ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕಣ್ಣಿನ ತಪಾಸಣೆ, ಹಿಮೋಗ್ಲೋಬಿನ್ ತಪಾಸಣೆ ಸೇರಿದಂತೆ ವಿವಿಧ ತಪಾಸಣೆಯನ್ನು ವೈದ್ಯರಾದ ಸುರೇಖಾ ಹೂಗಾರ್, ಮೋನಿಕಾ ಮಿತ್ರ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ಮಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯ–ಕ್ಷೆ ಮಂಜುಳಾ ಎಸ್. ಗಂಗಾ, ಆರ್ ಬಿ ಎಸ್ ಕೆ ಸಿಬ್ಬಂದಿ ವರ್ಗದವರಾದ ಜೈಶ್ರೀ, ಭಾಗ್ಯಶ್ರೀ ಭಾಗವಹಿಸಿದ್ದರು.

# ಸಂಗೋಳಿ ರಾಯಣ್ಣ ಅಪ್ರತಿಮ ದೇಶಭಕ್ತ:ಭೀಮರೆಡ್ಡಿ ಸಿಂಧನಕೇರಾ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ದೇಶಕ್ಕೆ ಸ್ವಾತಂತ್ರ್ಯ ಪಡೆದುಕೊಳ್ಳಲು ಹಲವು ಮಹನೀಯರ ಹೋರಾಟ, ತ್ಯಾಗ, ಬಲಿದಾನವನ್ನು ಸ್ಮರಿಸಿಕೊಳ್ಳಬೇಕು. ದೇಶದ ರಕ್ಷಣೆಗೆ ದೃಢ ಸಂಕಲ್ಪ ಮಾಡಬೇಕು ಎಂದು ಆಶ್ರಯ ದೀಪ ಟ್ರಸ್ಟ್‌ನ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ ರವರು ಹುಮನಾಬಾದ ತಾಲ್ಲೂಕಿನ ಹುಡಗಿ ಗ್ರಾಮದ ಶ್ರೀ ಕರಿಬಸವೇಶ್ವರ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ನುಡಿದರು. ಅನೇಕ ಹುತಾತ್ಮರ ತ್ಯಾಗ ಬಲಿದಾನದ ಪ್ರತೀಕ. ನಮಗೆ ಸ್ವಾತಂತ್ರ್ಯ ದೊರೆತಿದೆ. ಸಂಗೋಳಿ ರಾಯಣ್ಣ ಅಪ್ರತಿಮ ದೇಶಭಕ್ತ. ಅವರ ಬದುಕು ಎಲ್ಲರಿಗೂ ಸ್ಫೂರ್ತಿಯಾಗಿದೆ. ಅತಿ ಕಿರಿಯ ವಯಸ್ಸಿನಲ್ಲೇ ಸಂಗೋಳ್ಳಿ ರಾಯಣ್ಣ ಸ್ವಾತಂತ್ರ್ಯ ಹೋರಾಟದಲ್ಲಿ ಧುಮುಕಿ ಬ್ರಿಟಿಷರಿಗೆ ಸಿಂಗಸ್ವಪ್ನರಾಗಿದ್ದರು. ನೇತಾಜಿ ಸುಭಾಷಚಂದ್ರ ಬೋಸ್ ಅವರಂತೆಯೇ ರಾಯಣ್ಣ ಹೆಸರು ಕೇಳಿದಾಕ್ಷಣ ಮೈ ಮನಸ್ಸು ರೋಮಾಂಚನವಾಗುತ್ತದೆ. ದೇಶಭಕ್ತಿ ಪುಟಿದೇಳುತ್ತದೆ ಎಂದು ಹೇಳಿದರು. ದೇಶಕ್ಕೆ ಸ್ವಾತಂತ್ರ್ಯ ಕರ್ನಾಟಕದ ಹೋರಾಟಗಾರರಲ್ಲಿ ಕಿತ್ತೂರು ಚೆನ್ನಮ್ಮ, ಸಂಗೋಳಿ ರಾಯಣ್ಣ, ಕಾರ್ನಾಡ್ ಸದಾಶಿವರಾವ್, ಕಮಲಾದೆ ವಿಚಟ್ಟೋಪಾಧ್ಯಾಯ, ಅಬ್ಬಕ್ಕ ರಾಣಿ,, ಮಂಡರಗಿ ಭೀಮರಾಯ ಮತ್ತು ಅನೇಕರ ತ್ಯಾಗ ಬಲಿದಾನದಿಂದ ಲಭಿಸಿದೆ ಎಂದರು.

ದೇಶ ಸೇವೆಗಾಗಿ ನಿಸ್ವಾರ್ಥವಾಗಿ ಪ್ರಾಣ ಅರ್ಪಿಸಿದ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ಸಲ್ಲಿಸುವ ಸಂದರ್ಭವಾಗಿದೆ. ನೀರು ಮಿತವ್ಯಯವಾಗಿ ಬಳಸಿ,ಅನವಶ್ಯಕವಾಗಿ ನೀರನ್ನು ಬಳಕೆ ಮಾಡಬಾರದು. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ. ಪರಿಸರದ ನಾಶ ದಿಂದಲೇ ಅನೇಕ ದುಷ್ಪರಿಣಾಮ ಎದುರಿಸುತ್ತಿದ್ದೆವೆ ಎಂದರು. ಹುಡಗಿ ಪಿಕೆಪಿಎಸ್ ಅಧ್ಯಕ್ಷ ಬಸವತೀರ್ಥಪ್ಪ ಸಿಂಧನಕೇರಾ ಮಾತನಾಡಿ, ವಿವಿಧತೆಯಲ್ಲಿ ಏಕತೆ ಇದ್ದರೆ ಭಾರತೀಯರು ಮೌಲ್ಯ ಹಾಗೂ ದೇಶದ ಘನತೆ. ಗೌರವ ಹೆಚ್ಚುವುದು.

ಇಂದಿನ ಮಕ್ಕಳೇ ಭವಿಷ್ಯತ್ತಿನ ಕಿರಣಗಳು ಅವರಲ್ಲಿ ಒಳ್ಳೆಯ ಸಂಸ್ಕಾರ ಸಂಪ್ರದಾಯ ಸಂಸ್ಕೃತಿ ಭವ್ಯ ಭಾರತ ದೇಶದ ಪರಿಕಲ್ಪನೆ ಮೂಡಿಸುವುದು ಇಂದಿನ ವಿದ್ಯಾರ್ಥಿಗಳಿಗೆ ಅಗತ್ಯ ಎಂದರು. ಶ್ರೀ ಕರಿಬಸವೇಶ್ವರ ಹಿರೇಮಠ ಸಂಸ್ಥಾನದ ವಿರೂಪಾಕ್ಷ ಶಿವಾಚಾರ್ಯರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಶಾಲೆಯ ಮುಖ್ಯ ಉಪಾಧ್ಯಯರಾದ ಕರಬಸಪ್ಪ ಒಳದೊಡ್ಡಿ, ಪ್ರೌಢ ಶಾಲೆಯ ಉಪಾಧ್ಯಯ ಜಗನಾಥ ಕೋರಿ, ರೂಪಾ, ಬಿ, ಮಂಜುಳಾ, ಎಸ್, ಮಂಗಲಾ , ಆರ್, ಸಂಗೀತ, ವಿ, ನಾಗಮಣಿ, ಎಸ್, ಪಂಕಜಾ , ಎನ್, ಅಶ್ವಿನಿ, ಎಸ್, ಶೋಭಾ, ಆರ್, ಮಲ್ಲಿಕಾರ್ಜುನ್, ಭೀ, ರೇಣುಕಾ, ಎಲ್, ಧನರಾಜ ವಿ, ಸುರೇಶ, ಮಠಪತ್ತಿ, ಸಂತೋಷ, ಎಮ್, ದೀಪಕ್, ಜನ್ನಾ, ಗಣಪತಿ, ಪವಾರ, ನಟರಾಜ, ಅನೀತಾ ಡಿ ಉಪಸ್ಥಿತರಿದ್ದರು.

# ನಗರ ಸ್ಥಳೀಯ ಸಂಸ್ಥೆಗಳ ವಿವಿಧ ತೆರಿಗೆ ಸಂಗ್ರಹಣೆ ಹಾಗೂ ವಸತಿ ಯೋಜನೆ ಪ್ರಗತಿ ಪರಿಶೀಲನಾ ಸಭೆ





ಕಲಬುರಗಿ: ಆ. 19– ಸೋಮವಾರದಂದು ಆಗಸ್ಟ 18 ರಂದು ಜಿಲ್ಲಾ ನಗರಾಭಿವೃದ್ಧಿ ಕೋಶ, ಪೌರಾಡಳಿತ ನಿರ್ದೇಶನಾಲಯ ಹಾಗೂ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಪಟ್ಟ ಜಿಲ್ಲೆಯೊ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ವಿವಿಧ ತೆ–ರಿಗೆ ಸಂಗ್ರಹಣೆ ಹಾಗೂ ವಸತಿ ಯೋಜನೆ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾಧಿಕಾರಿ ಬಿ. ಫೌ–ಜಿಯಾ ತರನ್ನುಮ್ ಅವರ ಅಧ್ಯಕ್ಷತೆಯಲ್ಲಿ ಜರುಗಿತ್ತು. ಮಹಾನಗರ ಪಾಲಿಕೆಯ ಆಯುಕ್ತರಾದ ಅವಿನಾಶ ಶಿಂಧೆ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನ್ನವರ್ ದೌಲಾ ನಗರ ಸ್ಥಳಿಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಕರವಸೂಲಿಗಾರರು ,ಕಂದಾಯ ಅಧಿಕಾರಿಗಳು, ಕಂದಾಯ ನಿರೀಕ್ಷಕರು ಉಪಸ್ಥಿತರಿದ್ದರು.

# ವಿಜೃಂಭಣೆಯಿಂದ ಜರುಗಿದ ನಂದಿ ಬಂಡಿ ಬಸವೇಶ್ವರ ರಥೋತ್ಸವ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:ಅ.19: ತಾಲೂಕಿನ ಹ್ಯಾಟಿ–ಮುಂಡರಗಿ ಗ್ರಾಮದ ಶ್ರೀ ನಂದಿ ಬಂಡಿ ಬಸವೇಶ್ವರ ರಥೋತ್ಸವವು ಇಂದು ಅಪಾರ ಸಂಖ್ಯೆಯ ಭಕ್ತರ ಮಧ್ಯೆ ಜರುಗಿತು. ಪ್ರತಿ ವರ್ಷ ಶ್ರಾವಣ ಮಾಸದ ಕೊನೆಯ ಸೋಮವಾರ ಜರುಗುವ ಈ ರಥೋತ್ಸವಕ್ಕೆ ತಾಲೂಕಿನ ಸುತ್ತು ಹತ್ತು ಹಳ್ಳಿಗಳ ಭಕ್ತರು ಮತ್ತು ವಿಜಯನಗರ, ಬಳ್ಳಾರಿ, ಗದಗ ಜಿಲ್ಲೆಯ ಭಕ್ತರು ಪಾಲ್ಗೊಳ್ಳುವರು. ಜಾತ್ರೆಯ ಪ್ರಯುಕ್ತ ಇಂದು ಪ್ರಾತ:ಕಾಲದಿಂದ ದೇವಸ್ಥಾನದಲ್ಲಿ ಪೂಜೆ ರುದ್ರಾಭಿಷೇಕ, ಧೀರ್ಘ ದಂಡ ನಮಸ್ಕಾರ ಇತ್ಯಾದಿ ಕಾರ್ಯಕ್ರಮ ಜರುಗಿದವು. ಜಾತ್ರೆಗೆ ಆಗಮಿಸಿದ ಭಕ್ತರೆಲ್ಲರಿಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಆಗಸ್ಟ್ 14 ರಿಂದ ಆರಂಭವಾದ ಜಾತ್ರೆಯ ಧಾರ್ಮಿಕ ವಿಧಿ ವಿಧಾನಗಳು, ಆ. 19 ರ ಮಂಗಳವಾರ ಸಾಯಂಕಾಲ ಭಕ್ತ ಹಿತ ಚಿಂತನ ಸಭೆ ಮತ್ತು ಸಂಗೀತ ಕಾರ್ಯಕ್ರಮ, ರಾತ್ರಿ ಮದ್ದು ಸುಡುವುದರ ಮುಖಾಂತರ ಜಾತ್ರೆ ಸಂಪನ್ನವಾಗುವುದೆಂದು, ಹ್ಯಾಟಿ–ಮುಂಡರಗಿ, ಮೆಳ್ಳಿಕೇರಿ ಹಾಗು ಲಾಚನಕೇರಿ ಗ್ರಾಮಗಳ ಶ್ರೀ ನಂದಿಬಂಡಿ ಬಸವೇಶ್ವರ ದೇವಸ್ಥಾನ ಸಮಿತಿಯು ಪ್ರಕಟಣೆಯಲ್ಲಿ ತಿಳಿಸಿದೆ.

# ಬಸವ ಸಂಸ್ಕೃತಿ ಅಭಿಯಾನ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆ 24 ರಿಂದ

ಬೀದರ. ಆ. 19 : ಸೆ. 3 ರಂದು ನಗರದಲ್ಲಿ ಜರುಗಲಿರುವ ಬಸವ ಸಂಸ್ಕೃತಿ ಅಭಿಯಾನ ಅಂಗವಾಗಿ ಅಭಿಯಾನ ಸಮಿತಿಯು ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಂಡಿದೆ.

ನಗರದ ಐ.ಎಂ.ಎ.ಹಾ???ನಲ್ಲಿ ಆಗಸ್ಟ್ 24 ರಂದು ಮಧ್ಯಾಹ್ನ 12ಕ್ಕೆ ಮುಕ್ತ ವಚನ ಕಂಠ ಪಾಠ ಸ್ಪರ್ಧೆ, ಆಗಸ್ಟ್ 25 ರಂದು ಮಧ್ಯಾಹ್ನ 12 ರಿಂದ 2 ರ ವರೆಗೆ ಚಿತ್ರಕಲಾ ಸ್ಪರ್ಧೆ ಹಾಗೂ ಆಗಸ್ಟ್ 27 ರಂದು ಮಧ್ಯಾಹ್ನ 1 ರಿಂದ 2 ರ ವರೆಗೆ ನಿಬಂಧ ಸ್ಪರ್ಧೆ ನಡೆಯಲಿದೆ ಎಂದು ಬೀದರ್ ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.

ವಚನ ಕಂಠ ಪಾಠ ಸ್ಪರ್ಧೆಯಲ್ಲಿ ಸರಿಯಾಗಿ ಹಾಗೂ ಸ್ಪಷ್ಟವಾಗಿ ಅತಿ ಹೆಚ್ಚು ವಚನ ಹೇಳಿದವರಿಗೆ ರೂ.10 ಸಾವಿರ ಪ್ರಥಮ, ರೂ.6 ಸಾವಿರ ದ್ವಿತೀಯ ಹಾಗೂ ರೂ.4 ಸಾವಿರ ತೃತೀಯ ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುವುದು. ಎಲ್ಲ ವಯೋಮಾನದವರು ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು. ಆಸಕ್ತರು ಆ. 23 ರ ರಾತ್ರಿ 8ರ ಒಳಗೆ ಬಾಬುರಾವ್ ದಾನಿ (ಮೊ: 9448568360), ಶಿವಶಂಕರ ಟೋಕರೆ(9341652131), ಲಕ್ಷ್ಮಿ ಜಿ.ಬಿರಾದಾರ(9845560692) ಅಥವಾ ಸಂಗಮೇಶ್ವರ ಜ್ಯಾಂತೆ(9535558131) ಅವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಬಹುದು ಎಂದು ಹೇಳಿದ್ದಾರೆ.

ಬಸವ ಸಂಸ್ಕೃತಿ ಆಧಾರಿತ 5 ರಿಂದ 10ನೇ ತರಗತಿ ಮತ್ತು ಪಿಯುಸಿಯಿಂದ ಪದವಿ ವರೆಗೆ



ಎರಡು ಪ್ರತ್ಯೇಕ ವಿಭಾಗಗಳಲ್ಲಿ ಚಿತ್ರಕಲಾ ಸ್ಪರ್ಧೆ ಜರುಗಲಿದೆ. 5 ರಿಂದ 10ನೇ ತರಗತಿ ವಿಭಾಗದ ವಿಜೇತರಿಗೆ ರೂ.5 ಸಾವಿರ ಪ್ರಥಮ, ರೂ.3 ಸಾವಿರ ದ್ವಿತೀಯ ಹಾಗೂ ರೂ.2 ಸಾವಿರ ತೃತೀಯ ಬಹುಮಾನ ಕೊಡಲಾಗುವುದು. ಪಿಯುಸಿಯಿಂದ ಪದವಿ ವಿಭಾಗದ ವಿಜೇತರಿಗೆ ರೂ.10 ಸಾವಿರ ಪ್ರಥಮ, ರೂ.6 ಸಾವಿರ ದ್ವಿತೀಯ ಮತ್ತು ರೂ.4 ಸಾವಿರ ತೃತೀಯ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದು ಎಂದು ತಿಳಿಸಿದ್ದಾರೆ.


ಸ್ಪರ್ಧೆಯಲ್ಲಿ ಭಾಗವಹಿಸ ಬಯಸುವವರು ಆಗಸ್ಟ್ 24ರ ರಾತ್ರಿ 8 ರ ಒಳಗೆ ಯೋಗೀಶ್ ಮಠದ (9242268227), ರೇವಣಕುಮಾರ ಸಿ. ಸೋಮಶೆಟ್ಟಿ (9964205723), ರಾಜಕುಮಾರ ಶಂಭು(9916384728), ಸ್ಫೂರ್ತಿ ಧನ್ನೂರ(7471119401) ಅಥವಾ ಶ್ರೀಕಾಂತ ಬಿರಾದಾರ(9901212095) ಅವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಬಹುದು ಎಂದು ಹೇಳಿದ್ದಾರೆ.

ಬಸವ ಸಂಸ್ಕೃತಿ ಆಧಾರಿತ ನಿಬಂಧ ಸ್ಪರ್ಧೆಯಲ್ಲಿ 10ನೇ ತರಗತಿಯಿಂದ ಪದವಿ ವರೆಗಿನ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ವಿಜೇತರಿಗೆ ರೂ. 10 ಸಾವಿರ ಪ್ರಥಮ, ರೂ.6 ಸಾವಿರ ದ್ವಿತೀಯ ಹಾಗೂ ರೂ. 4 ಸಾವಿರ ತೃತೀಯ ಬಹುಮಾನ ಮತ್ತು ಪ್ರಮಾಣ ಪತ್ರ ಕೊಡಲಾಗುವುದು. ಅಸಕ್ತರು ಯೋಗೇಂದ್ರ ಯದಲಾಪುರೆ (7019071385), ಉಮೇಶ ಗಾಯತೊಂಡೆ(9964324235), ರಾಜಕುಮಾರ ಕಮಠಾಣೆ (9341232946), ರೂಪಾ ಪಾಟೀಲ(9663283500) ಅಥವಾ ಶಿಲ್ಪಾ ಮಜಗೆ(7259868500) ಅವರನ್ನು ಸಂಪರ್ಕಿಸಿ ಹೆಸರು ನೋಂದಾಯಿಸಬಹುದು ಎಂದು ತಿಳಿಸಿದ್ದಾರೆ.

ಸ್ಪರ್ಧಾಳುಗಳು ಸ್ಪರ್ಧೆಗೆ 30 ನಿಮಿಷ ಮುಂಚೆ ನಿಗದಿತ ಸ್ಥಳದಲ್ಲಿ ಹಾಜರಿರಬೇಕು. ಸ್ಪರ್ಧೆಗಳಲ್ಲಿ ಭಾಗವಹಿಸುವ ಎಲ್ಲರಿಗೂ ಪ್ರಮಾಣ ಪತ್ರ ಕೊಡಲಾಗುವುದು. ನಿರ್ಣಾಯಕರ ತೀರ್ಪು ಅಂತಿಮ ಎಂದು ಹೇಳಿದ್ದಾರೆ.



ಕಮಲನಗರ :ತಾಲೂಕಿನ ನಂದಿಬಿಜಲಗಾಂವ ಗ್ರಾಮದಲ್ಲಿ ಭಾನುವಾರ ರಾತ್ರಿ ಧಾರಾ–ಕಾರ ಸುರಿದ ಮಳೆಯಿಂದ ಸಾವಿರಾರು ಎಕರೆ ಬೆಳೆಗಳು ನಾಶ ಹಾಗೂ ಮಳೆಯಲ್ಲಿ ಜಾನುವಾರುಗಳನ್ನು ನೀರುಪಾಲಾಗಿದ ಸ್ಥಳಕ್ಕೆ ಮಂಗಳವಾರ ಜಂಟಿ ಕೃಷಿ ನಿರ್ದೇಶಕರು ದೇವಿಕಾ ಆರ್, ಅವರು ಬೆಳೆ ಹಾನಿ ಬಗ್ಗೆ ಪರಿಶೀಲಿಸಿದರು.ಡಿ ಡಿ ಆನ್ಸರಿ,ತಾಲೂಕ ಕೃಷಿ ನಿರ್ದೇಶಕರು ಧೋಳಪ್ಪ, ಕೃಷಿ ಅಧಿಕಾರಿ ಆನಂದ್ ಹಾಗೂ ಗ್ರಾಮಸ್ಥರು.



ಭಾಲ್ಕಿ: ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ನಡೆದ ಸತ್ಕಾರ ಸಮಾರಂಭದಲ್ಲಿ ಕೆಎಲ್‌ಇ ಸಂಸ್ಥೆ ಬೀದರಿನ ನಿರ್ದೇಶಕಿ ಕ್ರಾಂತಿ ಬಸಪ್ಪಾ ಕಲವಾಡಿಕರ ರವರು ತಮ್ಮ ಜನ್ಮದಿನದ ನಿಮಿತ್ಯ ಉಭಯ ಶ್ರೀಗಳಾದ ನಾಡೋಜ ಡಾ। ಬಸವಲಿಂಗ ಪಟ್ಟದ್ದೇವರು, ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರಿಗೆ ಸನ್ಮಾನಿಸಿ ಗೌರವಿಸಿದರು. ಜಯರಾಜ ದಾಬಶೆಟ್ಟಿ, ಸಂಜೀವ ಕಲವಾಡಿಕರ್, ಕಿರಣಕುಮಾರ ಭಾಟಸಾಂಗವಿ, ಚಿರಂಜೀವ ಕಲವಾಡಿಕರ್ ಇದ್ದರು.

# ಆ.22ರಂದು ಬ್ರಹ್ಮಾಕುಮಾರಿಸ್ ಪಾವನಧಾಮದಲ್ಲಿ ಮಹಾ ರಕ್ತದಾನ ಅಭಿಯಾನ: ಬಿ.ಕೆ ಪ್ರತಿಮಾ ಬಹೆನ್‌ಜಿ

ಬೀದರ್: ಈ ತಿಂಗಳ 22ರಂದು ಜನವಾಡ ರಸ್ತೆಯಲ್ಲಿರುವ ಜೆ.ಪಿ ನಗರ ಕಾಲೋನಿಯಲ್ಲಿನ ಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮ ಅವರಣದಲ್ಲಿ ದಾದಿ ದಿ.ಪ್ರಕಾಶಮಣಿ ಅವರ 18ನೇ ಸ್ಮರಣೋತ್ಸವ ಅಂಗವಾಗಿ ವಿಶ್ವ ಬಂಧುತ್ವ ದಿನದ ಪ್ರಯುಕ್ತ ಮಹಾ ಮಹಾ ರಕ್ತದಾನ ಅಭಿಯಾನ ಆಯೋಜಿಸಲಾಗಿದೆ ಎಂದು ಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮದ ಸಂಚಾಲಕಿ ಬಿ.ಕೆ ಪ್ರತಿಮಾ ಬಹೆನ್‌ಜಿ ತಿಳಿಸಿದರು.

ಮಂಗಳವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಅಂದು ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 5 ಗಂಟೆ ವರೆಗೆ ಈ ಅಭಿಯಾನ ನಡೆಯಲಿದೆ. ಬ್ರಹ್ಮಾಕುಮಾರಿಸ್ ಸಮಾಜ ಸೇವಾ ವಿಭಾಗ, ಲೈನ್ಸ್ ಕ್ಲಬ್, ರೋಟ್ರಿ ಕ್ಲಬ್, ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ರೆಡ್ ಕ್ರಾಸ್ ಸಂಸ್ಥೆ ಹಾಗೂ ಜೆಮಿನಿ ಗ್ರಾಫಿಕ್ಸ್‌ಳ ಸಹಯೋಗದಲ್ಲಿ ಈ ಮಹಾ ಅಭಿಯಾನ ಜರುಗಲಿದೆ. ಈ ಕಾರ್ಯಕ್ರಮ ವಿಶ್ವದ ಎಲ್ಲ ಬ್ರಹ್ಮಾಕುಮಾರಿಸ್ ಕೇಂದ್ರಗಳಲ್ಲಿ ಈ ತಿಂಗಳ 21, 22, 23, 24ರ ವರೆಗೆ ಜರುಗಲಿದೆ ಎಂದರು.



ರಕ್ತದಾನ ಅಭಿಯಾನ 2025 ನಿಮ್ಮ ರಕ್ತ ಜೀವನದ ಉಡುಗೊರೆ ಇದು ಜೀವಗಳನ್ನು ಉಳಿಸಬಹುದು, ಭರವಸೆಯನ್ನು ಕಾಣಬಹುದು ಮತ್ತು ಅಪರಿಚಿತರನ್ನು ಒಂದುಗೂಡಿಸಬಹುದಾಗಿದೆ. ಯಾರಿಗಾದರೂ ಎರಡನೇ ಜೀವನ ಅವಕಾಶ ಸಿಗಲು ಕಾರಣರಾಗಿ ಎಂದರು.

ರಕ್ತದಾನ ಸುರಕ್ಷಿತವಾಗಿರಲು ಬಳಸುವ ಎಲ್ಲಾ ಉಪಕರಣಗಳು ಸೋಂಕು ಅಥವಾ ಹಾನಿಯ ಅಪಾಯದಿಂದ ಮುಕ್ತವಾಗಿರಬಲ್ಲವು. 18ರಿಂದ 60 ವರ್ಷದೊಳಗಿರುವ ಪ್ರತಿಯೊಬ್ಬರು ರಕ್ತದಾನ ಮಾಡಬಹುದು, ಕನಿಷ್ಠ 50 ಕೆಜಿ ತೂಕಕ್ಕಿಂತ ಮೇಲ್ಪಟ್ಟವರು ಮಾತ್ರ ರಕ್ತದಾನ ಮಾಡಬಹುದು.

ಉತ್ತಮ ಆರೋಗ್ಯವುಳ್ಳುವವರು ಮತ್ತು ಯಾವುದೇ ಸಾಂಕ್ರಾಮಿಕ ರೋಗಗಳಿಂದ ಮುಕ್ತವಾದವರು ಮಾತ್ರ ರಕ್ತದಾನ ಮಾಡಬಹುದಾಗಿದೆ. ಕನಿಷ್ಠ 12.5ಕ್ಕಿಂತ ಹೆಚ್ಚು ಹಿಮೋಗ್ಲೋಬಿನ್ ಹೊಂದಿದವರು, ನಾಡಿ ಮಿಡಿತ ನಿಮಿಷಕ್ಕೆ 50 ರಿಂದ 100 ಬಡಿತಗಳ ನಡುವೆ ಇರುವವರು, ರಕ್ತದೊತ್ತಡ ರಕ್ತದೊತ್ತಡ ಸಾಮಾನ್ಯ ಮಿತಿಯಲ್ಲಿರುವವರು, ದೇಹದ ಉಷ್ಣತೆ ತಾಪಮಾನ ಸಾಮಾನ್ಯದಲ್ಲಿರುವವರು ಮಾತ್ರ ರಕ್ತದಾನ ಮಾಡಬಹುದಾಗಿದೆ ಎಂದು ತಿಳಿಸಿದರು.

ರಕ್ತಕ್ಕೆ ಪರ್ಯಾಯವಿಲ್ಲ, ಪ್ರತಿ ಮೂರು ಸೆಕೆಂಡಿಗೆ ಯಾರಿಗಾದರೂ ರಕ್ತದ ಅವಶ್ಯಕತೆ ಇದ್ದರೆ ಇದು ಅತ್ಯಂತ ಮಹತ್ತರ ರೀತಿಯಲ್ಲಿ ಕಾರ್ಯ ಮಾಡಬಲ್ಲದು. ಅಪಘಾತ ಸಂಭವಿಸಿದಾಗ, ಶಸ್ತ್ರ ಚಿಕಿತ್ಸೆ ಮಾಡುವಾಗ, ಕ್ಯಾನ್ಸರ್ ಚಿಕಿತ್ಸೆಗಳ ಸಮಯದಲ್ಲಿ ಬದುಕುಳಿಯಲು ರಕ್ತವು ಹೆಚ್ಚಾಗಿ ಅಗತ್ಯವಾಗಿ ಬೇಕು. ಒಬ್ಬ ಮನುಷ್ಯನು ಇನ್ನೊಬ್ಬರಿಗೆ ನೀಡಬಹುದಾದ ಅತ್ಯಮೂಲ್ಯ ಕೊಡುಗೆ ಎಂದರೆ ರಕ್ತ ಮಾತ್ರ. ನಿಮ್ಮ ರಕ್ತದಾನದ ಮೂಲಕ ನೀವು ಇತರರಿಗೆ ಹೊಸ ಜೀವನ ನೀಡಬಹುದಾಗಿದೆ ಎಂದು ಹೇಳಿದರು.

ರಕ್ತದಾನ ಮಾಡುವುದರಿಂದ ನಮಗೆ ಸಂತೋಷ ದೊರೆ–ಯುತ್ತದೆ, ನಿಮ್ಮ ಕೊಲೆಸ್ಟ್ರಾಲ್ ಮಟ್ಟ ಕಡಿಮೆಯಾಗುವುದು, ಹೃದಯ ಕಾಯಿಲೆಗಳು ಕಡಿಮೆಯಾಗುವವು, ಕ್ಯಾನ್ಸರ್ ಸಂಭಾವನೆ ಕಡಿಮೆಯಾಗುವುದು, ರೋಗ ನಿರೋಧಕ ಶಕ್ತಿ ಹೆಚ್ಚಾಗುವುದು ಒಟ್ಟಾರೆ ರಕ್ತದಾನದಿಂದ ಈ ಎಲ್ಲ ಲಾಭಗಳಿವೆ ಎಂದರು. ರಕ್ತದಾನ ಮಾಡುವವರಿಗೆ ಪೌಷ್ಟಿಕಾಂಶವುಳ್ಳ ಪಾನಕ, ತಿಂಡಿ ಹಾಗೂ ಹಣ್ಣು ಹಂಪಲುಗಳು ನೀಡಲಾಗುವುದು. ರಕ್ತದಾನ ಮಾಡಿದವರಿಗೆ ಬ್ರಿಮ್ಸ್ ಆಸ್ಪತ್ರೆ ಹಾಗೂ ಬ್ರಹ್ಮಾಕುಮಾರಿ ಪಾವನಧಾಮದಿಂದ ಪ್ರಮಾಣ ಪತ್ರ ವಿತರಿಸಲಾಗುತ್ತದೆ. ಅದು ಮುಂದಿನ ಒಂದು ವರ್ಷದೊಳಗೆ ನಿಮ್ಮ ಕುಟುಂಬದವರಿಗೆ ರಕ್ತ ಅವಶ್ಯಕವಾಗಿದಲ್ಲಿ ರಕ್ತವು ಉಚಿತವಾಗಿ ನೀಡಲಾಗುತ್ತದೆ ಎಂದರು.

ಅಂದು ಬೆಳಿಗ್ಗೆ ಕಾರ್ಯಕ್ರಮ ಉದ್ಘಾಟನೆಯಾಗಲಿದ್ದು ಬ್ರಿಮ್ಸ್ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದ ಮುಖ್ಯಸ್ಥರಾದ ಡಾ ವೀರೇಂದ್ರ ಪಾಟೀಲ್, ರೋಟರಿ ಕ್ಲಬ್ ಕಲ್ಯಾಣ ಜೋನದ ಅಸಿಸ್ಟೆಂಟ್ ಗವರ್ನರ್ ಹಾವಶೆಟ್ಟಿ ಪಾಟೀಲ್, ಜಮಿನಿ ಗ್ರಾಫಿಕ್ಸ್‌ನ ವ್ಯವಸ್ಥಾಪಕ ನಿರ್ದೇಶಕರಾದ ಸುಭಾಷ ಸಾವಡೆ, ರೆಡ್‌ಕ್ರಾಸ್ ಸಂಸ್ಥೆಯ ಅಧ್ಯಕ್ಷ ಡಾ.ವಿದ್ಯಾ ಪಾಟೀಲ್, ಬೀದರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ ಬಿ ಎಸ್ ಬಿರಾದಾರ್, ರೋಟರಿ ಕ್ಲಬ್ ಇಂಟರ್‌ನ್ಯಾಷನಲ್ ಮುಖ್ಯಸ್ಥರಾದ ಡಾ ರಘು ಕೃಷ್ಣಮೂರ್ತಿ ಹಾಗೂ ಇತರರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು ಎಂದು ಪ್ರತಿಮಾ ಬಹೆನ್‌ಜಿ ವಿವರಿಸಿದರು.

ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ಮಾತನಾಡಿದರು. ಬ್ರಹ್ಮಾಕುಮಾರಿಸ್ ಪಾವನಧಾಮದ ಪ್ರವರ್ತಕಿ ಬಿ.ಕೆ ಮಂಗಲಾ ಬಹೆನ್ ಪತ್ರಿಕಾಗೋಷ್ಠಿಯಲ್ಲಿದ್ದರು.

# ಬಸ್ ನಿಲುಗಡೆಗೆ ಆಗ್ರಹಿಸಿ ಪ್ರತಿಭಟನೆ




ಮಲ್ಲಮ್ಮ ನುಡಿ

ಭಾಲ್ಕಿ:ಅ.19:ತಾಲ್ಲೂಕಿನ ಚಳಕಾಪೂರ ಗ್ರಾಮದ ಬಸವ ಸಂದೇಶ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಬಳಿ ಕೋರಿಕೆ ಮೇರೆಗೆ ಬಸ್ ನಿಲುಗಡೆಗೆ ಒತ್ತಾಯಿಸಿ ಬಸ್ ತಡೆದು ಸೋಮವಾರ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಮುಖರು,

ಕೋರಿಕೆ ಮೇರೆಗೆ ಬಸ್ ನಿಲುಗಡೆಗೆ ಬೋರ್ಡ್ ಹಾಕಿದ್ದರೂ ಕೂಡ ನಮ್ಮ ಶಾಲೆಯ ಹತ್ತಿರ ಬಸವಕಲ್ಯಾಣ ಡಿಪೋಗೆ ಸೇರಿದ ಬಸ್ ಬಸ್ ನಿಲ್ಲಿಸುತ್ತಿಲ್ಲ. ಇದರಿಂದ ಶಿಕ್ಷಕಿಂ–ಯರು, ವಿದ್ಯಾರ್ಥಿಗಳು ಎರಡು ಕಿಲೋಮೀಟರ್ ದೂರದಿಂದ ಶಾಲೆಗೆ ಮರಳಿ ನಡೆದು–ಕೊಂಡು ಬರಬೇಕಾದ ಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಸವಕಲ್ಯಾಣ ಡಿಪೋ ವ್ಯವಸ್ಥಾಪಕರಿಗೆ ದೂರವಾಣಿ ಮೂಲಕ ಮಾತನಾಡಿದಾಗ ಬಸ್ ನಿಲುಗಡೆಗೆ ವ್ಯವಸ್ಥೆ ಮಾಡುತ್ತೇವೆ ಎಂದು ಆಶ್ವಾಸನೆ ನೀಡಿದ್ದಾರೆ ಎಂದು ಪ್ರಮುಖರು ತಿಳಿಸಿದರು. ಬಸವ ಸಂದೇಶ ಶಾಲೆಯ ಅಧ್ಯಕ್ಷ ಹಣಮಂತಪ್ಪ ಸಿ. ಹುಲೆಪ್ಪನೋರ್, ಮುಖ್ಯಶಿಕ್ಷಕಿ ತಂಗೆಮ್ಮ ಎಸ್. ಮಚಕುರಿ, ಕನ್ನಡ ಸೇನಾ ಅಧ್ಯಕ್ಷ ಸುಭಾಷ ಕೆನಡೆ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಸರ್ಕಾರಿ ಶಾಲೆಗಳನ್ನು ಬಲಪಡಿಸಲು ಒತ್ತಾಯ

ಕಲಬುರಗಿ: ಆ.19: ಕಡಿಮೆ ದಾಖಲಾತಿ ಕಾರಣದಿಂದ ರಾಜ್ಯದಲ್ಲಿ ಒಂದೇ ಒಂದು ಸರ್ಕಾರಿ ಶಾಲೆಯನ್ನು ಮುಚ್ಚಿಲ್ಲ ಮತ್ತು ಭವಿಷ್ಯದಲ್ಲೂ ಯಾವುದೇ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ನಿನ್ನೆ ವಿಧಾನಸಭೆಯಲ್ಲಿ ಶಿಕ್ಷಣ ಸಚಿವರು ನೀಡಿದ ಹೇಳಿಕೆಯನ್ನು ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆ (ಎಐಡಿಎಸ್‌ಓ) ಕರ್ನಾಟಕ ಸ್ವಾಗತಿಸುತ್ತದೆ ಎಂದು ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ತುಳಜರಾಮ್ ಎನ್.ಕೆ., ಅವರು ತಿಳಿಸಿದ್ದಾರೆ.

ಸರ್ಕಾರಿ ಶಾಲೆಗಳನ್ನು ಮುಚ್ಚುವ ಅಥವಾ ವಿಲೀನಗೊಳಿಸುವ ಸರ್ಕಾರದ ಹಿಂದಿನ ನಿರ್ಧಾರವನ್ನು ಬಲವಾಗಿ ವಿರೋಧಿಸಿ, ರಾಜ್ಯಾದ್ಯಂತ ಎಐಡಿಎಸ್‌ಓ ಹಮ್ಮಿಕೊಂಡಿದ್ದ 50 ಲಕ್ಷ ಸಹಿ ಸಂಗ್ರಹ ಅಭಿಯಾನಕ್ಕೆ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಬುದ್ಧಿಜೀವಿಗಳು ಮತ್ತು ನಾಗರೀಕರು ಸೇರಿದಂತೆ ಲಕ್ಷಾಂತರ ಜನರು ಮುಂದೆ ಬಂದು ಬೆಂಬಲ ನೀಡಿದರು. ಇದು ಜನರ ಒಗ್ಗಟ್ಟಿನ ಪ್ರಯತ್ನದ ಮೂಲಕ ಜನ ಚಳವಳಿಗೆ ಸಂದ ಜಯ ಎಂದು



ನಾವು ಭಾವಿಸುತ್ತೇವೆ. ಈ ಹೋರಾಟದಲ್ಲಿ ಜನರ ಅಗಾಧ ಭಾಗವಹಿಸುವಿಕೆಯು ಇಂತಹ ಜನ ವಿರೋಧಿ ಕ್ರಮಗಳನ್ನು ಜಾರಿಗೆ ತರುವುದನ್ನು ಹಿಂತೆಗೆದುಕೊಳ್ಳುವಂತೆ ಸರ್ಕಾರವನ್ನು ಅವರು ಹೇಳಿಕೆಯಲ್ಲಿ ಒತ್ತಾಯಿಸಿದ್ದಾರೆ.

ಆದಾಗ್ಯೂ, ಕಡಿಮೆ ದಾಖಲಾತಿಯಿರುವ ಶಾಲೆಗಳನ್ನು ಮುಚ್ಚುವ ಮತ್ತು ವಿಲೀನಗೊಳಿಸುವ ಸರ್ಕಾರದ ಆದೇಶ ಇನ್ನೂ ಜಾರಿಯಲ್ಲಿದೆ. ಆದ್ದರಿಂದ, ಆದೇಶವನ್ನು ಅಧಿಕೃತವಾಗಿ ಹಿಂತೆಗೆದುಕೊಳ್ಳುವವರೆಗೂ ರಾಜ್ಯದ ವಿದ್ಯಾರ್ಥಿಗಳು ಮತ್ತು ಜನರು ಎಚ್ಚರದಿಂದ ಮತ್ತು ಒಗ್ಗಟ್ಟಾಗಿರುವಂತೆ ಮನವಿ ಮಾಡಿರುವ ಅವರು, ಹಾಗೆಯೇ, ಸರ್ಕಾರಿ

ಶಾಲೆಗಳನ್ನು ಬಲಪಡಿಸಲು ರಾಜ್ಯ ಸರ್ಕಾರವು

ಕೂಡಲೇ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಶಿಥಿಲಗೊಂಡಿರುವ 21,000ಕ್ಕೂ ಹೆಚ್ಚು ಶಾಲಾ ಕಟ್ಟಡಗಳ ದುರಸ್ತಿ ಮತ್ತು ಪುನರ್ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವಂತೆ, 61,000ಕ್ಕೂ ಹೆಚ್ಚು ಖಾಲಿ ಇರುವ ಬೋಧಕರ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಿಕೊಳ್ಳುವಂತೆ ಅವರು ಒತ್ತಾಯಿಸಿದ್ದಾರೆ.

# ಕಲೆಯು ವಾಸ್ತವಿಕ ಬದುಕಿನ ಪ್ರತಿಬಿಂಬ: ಯಡ್ರಾಮಿ

ಕಲಬುರಗಿ:ಆ.19:ಪ್ರತಿಯೊಬ್ಬರ ಜೀವನದಲ್ಲಿ ಕಲೆ ಪ್ರಮುಖ ಪಾತ್ರ ವಹಿಸುತ್ತದೆ. ಆ ಕಲೆ ನಮ್ಮ ವಾಸ್ತವ ಬದುಕಿನ ಪ್ರತಿಬಿಂಬವಾಗಿರುತ್ತದೆ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ್ ಯಡ್ರಾಮಿ ಅವರು ಹೇಳಿದರು. 186ನೇ ವಿಶ್ವ ಛಾಯಾಗ್ರಹಣ ದಿನದ ಅಂಗವಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಚಿತ್ರಕಲಾವಿದ ಖಾಜಾ ಪಟೇಲ್ ಸಾರಥ್ಯದ ಪಟೇಲ್ ಫೋಟೋ ಮತ್ತು ಆರ್ಟ್ ವರ್ಕ್ಸ್ ಭಂಕೂರ ಜಂಟಿ ಆಶ್ರಯದಲ್ಲಿ ನಗರದ ಕನ್ನಡ ಭವನದ ಕಲಾ ಸೌಧದಲ್ಲಿ ಮಂಗಳವಾರ ಏರ್ಪಡಿಸಿದ ಛಾಯಾಚಿತ್ರಗಳ ಪ್ರದರ್ಶನ ಹಾಗೂ ಕಾಯಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ



ಅವರು, ಚಿತ್ರಕಲೆ ನಾವು ಬದುಕುವ ರೀತಿ ನಿತಿ ಮತ್ತು ಪರಂಪರೆಯನ್ನು ಎತ್ತಿ ತೋರಿಸುತ್ತದೆ. ಮತ್ತು ಕಲಾಭಿರುಚಿ ಹೊಂದಿದ ವ್ಯಕ್ತಿ ಸುಂದರ ಬದುಕಿನ ಕ್ಷಣಗಳನ್ನು ಅನಾವರಣಗೊಳಿಸುತ್ತಾನೆ. ಅದರಂತೆಯೇ ಬದುಕು ಕಟ್ಟಿ–ಕೊಂಡು ಮಾದರಿಯಾಗುತ್ತಾನೆ. ಅಂಥ ಶಕ್ತಿ ಕಲೆಗಳಿಗೆ ಇದೆ ಎಂದರು. ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ಮಾತನಾಡಿ, ಸಮಾಜದಲ್ಲಿ ಕಲಾವಿದರು ಉಳಿದರೆ ಕಲೆ ಉಳಿಯುತ್ತದೆ. ಅಂಥ ಚಿತ್ರಕಲಾವಿದರು ಈ ಭಾಗದಲ್ಲಿ ಸಾಕಷ್ಟು ಜನರಿದ್ದರೂ ಸೂಕ್ತ ವೇದಿಕೆಗಳಿಲ್ಲದೆ ವಂಚಿತರಾಗಿದ್ದಾರೆ. ಇಂದು ಕಲೆ ಸಾಹಿತ್ಯ, ಸಂಅಸ್ಕೃತಿ ಉಳಿಸಿ ಬೆಳೆಸುವಲ್ಲಿ ಕಲಾವಿದರ ಪಾತ್ರ ಹಿರಿದಾಗಿದೆ. ಅವರಿಗೆ ಸೂಕ್ತ ವೇದಿಕೆ ಕೊಟ್ಟು ಪ್ರೋತ್ಸಾಹಿಸುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತು ತಮ್ಮ ರಚನಾತ್ಮಕ ಕಾರ್ಯಕ್ರಮಗಳು ಹೊಸ ದಿಕ್ಕಿನೆಡೆಗೆ ಕೊಂಡೊಯ್ಯಲಾಗುತ್ತಿದೆ ಎಂದರು. ಚಿತ್ರ ಕಲಾವಿದ ಮಹ್ಮದ್ ಅಯಾಜೋದ್ದೀನ್ ಪಟೇಲ್ ಅವರು ಮಾತನಾಡಿ, ವ್ಯಕ್ತಿತ್ವ ಕಟ್ಟಿಕೊಳ್ಳಲು ಕಲೆಗೆ ನೆಲೆ ಬಹಳ ಮುಖ್ಯ. ಮತ್ತು ಆ ಕಲೆಗೆ ಸೂಕ್ತ ವೇದಿಕೆ ಸಿಕ್ಕಾಗ ಹೆಚ್ಚಿನ ಬೆಲೆ ಬರುತ್ತದೆ. ಅಂಥ ಗೌರವದ ಬೆಲೆ ಕಲೆಯಿಂದ ದೊರೆಯುತ್ತದೆ. ಇಂಥ ಛಾಯಾಚಿತ್ರಗಳ ಪ್ರದರ್ಶನಗಳು ಏರ್ಪಡಿಸುವ ಮೂಲಕ ಕಲಾವಿದರಿಗೆ ಮತ್ತಷ್ಟು ಪ್ರೋತ್ಸಾಹಿಸಿದಂತಾಗಿದೆ ಎಂದರು.

# ಡಿ ದೇವರಾಜು ಅರಸು ಜಯಂತಿ ಆಚರಣೆಗೆ ತಾಲೂಕ ಆಡಳಿತ ಅವಮಾನಿಸಿದೆ:ಕ್ರಮಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರ.ಆ.19:ಅಗಸ್ಟ20ರಂದು ನಡೆಯಲಿರುವ ಡಿ ದೇವರಾಜು ಅರಸು ಜಯಂತಿ ಆಚರಣೆಗೆ ತಾಲೂಕ ಆಡಳಿತ ಅವಮಾನಿಸಿದೆ ಎಂದು ಆರೋಪಿಸಿ ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟೆ ಅವರಿಗೆ ತಾಲೂಕ ಗಂಗಾಮತಸ್ಥ ಸಮಾಜದ ಅಧ್ಯಕ್ಷ ಅಮರೇಶ ಕಲ್ಲೂರ ಮನವಿ ಸಲ್ಲಿಸಿದ್ದಾರೆ.

ನಿನ್ನೆ ದಿನಾಂಕ18–8–2025 ರಂದು ತಾಲೂಕ ಆಡಳಿತದ ವತಿಯಿಂದ ಪೂರ್ವಭಾವಿ ಸಭೆ ನಡೆಸಲು 14ರಂದು ತಹಶೀಲ್ದಾರರು ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ನೋಟಿಸ್ ಹೊರಡಿಸಿದ್ದು,ಆದರೆ ಹಿಂದುಳಿದ ವರ್ಗಗಳ ವ್ಯಾಪ್ತಿಗೆ ಒಳಪಡುವ ಸುಮಾರ 25 ಜಾತಿಯ ಜನ ಲಿಂಗಸಗೂರಲ್ಲಿದ್ದು ಆ ಸಮಾಜಗಳ ಮುಖಂಡರನ್ನು ಆಹ್ವಾನಿಸದೇ ಸಭೆ ನಡೆಸಿದ್ದು ಅಲ್ಲದೆ ಸಭೆಯಲ್ಲಿ ಕೂಡ ಎಲ್ಲ ಇಲಾಖೆಯ ತಾಲೂಕ ಮಟ್ಟದ ಅಧಿಕಾರಿಗಳು ಸಹ ಭಾಗವಹಿಸದೆ 3–4 ಜನ ತಾಲೂಕ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದು ಕೇವಲ ಬಿಸಿಎಂ ಇಲಾಖೆಯ ಅಧಿಕಾರಿ ಹಾಗೂ ವಾರ್ಡನಗಳು ಮಾತ್ರ ಸೇರಿ ಸಭೆ ನಡೆಸಿದ್ದಾರೆ,ಕಾರಣ ಧೀಮಂತ ನಾಯಕ ಮಾಜಿ ಮುಖ್ಯ ಮಂತ್ರಿ ಡಿ ದೇವರಾಜು ಅರಸು ಅವರ ಜಯಂತಿ ಆಚರಣೆಗೆ ನಡೆದ ತಾಲೂಕ ಆಡಳಿತದ ಪೂರ್ವಭಾವಿ ಸಭೆಗೆ ಹಿಂದುಳಿದ ಸಮಾಜಗಳ ಮುಖಂಡರನ್ನು ಆಹ್ವಾನಿಸದೆ ಸಭೆ ನಡೆಸಿ ಅವಮಾನಿಸಿದ ತಹಶೀಲ್ದಾರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕ ಅಧಿಕಾರಿಗಳು ಸೇರಿದಂತೆ ಸಭೆಯಲ್ಲಿ ಭಾಗವಹಿಸದೇ ಇರುವ ಇತರೆ ತಾಲೂಕ ಅಧಿಕಾರಿಗಳನ್ನು ಈ ಕೂಡಲೇ ಅಮಾನತ್ತುಮಾಡುವಂತೆ ಒತ್ತಾಯಿಸಿ ತಾಲೂಕ ಗಂಗಾಮತಸ್ಥ ಸಮಾಜದ ತಾಲೂಕ ಅಧ್ಯಕ್ಷ ಅಮರೇಶ ಕಲ್ಲೂರ ಅವರು ಸಲ್ಲಿಸಿದ ಮನವಿಯಲ್ಲಿ ಒತ್ತಾಯಿಸಿದ್ದಾರೆ.

# ರಾಸಾಯನಿಕಯುಕ್ತ ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಇನ್ನಿತರ ನೈಸರ್ಗಿಕ ಜಲ ಮೂಲಗಳಿಗೆ ವಿಸರ್ಜನೆ ನಿಷೇಧಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆಗಸ್ಟ್19–ಪ್ರತಿ ವರ್ಷದಂತೆ ಈ ಬಾರಿಯೂ ಸ್ವರ್ಣಗೌರಿ ಮತ್ತು ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬ ಸಮೀಪಿಸುತ್ತಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಪಿ.ಓ.ಪಿ (ಪ್ಯಾಸ್ಟರ್ ಆಫ್ ಪ್ಯಾರಿಸ್) ಮತ್ತು ರಾಸಾಯನಿಕಯುಕ್ತ ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ/ಬಾವಿ ಹಾಗೂ ಇನ್ನಿತರ ನೈಸರ್ಗಿಕ ಜಲ ಮೂಲಗಳಿಗೆ ವಿಸರ್ಜಿಸುವುದು ಸಂಪ್ರದಾಯವಾಗಿದ್ದು,ಇದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಮಾಡುವುದಲ್ಲದೆ, ಪ್ರಾಣಿ, ಪಕ್ಷಿ ಮತ್ತು ಇತರೆ ಜಲಚರ ಜೀವಕ್ಕೆ ಅಪಾಯವಾಗುತ್ತಿದೆ ಮತ್ತು ಸಾರ್ವಜನಿಕರ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುತ್ತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಸರ್ಕಾರದ ಆದೇಶ ಸಂಖ್ಯೆ ಅಪಜೀ 134 ಇಎನ್‌ಜಿ 2023, ದಿನಾಂಕ: 15–09–2023 ರಲ್ಲಿ ರಾಜ್ಯ ವ್ಯಾಪ್ತಿಯೊಳಗಿನ ಕಡಲು ಅಥವಾ ಸಮುದ್ರ ಮತ್ತು ರಾಜ್ಯದ ನೀರಿನ ಇತರೆ ಮೂಲಗಳಾದ ನದಿ. ತೊರೆ, ಹಳ್ಳ, ಕೆರೆ, ಬಾವಿ, ಇವುಗಳ ನೀರು ಮಾಲಿನ್ಯಗೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ಅದೇ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಇತರ ವಿಗ್ರಹಗಳ ಉತ್ಪಾದನೆ,ಮಾರಾಟ ಹಾಗೂ ಅವುಗಳನ್ನು ಮೇಲೆ ತಿಳಿಸಿದ ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ರಾಜ್ಯಾದ್ಯಂತ ಸಂಪೂರ್ಣವಾಗಿ ಸರ್ಕಾರವು ಈಗಾಗಲೇ ನಿಷೇಧಿಸಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ದಿನಾಂಕ: 06–02–2024 & 19–06–2024 ಪ್ಲಾಸ್ಟರ್ ಆಫ್ ಪ್ಯಾರಿಸ್ ನಿಂದ ಮಾಡಿದ ಗಣೇಶ ವಿಗ್ರಹಗಳ ತಯಾರಿ–ಕೆ ಮತ್ತು ಮಾರಾಟದ ನಿಷೇಧವನ್ನು ಎತ್ತಿಹಿಡಿದಿರುತ್ತದೆ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಹಾಗೂ ಮುಂಬರುವ ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಿರುವ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ಅದೇ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಇತರ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಾದ ವಿಗ್ರಹಗಳ ಉತ್ಪಾದನೆ,ಮಾರಾಟ ಮತ್ತು ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಉಲ್ಲಂಘಿಸಿದವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು.

ಪರಿಸರ ನಾಶದಿಂದ ಹಲವಾರು ಸಸ್ಯ ಪ್ರಾಣಿ ಪ್ರಭೇದಗಳು ನಶಿಸಿಹೋಗಿವೆ. ಹಲವಾರು ಪ್ರಭೇದಗಳು ಆಪತ್ತಿನ ಅಂಚಿನಲ್ಲಿವೆ. ಪರಿಸರದ ಮೇಲೆ ಮಾನವನ ಅನಗತ್ಯಕ್ಷೇಪದಿಂದ ಹಲವಾರು ಆಪತ್ತುಗಳನ್ನು ಎದುರಿಸಬೇಕಾಗಿದೆ.ಗಣೇಶನ ಮೂಲದ ಬಗ್ಗೆ ಪುರಣಾದಲ್ಲಿ ತಿಳಿಸಿದಂತೆ ಪಾರ್ವತಿಯ ಬೆವರಿನಿಂದ ಮಾಡಿದ ಗಣಪನೇ ಮೂಲ ಗಣಪ ಆದ್ದರಿಂದ ಮಣ್ಣಿನ ಗಣಪನನ್ನೆ ಪೂಜಿಸುವುದು ಶ್ರೇಷ್ಠ. ಆದ್ದರಿಂದ ಮಣ್ಣಿನಿಂದ ಮಾಡಿದ ಗಣೇಶ ವಿಗ್ರಹಗಳನ್ನು ಸ್ಥಾಪಿಸಿ ಪೂಜೆ ಮಾಡಿ ನದಿ, ನೀರಿನ ಮೂಲಗಳ ಜೊತೆಗೆ ಪರಿಸರ ಸಂರಕ್ಷಿಸಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುಂಗಭದ್ರಾ ನೀರಿನಮಟ್ಟ ಹೆಚ್ಚಳ:

# ಜಾಗೃತೆಯಿಂದಿರಲುಅಧಿಕಾರಿಗಳಿಗೆ ಡಿ.ಸಿ. ನಿತೀಶ್ ಕೆ. ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 19–ಒಳಹರಿವಿನ ಆಧಾರದ ಮೇಲೆ ತುಂಗಭದ್ರಾ ಜಲಾಶಯಕ್ಕೆ ಆಗಸ್ಟ್ 19ರಿಂದ 1,15,000 ಕ್ಯೂಸೆಕ್‌ಗಳಿಂದ 1,40,000 ಕ್ಯೂಸೆಕ್‌ಗಳವರೆಗೆ ನೀರು ಹರಿಸಬಹುದಾಗಿದ್ದು, ಆದ್ದರಿಂದ ತುಂಗಭದ್ರಾ ನದಿಯ ಕೆಳಭಾಗದ ರಾಯಚೂರು ಜಿಲ್ಲಾ ವ್ಯಾಪ್ತಿಯ ಹಳ್ಳಿಗಳ ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕು ಮತ್ತು ಸಾರ್ವಜನಿಕರಿಗೆ ಎಚ್ಚರಿಕೆ ವಹಿಸಲು, ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ತಿಳಿಸಬೇಕು ಎಂದು ರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಆಗಸ್ಟ್ 19ರ ಬೆಳಿಗ್ಗೆ 10 ಗಂಟೆಗೆ ತುಂಗಭದ್ರಾ ಜಲಾಶಯದ ಮಟ್ಟವು 1624.39 ಅಡಿ ಆಗಿದ್ದು, 74.582 ಟಿಎಂಸಿ ಸಾಮರ್ಥ್ಯ ಹೊಂದಿದೆ. ಇದು 105.788 ಟಿಎಂಸಿ ಸಾಮರ್ಥ್ಯದ 1633.00 ಅಡಿಗೆ ಹೋಲಿಸಿದರೆ ತುಂಗಭದ್ರಾ ಜಲಾಶಯಕ್ಕೆ ಪ್ರಸ್ತುತ ಒಳಹರಿವು ಸುಮಾರು 1,20,000 ಕ್ಯೂಸೆಕ್ಸ್ ಆಗಿದ್ದು, ತುಂಗಾ ಜಲಾಶಯ (77000 ಕ್ಯೂಸೆಕ್ ಬಿಡುಗಡೆ) ಭದ್ರಾ ಅಣೆಕಟ್ಟು (40000 ಕ್ಯೂಸೆಕ್), ವರದಾ ನದಿಯಿಂದ ನೀರು ಬಿಡುಗಡೆಯಾಗುವುದರಿಂದ ಒಳಹರಿವು 1,50,000 ಕ್ಯೂಸೆಕ್‌ಗಳಿಗೆ ಹೆಚ್ಚಾಗುತ್ತದೆ. ತುಂಗಭದ್ರಾ ಜಲಾಶಯದ ಜಲಾನಯನ ಪ್ರದೇಶದಲ್ಲಿ 11000 ಕ್ಯೂಸೆಕ್ ಮಳೆಯಾಗಿದೆ. ನೀರಿನ ಮಟ್ಟ ಏರುತ್ತಿರುವ ಹಿನ್ನೆಲೆಯಲ್ಲಿ

ಮುಂಜಾಗ್ರತೆ ವಹಿಸಬೇಕು ಎಂದು ತುಂಗಭದ್ರಾ ಅಣೆಕಟ್ಟಿನಿಂದ ಎಚ್ಚರಿಕೆ ಸಂದೇಶ ಬಂದಿರುವುದರಿಂದ ಅಧಿಕಾರಿಗಳು, ತುಂಗಭದ್ರಾ ಅಣೆಕಟ್ಟಿನ ಕೆಳಭಾಗದ ಪ್ರದೇಶದ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

# ಗೃಹ ಆರೋಗ್ಯ ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ದೇವರಭೂಪೂರ ಗ್ರಾಮದಲ್ಲಿ

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜನಪ್ರಿಯ ಗೃಹ ಆರೋಗ್ಯ ಕಾರ್ಯಕ್ರಮಕ್ಕೆ ಇಂದು ದೇವರಭೂಪೂರ ಆಯುಷ್ಮಾನ ಆರೋಗ್ಯ ಕೇಂದ್ರ ಅಧಿಕೃತವಾಗಿ ಚಾಲನೆ ನೀಡಲಾಯಿತು.

ಜಿಲ್ಲಾ ಮಟ್ಟದ ಸೂಚನೆಗಳಂತೆ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಗೃಹ ಆರೋಗ್ಯ ಕಾರ್ಯಕ್ರಮ ಪ್ರಾರಂಭವಾಯಿತು. ಅದರ ಅಂಗವಾಗಿ ದೇವರಭೂಪೂರ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ರಮೇಶ್ ಆರೋಗ್ಯ ಅಧಿಕಾರಿ "ಗೃಹ ಆರೋಗ್ಯ ಕಾರ್ಯಕ್ರಮವು ನಮ್ಮ ಇಲಾಖೆಯ ಮಹತ್ವದ ಯೋಜನೆಯಾಗಿದ್ದು, ವಾರದಲ್ಲಿ ಮೂರು ದಿನ ಆಯುಷ್ಮಾನ್ ಆರೋಗ್ಯ ಸಿಬ್ಬಂದಿ ಕಾರ್ಯಕತೆ–ಯರು ಮನೆ ಮನೆಗೆ ತೆರಳಿ 30 ವರ್ಷ ಮೇಲ್ಪಟ್ಟವರಲ್ಲಿ ರಕ್ತದೊತ್ತಡ, ಸಕ್ಕರೆ, ಕಣ್ಣಿನ ತಪಾಸಣೆ ಮತ್ತು 18 ವರ್ಷ ಮೇಲ್ಪಟ್ಟವರಲ್ಲಿ ಹಿಮೋಗ್ಲೋಬಿನ್ ಪರೀಕ್ಷೆ ಸೇರಿದಂತೆ ಹಲವು ಆರೋಗ್ಯ ತಪಾಸಣೆಗಳನ್ನು ನಡೆಸಲಿದ್ದಾರೆ" ಎಂದು ತಿಳಿಸಿದರು. ತಪಾಸಣೆಯಲ್ಲಿ ರೋಗ ಪತ್ತೆಯಾದಲ್ಲಿ ತಕ್ಷಣವೇ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಔಷಧ ನೀಡಲಾಗುವುದು, ತೀವ್ರ ಕಾಯಿಲೆಗಳಿದ್ದರೆ ತಾಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ರೆಫರ್ ಮಾಡಲಾಗುವುದು ಎಂದರು. ಈ ಸೇವೆಯನ್ನು "ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು. ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸ್ಥಳೀಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದು ಮಹತ್ವದ ಹೆಜ್ಜೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ಆಶಾ ಕಾರ್ಯಕತೆ–ಯರ, ಗುರು ಹಿರಿಯರು ಮುಖಂಡರು ಸಾರ್ವಜನಿಕ ಸೇರಿದಂತೆ ಉಪಸ್ಥಿತರಿದ್ದರು.

# ಪಟ್ಟಣ ಪಂಚಾಯತಿಯಾಗಿ ಮಾಡಿದಲ್ಲಿ ಸಂಘಟನೆ ಮತ್ತು ಗ್ರಾಮಸ್ಥರು ಹೆದ್ದಾರಿ ಬಂದ್



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು, ಆ.19 :ಗುರುಗುಂಟಾ ಗ್ರಾಮವನ್ನು ಪಟ್ಟಣ ಪಂಚಾಯತಿಯಾಗಿ ಮೇಲ್ದರ್ಜೆಗೇರಿಸುವ ಸರ್ಕಾರದ ಯೋಚನೆಯನ್ನು ವಿರೋಧಿಸಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕ ಘಟಕ ಮತ್ತು ಗ್ರಾಮಸ್ಥರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು. ಗುರುಗುಂಟಾ ಗ್ರಾಮವು ಹೋಬಳಿ ಕೇಂದ್ರವಾಗಿದ್ದು, ತಹಶೀಲ್ದಾರರ ಕಚೇರಿ ಇಲ್ಲಿ ಕಾರ್ಯನಿರ್ವಹಿಸುತ್ತಿದೆ.ಗ್ರಾಮದಲ್ಲಿ 60–70 ದೊಡ್ಡಿಗಳು ಇದ್ದು, ಹೆಚ್ಚಿನವರು ಪರಿಶಿಷ್ಟ ಪಂಗಡದ ಬಡ ರೈತರಾಗಿದ್ದಾರೆ. ಕೃಷಿಯೇ ಅವರ ಜೀವನಾಧಾರವಾಗಿದ್ದು, ಕೈಗಾರಿಕೆಗಳಿಲ್ಲದ ಕಾರಣ ಕೂಲಿ ಕಾರ್ಮಿಕರು ರಾಷ್ಟ್ರೀಯ ಉದ್ಯೋಗ ಖಾತ್ರಿಗೆ ಅವಲಂಬಿತರಾಗಿದ್ದಾರೆ ಪಟ್ಟಣ ಪಂಚಾಯತಿಯಾಗಿ ಘೋಷಿಸಿದರೆ, ಬಡ ಕಾರ್ಮಿಕರು ಕೆಲಸಕ್ಕಾಗಿ ಮಹಾನಗರಗಳಿಗೆ ವಲಸೆ ಹೋಗಬೇಕಾದ ಪರಿಸ್ಥಿತಿ ಉಂಟಾಗುತ್ತದೆ. ನೀರಿನ ಕರ, ಆಸ್ತಿ ಕರ ಹಾಗೂ ವಿದ್ಯುತ್ ದರ ಹೆಚ್ಚಳದಿಂದ ಸಾಮಾನ್ಯ ಜನತೆ ಸಂಕಷ್ಟ ಅನುಭವಿಸಬೇಕಾಗುತ್ತದೆ. ಅಲ್ಲದೇ ಸುಮಾರು 2000–2500 ವಿದ್ಯಾರ್ಥಿಗಳು ಗ್ರಾಮೀಣ ಕೃಪಾಂಕದ ಸೌಲಭ್ಯದಿಂದ ವಂಚಿತರಾಗುವ ಸಾಧ್ಯತೆ ಇದೆ ಗುರುಗುಂಟಾವನ್ನು ಪಟ್ಟಣ ಪಂಚಾಯತಿಯಾಗಿ ಮಾಡಿದಲ್ಲಿ ಸಂಘಟನೆ ಮತ್ತು ಗ್ರಾಮಸ್ಥರು ಹೆದ್ದಾರಿ ಬಂದ್ ಸೇರಿದಂತೆ ತೀವ್ರ ಹೋರಾಟ ನಡೆಸಬೇಕಾಗುತ್ತದೆ" ಎಂದು ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷರಾದ ವೈ ದುರ್ಗಾ ಪ್ರಸಾದ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಆನಂದ ಕುಂಬಾರ್, ತಿಮ್ಮಣ್ಣ ನಾಯಕ, ಶಿವುಮೇಟಿ ಶರಣೋಜಿ ಪವಾರ್, ಶಿವುಕೆಂಪು ಕನಕಪ್ಪ, ಮಹಾಂತೇಶ, ಹನುಮಂತಲಾಲ್ ಸಾಬ, ಮಹ್ಮದ್ ಸಾಬ, ಹೋಳೆಪ್ಪ, ಬಸಣ್ಣಕೋಠಾ, ಲಕ್ಷ್ಮೀನಾರಾಯಣ, ಗಂಗಪ್ಪ ನರಸಪ್ಪ ನರೇಗಾ ಕೂಲಿ ಕಾರ್ಮಿಕರು ಸೇರಿದಂತೆ ಉಪಸ್ಥಿತರಿದ್ದರು.

# ಆಗಸ್ಟ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 19–: ಇಲ್ಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಆಗಸ್ಟ್ ಮಾಹೆಗೆ ಪಡಿತರ ಧ್ಯಾನಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಪಿ.ಹೆಚ್. ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೈಸರ್ಗಿಕ ವಿಕೋಪಗಳಿಗೆ ಸಹಾಯವಾಣಿ ಕರೆ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 19 : ಸುರಿಯುತ್ತಿರುವ ಹೆಚ್ಚಿನ ಮಳೆಯಿಂದ ಶಹಾಪೂರ ತಾಲೂಕಿನ ವ್ಯಾಪ್ತಿಯಲ್ಲಿ ಮಳೆ, ಗಾಳಿ, ಸಿಡಿಲು ಸೇರಿದಂತೆ ನೈಸರ್ಗಿಕ ವಿಕೋಪಗಳಿಗೆ ಸಂಬಂಧಿಸಿದ ಹಾನಿಯ ಕುರಿತು ಸಮಸ್ಯೆಗಳ ಬಗ್ಗೆ ಪರಿಹರಿಸಲು ಸಹಾಯಕ್ಕಾಗಿ ಸಾರ್ವಜನಿಕರ ಅನುಕೂಲಕ್ಕಾಗಿ ಈ ಕಛೇ–ರಿಯಲ್ಲಿ ಸಹಾಯವಾಣಿಯನ್ನು ಆರಂಭಿಸಲಾಗಿದೆ ಎಂದು ಶಹಾಪೂರ ತಹಸೀಲ್ದಾರರು ಅವರು ತಿಳಿಸಿದ್ದಾರೆ. ಈ ಕಛೇರಿಯಲ್ಲಿ 24*7 ಕಾರ್ಯನಿರ್ವಹಿಸುವ ಸಹಾಯವಾಣಿ ಸಂ.08479 243321ಗೆ ಸಾರ್ವಜನಿಕರು ಕರೆ ಮಾಡಿ ಮಳೆ, ಗಾಳಿ, ಸಿಡಿಲು ಸೇರಿದಂತೆ ನೈಸರ್ಗಿಕ ವಿಕೋಪಗಳು ಸಂಬಂಧಿಸಿದಲ್ಲಿ ಈ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಸ್ಥಳೀಯ ವ್ಯಾಪ್ತಿಯ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ ಸಹಾಯವನ್ನು ಪಡೆಯಬಹುದಾಗಿದೆ,ಸಾರ್ವಜನಿಕರು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಶಸ್ವಿಯಾಗಿ ಜರುಗಿದ ಪರಿಸರವಾದಿ ಶೈಲೇಂದ್ರ ಕಾವಡಿ ಅವರ ಕೋಟಿ ವೃಕ್ಷ ಆಂದೋಲನ

# ಬಿಲ್ವಪತ್ರಿ ವೃಕ್ಷ ಸಂರಕ್ಷಿಸಿ ಉಳಿಸಿ ಶ್ರೀನಿವಾಸ ಯರಡೋಣಿ



ಮಲ್ಲಮ್ಮ ನುಡಿ ವಾರ್ತೆ

ಔರಾದ: ಪರಿಸರವಾದಿ ಶೈಲೇಂದ್ರ ಕಾವಡಿ ಅವರು ಹಮ್ಮಿಕೊಂಡಿರುವ ಕೋಟಿ ವೃಕ್ಷ ಆಂದೋಲನ ಪರಿಸರ ಸಂರಕ್ಷಣೆಗೆ ಸಹಾಯವಾಗಿದೆ ಎಂದು ಔರದ್ ಬಿ. ಪಟ್ಟಣದ ಸುಪ್ರಸಿದ್ಧ ಇತಿಹಾಸಿಕ ಅಮಾರೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಕೋಟಿ ವೃಕ್ಷ ಆಂದೋಲನ ಹಾಗೂ ಕಾರ್ಯಕ್ರಮ ಶ್ರೀಶೈಲಂನ ಅಕ್ಕಮಹಾದೇವಿ ಚೈತನ್ಯ ಪೀಠದ ಮಹಾಯೋಗಿನಿ ತಪೋರತ್ನ ಪೂಜ್ಯ ಶ್ರೀ ಕರುಣಾದೇವಿ ಮಾತಾ ಅವರ ಹೆಸರಿನಲ್ಲಿ "ಏಕ ಲಾಕ್ ಪೇಡ ಮಾ ಕೆ ನಾಮ್" ಅಭಿಯಾನ ಶ್ರೀನಿವಾಸ ಎನ್. ಯರಡೋಣಿ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಪವಿತ್ರ ಶ್ರಾವಣ ಮಾಸದಲ್ಲಿ ಬಿಲ್ವಪತ್ರಿ ಸಸಿ ವಿತರಣೆ ಕಾರ್ಯಕ್ರಮದ ಮೂಲಕ ಬೀದರ ಜಿಲ್ಲೆ ಹಸಿರಾಗುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಬಿಲ್ವಪತ್ರಿ ಸಸಿಯು ಧಾರ್ಮಿಕವಾಗಿ ಎಷ್ಟು ಪ್ರಾಮುಖ್ಯವಾಗಿದೆಯೊ ಅಷ್ಟೇ ಪ್ರಮುಖ ಪರಿಸರದ ಸಂರಕ್ಷಣೆಯಲ್ಲಿ ತನ್ನದೇ ಆದ ಕೊಡುಗೆ ಬಿಲ್ವಪತ್ರಿ ಸಸಿ ನೀಡುತ್ತದೆ. ಮಧುಮೇಹ ಸೇರಿದಂತೆ ಅನೇಕ ಆರೋಗ್ಯ ಸಂಬಂಧಿ ಕಾಯಿಲೆಗಳಿಗೆ ಬಿಲ್ವಪತ್ರಿ ಎಲೆ, ಕಾಂಡ, ಹಣ್ಣು ಮತ್ತು ಬೇರು ಎಲ್ಲವೂ ಕೂಡ ಆರೋಗ್ಯ ಕಾಪಾಡಿಕೊಳ್ಳಲು ಮತ್ತು ಅನೇಕ ರೋಗಗಳಿಗೆ ರಾಮಬಾಣವಾಗಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀನಿವಾಸ ಎನ್. ಯರಡೊಣಿ ಅವರು ಅಭಿಪ್ರಾಯಪಟ್ಟರು. ಪರಿಸರವಾದಿ ಶೈಲೇಂದ್ರ ಕಾವಡಿ ಕಳೆದ 27 ವರ್ಷಗಳಿಂದ ಬೀದರ ಜಿಲ್ಲೆಯಲ್ಲಿ ಅರಣ್ಯ ಸಂರಕ್ಷಣೆಗೆ ಹಗಲಿರಳು ಶ್ರಮಿಸುತ್ತಿರುವುದು ಇವರ ಅತ್ಯುತ್ತಮ ಕಾರ್ಯವಾಗಿದೆ ಎಂದರು. ಔರಾದ ತಾಲೂಕ ಅತೀ ಕಡಿಮೆ ಅರಣ್ಯ ಹೊಂದಿರುವ ತಾಲೂಕ ಆಗಿದ್ದು, ಇವರು ಈ ಭಾಗದಲ್ಲಿ ಕೋಟಿ ವೃಕ್ಷ ಆಂದೋಲನ ಮುಖಾಂತರ ಸಸಿ ನೆಡುವ ಮತ್ತು ವಿತರಣೆ ಕಾರ್ಯಕ್ರಮ ಕೈಗೊಳ್ಳುತ್ತೀರಿವುದು ಹಸಿರು ಹೊದಿಕೆ ಹೆಚ್ಚಳಕ್ಕೆ ಸಹಾಯವಾಗುತ್ತದೆ ಎಂದರು.

ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸದಸ್ಯರಾದ ಶಿವಯ್ಯ ಸ್ವಾಮಿಯವರು ಮಾತನಾಡಿ, ದಕ್ಷಿಣ ಭಾರತದ ರಾಜ್ಯಗಳಲ್ಲಿ ಅಭಿಯಾನ ಹಮ್ಮಿಕೊಂಡು ಪರಿಸರ ಸಂರಕ್ಷಣೆ ಮತ್ತು ಬಿಲ್ವಪತ್ರಿ ಸಸಿಗಳ ಬಗ್ಗೆ ಜಾಗೃತಿ ಕಾರ್ಯಕ್ರಮವು ಉತ್ತರ ಭಾರತಕ್ಕೂ ವಿಸ್ತರಿಸಲಾಗುವುದು ಎಂದು ನುಡಿದರು. ಇದಕ್ಕೆ ಮಹಾಜನತೆ ಹಾಗೂ ಮಠಾಧೀಶರು, ಅಧಿಕಾರಿಗಳು ಕೈಜೋಡಿಸಿರುವುದು ಏಕ ಲಾಕ್ ಪೇಡ ಮಾ ಕೆ ನಾಮ್ ಅಭಿಯಾನಕ್ಕೆ ಆನೆ ಬಲ ಬಂದಂತಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಬೇಮಳಖೇಡ ಹಿರೇಮಠ ಸಂಸ್ಥಾನದ ಷ.ಬ್ರ.ಡಾ. ರಾಜಶೇಖರ ಶಿವಾಚಾರ್ಯರು ಮಾತನಾಡಿ, ನಾವು ವಿತರಿಸಿರುವ ಬಿಲ್ವಪತ್ರಿ ಸಸಿಗಳನ್ನು ತಮ್ಮ ಮಕ್ಕಳನ್ನು ಯಾವ ರೀತಿ ಪಾಲನೆ ಪೋಷಣೆ ಮಾಡುತ್ತಿರೊ ಅದೇ ರೀತಿ ಬಿಲ್ವಪತ್ರಿ ಸಸಿಗೆ ಸಂರಕ್ಷಣೆ ಮಾಡಿ ಬೆಳೆಸಿ ತಮ್ಮ ಮಕ್ಕಳಿಗೆ ಕಾಣಿಕೆಯಾಗಿ ನೀಡಬೇಕೆಂದು ನುಡಿದರು. ಪರಿಸರವಾದಿ ಶೈಲೇಂದ್ರ ಕಾವಡಿಯವರು ಮಾತನಾಡಿ, ಔರಾದ ತಾಲೂಕ ಪರಿಸರ ಸಂರಕ್ಷಣೆಗೆ ದತ್ತು ತೆ–ಗೆದುಕೊಂಡು ಪರಿಸರ ಸಂರಕ್ಷಣೆಗೆ ಹಗಲಿರಳು ಶ್ರಮಿಸುತ್ತಿದೆನೆ, ಔರಾದ ಪಟ್ಟಣದಲ್ಲಿ ಪ್ರತಿ ವರ್ಷ ಶ್ರಾವಣ ಮಾಸದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ ಜನಜಾಗೃತಿ ಹಮ್ಮಿಕೊಂಡು ಪರಿಸರ ಜಾಗೃತಿ ಮಾಡಲಾಗುತ್ತಿದೆ ಎಂದರು. ಹಿರಿಯ ಮುಖಂಡರಾದ ಬಸವರಾಜ ದೇಶಮುಖ ಮಾತನಾಡಿ, ಅಮರೇಶ್ವರ ದೇವಸ್ಥಾನದಲ್ಲಿ ಈ ಕಾರ್ಯಕ್ರಮ ಆಯೋಜಿಸುವ ಮೂಲಕ ಔರಾದ ಜನತೆಗೆ ಬಿಲ್ವಪತ್ರಿ ಸಸಿಗಳು ವಿತರಿಸಿರುವುದು ಎಲ್ಲಾ ಭಕ್ತರಿಗೆ ಸಂತೋಷವನ್ನುಂಟು ಮಾಡಿದೆ ಎಂದರು. ವೇದಿಕೆ ಮೇಲೆ ಮೈ ಭಾರತನ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೊರ್ಮೆ, ಔರಾದ ಸಾಮಾಜಿಕ ವಿಭಾಗದ ವಲಯ ಅರಣ್ಯಾಧಿಕಾರಿ ಪ್ರವೀಣಕುಮಾರ ಮೋರೆ, ಮನೋರೋಗ ತಜ್ಞರಾದ ನಾಗರಾಜ ಮಠ, ಮುಖಂಡರಾದ ಶರಣಪ್ಪ ಪಂಚಾಕ್ಷರಿ, ಗುರುನಾಥ ವಡ್ಡೆ, ಕಿರಣ ಉಪ್ಪೆ, ಪತ್ರಕರ್ತರಾದ ಮನ್ಮಥ ಸ್ವಾಮಿ, ಸುಭಾಷ ನಿರ್ಮಳೆ, ಬಸವರಾಜ ಚಾರೆ ಉಪಸ್ಥಿತರಿದ್ದರು. ಶಿವರಾಜ ಅಲ್ಮಾಜೆ ಸ್ವಾಗತಿಸಿದರು. ಅಮರ ಸ್ವಾಮಿ ಸ್ಥಾವರಮಠ ನಿರೂಪಿಸಿದರೆ, ಡಾ. ಶಂಕರರಾವ ದೇಶಮುಖ ವಂದಿಸಿದರು. ಶಾಂತೀಶ್ವರಿ ಸ್ವಯಂ ಸೇವಾ ಸಂಸ್ಥೆ, ಅರಣ್ಯ ಇಲಾಖೆ, ಅಕ್ಕಮಹಾದೇವಿ ಚೈತನ್ಯ ಪೀಠ ಶ್ರೀಶೈಲಂ, ಜ್ಞಾನಶಿವಯೋಗಾಶ್ರಮ ಬೀದರ, ಮೈಭಾರತ ಬೀದರ ಹಾಗೂ ಜಗದ್ಗುರು ಪಂಚಾಚಾರ್ಯ ಯುವಕ ಸಂಘದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಉಪ ವಲಯ ಅರಣ್ಯಾಧಿಕಾರಿ ನಾಗೇಂದ್ರ ಸಿಂಗೋಡೆ, ಅರ್ಚಕ ರವಿ ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರ ದರ್ಶನಕ್ಕೆ ಬಂದ ಭಕ್ತರಿಗೆ ಹಣ್ಣು ಹಂಪಲುಗಳು ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಶ್ರಾವಣ ಮಾಸ ಪವಿತ್ರವಾದ ಮಾಸ ಈ ಒಂದು ಕೊನೆಯ ಸೋಮವಾರ ತಾಲೂಕಿನ ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರಿಗೆ ಚಿಟಗುಪ್ಪ ಪಟ್ಟಣದ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರಾವಣ ಮಾಸದಲ್ಲಿ ಪೂಜ್ಯರ ದರ್ಶನಕ್ಕೆ ಬಂದ ಭಕ್ತಾದಿಗಳಿಗೆ ಹಣ್ಣು ಹಂಪಲು ವಿತರಿಸಿ ಭಕ್ತಿಯ ಸಮರ್ಪಣೆ ಮಾಡಿದರು.

ಪೂಜ್ಯರಿಗೆ ಶ್ರಾವಣ ಮಾಸದ ಅಂಗವಾಗಿ ಹಣ್ಣು ಹಂಪಲು ಕೊಟ್ಟು ಸನ್ಮಾನಿಸಿ ಗೌರವಿಸಿ, ಆಶೀರ್ವಾದ ಪಡೆದರು.

ಪರಿಸರವಾದಿ ಹಾಗೂ ಸಮಾಜ ಕಾರ್ಯಕರ್ತ ಶೈಲೇಂದ್ರ ಕಾವಡಿ ಪೂಜ್ಯರಿಗೆ ಸನ್ಮಾನಿಸಿ ಆಶೀರ್ವಾದ ಪಡೆದರು.


## CHANGE OF NAME

I Sanjay S/o Narayan Reddy (Old Name) R/o Wanjarkhed Tq:Bhalki-585416

I Have Changed my Name to Sanjay Narayan Reddy S/o Narayan Reddy (New Name) R/o Wanjarkhed Tq:Bhalki-585416 Vide Affidavit, Dated:19-08-2025 Sworm before Notary by Prabhakar B.Nagarale.

### ಕುರುಗೋಡು: ಜಿಪಂ ಸಿಇಒ ಮಹಮ್ಮದ್
## ಹ್ಯಾರೀಸ್ ಸುಮೈರ್ ಭೇಟಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ನಿರಂತರ ಮಳೆಯ ಅವಾಂತರಗಳಿಂದ ಮುಂಜಾಗರೂಕತೆ ಕ್ರಮವಾಗಿ ಮಂಗಳವಾರ ಕುರುಗೋಡು ಪಟ್ಟಣದ ಸರ್ಕಾರಿ ಹಿರಿಯ ಪ್ರೌಢ ಶಾಲೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಭೇಟಿ ನೀಡಿ ಕೊಠಡಿಗಳ ದುರಸ್ಥಿ ಕುರಿತು ಪರಿಶೀಲಿಸಿದರು.

ಬಳಿಕ ಪಟ್ಟಣದ ಹರಿಪ್ರಿಯಾ ಕಾಲೋನಿಯಲ್ಲಿರುವ 13 ನೇ ಕೇಂದ್ರ ಅಂಗನವಾಡಿಗೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ಅಲ್ಲಿನ ಸ್ಥಿತಿ–ಗತಿ ವೀಕ್ಷಿಸಿದರು. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಕಡಿಮೆಯಾಗಿರುವುದರ ಕುರಿತು ಬಿಇಒಗಳೊಂದಿಗೆ ಚರ್ಚಿಸಿ ಸೂಕ್ತ ನಿರ್ದೇಶನ ನೀಡಿದರು. ಪಟ್ಟಣದ ಶಾಲಾ ಶೌಚಾಲಯಗಳ ಸೂಕ್ತ ನಿರ್ವಹಣೆ ಕಾಯ್ದುಕೊಳ್ಳಬೇಕು ಎಂದು ಸೂಚಿಸಿದರು.

ಈ ವೇಳೆ ಕುರುಗೋಡು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲ, ಕುರುಗೋಡು ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗ ಮೂರ್ತಿ ಸೇರಿದಂತೆ ಮುಖ್ಯ ಗುರುಗಳು, ಶಾಲಾ ಸಹ ಶಿಕ್ಷಕರು ಹಾಜರಿದ್ದರು.

### ಕುರುಗೋಡು: ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ರಂತರ ಮಳೆಯ ಅವಾಂತರಗಳಿಂದ ಮುಂಜಾಗರೂಕತೆ ಕ್ರಮವಾಗಿ ಮಂಗಳವಾರ ಕುರುಗೋಡು ಪಟ್ಟಣದ ಸರ್ಕಾರಿ ಹಿರಿಯ ಪ್ರೌಢ ಶಾಲೆಗೆ ಭೇಟಿ ನೀಡಿ ಕೊಠಡಿಗಳ ದುರಸ್ಥಿ ಕುರಿತು ಪರಿಶೀಲಿಸಿದರು.

ಬಳಿಕ ಪಟ್ಟಣದ ಹರಿಪ್ರಿಯಾ ಕಾಲೋನಿಯಲ್ಲಿರುವ 13 ನೇ ಕೇಂದ್ರ ಅಂಗನವಾಡಿಗೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ಅಲ್ಲಿನ ಸ್ಥಿತಿ–ಗತಿ ವೀಕ್ಷಿಸಿದರು. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಕಡಿಮೆಯಾಗಿರುವುದರ ಕುರಿತು ಬಿಇಒಗಳೊಂದಿಗೆ ಚರ್ಚಿಸಿ ಸೂಕ್ತ ನಿರ್ದೇಶನ ನೀಡಿದರು. ಪಟ್ಟಣದ ಶಾಲಾ ಶೌಚಾಲಯಗಳ ಸೂಕ್ತ ನಿರ್ವಹಣೆ ಕಾಯ್ದುಕೊಳ್ಳಬೇಕು ಎಂದು ಸೂಚಿಸಿದರು.

ಈ ವೇಳೆ ಕುರುಗೋಡು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲ, ಕುರುಗೋಡು ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ದಲಿಂಗ ಮೂರ್ತಿ ಸೇರಿದಂತೆ ಮುಖ್ಯ ಗುರುಗಳು, ಶಾಲಾ ಸಹ ಶಿಕ್ಷಕರು ಹಾಜರಿದ್ದರು.

## ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಕುರುಗೋಡು ಪೊಲೀಸ್ ಠಾಣೆ ವ್ಯಾಪ್ತಿಯ ಕಲ್ಲುಕಂಭ ಗ್ರಾಮದ ಅಂಬೇಡ್ಕರ್ ಭವನ ಹತ್ತಿರ ಬಸ್ ನಿಲ್ದಾಣದಲ್ಲಿ ಸುಮಾರು 55–60 ವರ್ಷದ ಅನಾಮಧೇಯ ವ್ಯಕ್ತಿಯು ಆ.17 ರಂದು ಯಾವುದೋ ಖಾಯಿಲೆಯಿಂದ ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ತಿಳಿದಿರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

**ಚಹರೆ ಗುರುತು:**

ಎತ್ತರ 5–6 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ಮೃತನ ತಲೆಯಲ್ಲಿ 3 ಇಂಚು ಬಿಳಿ ಮಿಶ್ರಿತ ಕಪ್ಪು ಕೂದಲು, ಗಡ್ಡ ಮತ್ತು ಮೀಸೆ ಇರುತ್ತದೆ. ಮೃತನ ಮೈಮೇಲೆ ಯಾವುದೇ ಬಟ್ಟೆಗಳು ಇರುವುದಿಲ್ಲ ದೇಹದ ಮೇಲೆ ಬಿಳಿ ಬೆಡ್ ಶೀಟ್ ಹೊದಿಸಿದ್ದು ಎದೆಯ ಮಧ್ಯಭಾಗದಲ್ಲಿ ಸಣ್ಣ ಕಪ್ಪು ಮಚ್ಚೆ ಇರುತ್ತದೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕುರುಗೋಡು ಪೊಲೀಸ್ ಠಾಣೆಯ ದೂ.08392–263433, ಮೊ.9480803051, 9480803033 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃತ್ತ ನಾಮಕರಣ, ಪುತ್ಥಳಿ ನಿರ್ಮಾಣ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ 19 ರ ಡಾ.ರಾಜ್‌ಕುಮಾರ್ ರಸ್ತೆ (ಅನಂತಪುರ ರಸ್ತೆ)ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆವರಣದಲ್ಲಿರುವ ಸಾಂಸ್ಕೃತಿಕ ಸಮುಚ್ಛಯಕ್ಕೆ ಎಂ.ಪಿ.ಪ್ರಕಾಶ್ ಅವರ ಹೆಸರು ನಾಮಕರಣ ಮಾಡಲು ಹಾಗೂ ಆವರಣದಲ್ಲಿ ಸರ್ಕಾರದ ವತಿಯಿಂದ ಅವರ ಪುತ್ಥಳಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರಿಂದ ಸಲಹೆ, ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆಗೊಂಡ 30 ದಿನಗಳೊಳಗಾಗಿ ಲಿಖಿತವಾಗಿ ಮಹಾನಗರ ಪಾಲಿಕೆ ಕಚೇರಿಗೆ ಸಲ್ಲಿಸಬಹುದು. ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದೇ ಇದ್ದಲ್ಲಿ ಸರ್ಕಾರದ ಸುತ್ತೋಲೆಯ ಪ್ರಕಾರ ಮುಂದಿನ ಕ್ರಮಕ್ಕೆ ಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆ.21 ರಂದು ಏಡ್ಸ್, ಎಸ್‌ಟಿಡಿ ಜಾಗೃತಿ ಕುರಿತು ಬೈಕ್ ರ್‍ಯಾಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕ ವತಿಯಿಂದ ಐಇಸಿ ಯ ಬಗ್ಗೆ ಹೆಚ್ಚಿನ ಪ್ರಚಾರ ಮಾಡುವ ಪ್ರಯುಕ್ತ ಹೆಚ್‌ಐವಿ/ಏಡ್ಸ್ ಮತ್ತು ಎಸ್.ಟಿ.ಡಿ ಜಾಗೃತಿ ಕುರಿತು ಆ.21 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೋಟೆ ಪ್ರದೇಶದ ಶ್ರೀಮೇಧಾ ಮಹಾವಿದ್ಯಾಲಯ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಮೂಲಕ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ.

ಬೈಕ್ ರ್‍ಯಾಲಿಯು ಶ್ರೀಮೇಧಾ ಕಾಲೇಜಿನಿಂದ ಆರಂಭವಾಗಿ ಎಸ್.ಪಿ ವೃತ್ತ–ಕುಮಾರಸ್ವಾಮಿ ದೇವಸ್ಥಾನ–ಸುಧಾ ಕ್ರಾಸ್–ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಶ್ರೀ ಮೇಧಾ ಕಾಲೇಜು ಆವರಣದವರೆಗೆ ನಡೆಯಲಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕಾಧಿಕಾರಿಗಳು ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಸೂಚನೆ
## ಬೆಳೆ ಸಮೀಕ್ಷೆ, ಜನನ–ಮರಣ ನೋಂದಣಿ ವಿಳಂಬ ಸಲ್ಲದು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಜಿಲ್ಲೆಯಲ್ಲಿ ಈ ಸಾಲಿನ ಬೆಳೆ ಸಮೀಕ್ಷೆ ಆರಂಭಗೊಂಡಿದ್ದು, ಸಮೀಕ್ಷೆಯು ಸರಿಯಾದ ಕ್ರಮದಲ್ಲಿ ಆಗಬೇಕಿದೆ. ಸಮೀಕ್ಷೆ ಮಾಡುವವರಿಗೆ ಸೂಕ್ತ ತರಬೇತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಜನನ–ಮರಣ ನಾಗರಿಕ ನೋಂದಣಿ ಪದ್ಧತಿ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಹಾಗೂ ಇತರೆ ವಿಷಯಗಳ ಕುರಿತ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸ್ತಕ ಸಾಲಿಗೆ ಜಿಲ್ಲೆಯಲ್ಲಿ ಶೇ.84 ರಷ್ಟು ಬಿತ್ತನೆಯಾಗಿದೆ. ಮುಂಗಾರು ಹಂಗಾಮಿನ ಬೆಳೆವಾರು ಸಮೀಕ್ಷೆ ಮಾಡಲು ಐದು ತಾಲ್ಲೂಕುಗಳಿಗೆ ಕೃಷಿ, ತೋಟಗಾರಿಕೆ, ಕಂದಾಯ ಮತ್ತು ಆರ್‌ಡಿಪಿಆರ್ ಇಲಾಖೆಗಳಿಂದ 1760 ಜನ ಮೂಲ ಕಾರ್ಯಕರ್ತರನ್ನು ಹಂಚಿಕೆ ಮಾಡಲಾಗಿದೆ. ಇಲ್ಲಿಯವರೆಗೆ 1704 ಪ್ರಯೋಗ ನಡೆದಿವೆ. ಪ್ರಗತಿ ಸಾಧಿಸಬೇಕು. ಮುಖ್ಯವಾಗಿ ಬೆಳೆ ಸಮೀಕ್ಷೆಯಲ್ಲಿ ಫಾರಂ–1 ಕಡ್ಡಾಯವಾಗಿ ಭರ್ತಿ ಮಾಡಬೇಕು. ಸಂಬಂಧಿಸಿದ ಆಯಾ ಇಲಾಖೆ ಅಧಿಕಾರಿಗಳು ಕಾರ್ಯ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

**ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಳಂಬ ಸಲ್ಲದು:**

ಜಿಲ್ಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯು ಯಾವುದೇ ಕಾರಣ–ಕ್ಕೂ ವಿಳಂಬವಾಗದೇ ನಿಗದಿತ ಸಮಯದಲ್ಲಿ ಜರುಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್.ಕೆ.ಪತ್ರಿಬಸಪ್ಪ ಅವರು ಮಾತನಾಡಿ, 2025 ರ ಜನವರಿಯಿಂದ ಜುಲೈ ವರೆಗೆ ಜಿಲ್ಲೆಯಲ್ಲಿ ಜನನ ನೋಂದಣಿ ಕುರಿತಂತೆ ಗಂಡು–8,817, ಹೆಣ್ಣು–8,281 ಸೇರಿ ಒಟ್ಟು 17,098 ನೋಂದಣಿಯಾಗಿವೆ. ಅದೇರೀತಿಯಾಗಿ 2025 ರ ಜನವರಿಯಿಂದ ಜುಲೈ ವರೆಗೆ ಜಿಲ್ಲೆಯಲ್ಲಿ ಮರಣ ನೋಂದಣಿ ಕುರಿತಂತೆ ಗಂಡು–4,667, ಹೆಣ್ಣು–3,213 ಮತ್ತು ಲಿಂಗತ್ವ ಅಲ್ಪಸಂಖ್ಯಾತರು–3 ಸೇರಿದಂತೆ ಒಟ್ಟು 7,883 ನೋಂದಣಿಯಾಗಿವೆ ಎಂದು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಯವರು, ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಸಂಸ್ಥೆಗಳಲ್ಲಿ ಜರುಗುವ ಜನನ, ಮರಣಗಳನ್ನು ಕಡ್ಡಾಯವಾಗಿ ಜನನ–ಮರಣ ಅಧಿನಿಯಮದಡಿ 21 ದಿನಗಳ ನಿಗಧಿತ ಅವಧಿಯೊಳಗೆ ನೋಂದಣಿ ಕಾರ್ಯಕೈಗೊಳ್ಳಬೇಕು. ಯಾವುದೇ ತಡ ನೋಂದಣಿಗೆ ಅವಕಾಶ ನೀಡದೇ ಮತ್ತು ಮಧ್ಯವರ್ತಿಗಳ ಹಾವಳಿ ಇಲ್ಲದೇ ಸಕಾಲದಲ್ಲಿ ಸಾರ್ವಜನಿಕರಿಗೆ ಜನನ ಮರಣದ ನೋಂದಣಿ ಪ್ರಮಾಣ ಪತ್ರ ವಿತರಣೆಯಾಗಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಹಾನಗರ ಪಾಲಿಕೆ ಮತ್ತು ನಗರ ಸ್ಥಳೀಯ–ಸಂಸ್ಥೆಗಳಲ್ಲಿ ಈವರೆಗೆ (2025 ಜನವರಿಯಿಂದ ಜುಲೈವರೆಗೆ) ಜನನ ಮತ್ತು ಮರಣ ನೋಂದಣಿಗೆ ಸಂಬಂಧಿಸಿದಂತೆ ಒಟ್ಟು 3388 ಪ್ರಕರಣಗಳು ನೋಂದಣಿ ಬಾಕಿ ಇದ್ದು, ಈ ಕುರಿತು ಜಿಲ್ಲೆಯ ಖಾಸಗಿ ಆರೋಗ್ಯ ಸಂಸ್ಥೆಗಳಲ್ಲಿ ಜನನ ಮತ್ತು ಮರಣ ಘಟನೆಗಳು ನೋಂದಣಿಗೆ ವಿಳಂಬವಾಗುವುದರ ಬಗ್ಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಕೃಷಿ ಜಂಟಿನಿರ್ದೇಶಕ ಸೋಮಸುಂದರ್, ತೋಟಗಾರಿಕೆ, ಮಹಾನಗರ ಪಾಲಿಕೆ, ಡಿಡಿಎಲ್‌ಆರ್ ಅಧಿಕಾರಿಗಳು ಸೇರಿದಂತೆ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು ಮತ್ತು ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

### ಕುಡುದರಹಾಳ್ ಗ್ರಾಮಕ್ಕೆ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಭೇಟಿ
## ಜನರಿಗೆ ಆರೋಗ್ಯ ಸೌಲಭ್ಯ ತಲುಪಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಸಾರ್ವಜನಿಕರಿಗೆ ಎಲ್ಲಾ ವಿಧದ ಆರೋಗ್ಯ ಸೇವೆ–ಸೌಲಭ್ಯ ತಲುಪಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಹೇಳಿದರು.

ಮಂಗಳವಾರ ಸಿರುಗುಪ್ಪ ತಾಲ್ಲೂಕಿನ ಕುಡುದರಹಾಳ್ ಗ್ರಾಮದ ಆರೋಗ್ಯ ಕೇಂದ್ರಕ್ಕೆ ನೀಡಿ ಸಿಬ್ಬಂದಿಗಳೊಂದಿಗೆ ಚರ್ಚಿಸಿ ಮಾತನಾಡಿದ ಅವರು ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡಿದರು.

ಗ್ರಾಮದಲ್ಲಿ ತಾತ್ಕಾಲಿಕ ಆರೋಗ್ಯ ಕೇಂದ್ರದಲ್ಲಿ ಪ್ರತಿದಿನ ಮೂರು ಪಾಳಿ ವೇಳೆಯಲ್ಲಿ ಕೆಲಸ ನಿರ್ವಹಿಸಿಕೊಂಡು ಹೋಗಲು ನಮ್ಮ ಕ್ಲಿನಿಕ್ ಮತ್ತು ಆರ್.ಬಿ.ಎಸ್.ಕೆ ಅಡಿ ವೈದ್ಯರು, ಶುಶ್ರೂಷಕರು, ಗ್ರೂಪ್–ಡಿ ಮತ್ತು ವಾಹನ ಚಾಲಕರನ್ನು ನಿಯೋಜಿಸಲಾಗಿದೆ. ರೋಗಿಗಳ ಹಿತ ದೃಷ್ಟಿಯಿಂದ ತೀವ್ರತರ ಜ್ವರ ಪ್ರಕರಣಗಳಿಗೆ 108 ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಬಳಿಕ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಗ್ರಾಪಂ ವತಿಯಿಂದ ಚರಂಡಿಗಳ ಸ್ವಚ್ಛತೆ ಮತ್ತು ಬ್ಲಿಚಿಂಗ್ ಪೌಡರ್ ಸೇರಿದಂತೆ ಕಾಲಾನುಸಾರ ನಿರ್ವಹಣೆ ಕೈಗೊಳ್ಳಬೇಕು. ಗ್ರಾಮದಲ್ಲಿ ನಿಂತ ನೀರಿನ ತಗ್ಗು ಪ್ರದೇಶಗಳಲ್ಲಿ ಮಣ್ಣು ಹಾಕಿ ಮುಚ್ಚಬೇಕು. ಘನತಾಜ್ಯ ಮತ್ತು ಟೈರ್‌ಗಳ ಸೂಕ್ತ ವಿಲೇವಾರಿ ಮಾಡಲು ತಿಳಿಸಿದರು.

ಒಣ ದಿನ ಎಂದು ನಿಗದಿಪಡಿಸಿ ಒಂದು ದಿನ ಸಂಪೂರ್ಣವಾಗಿ ನೀರು ಸರಬರಾಜು ನಿಲ್ಲಿಸಿ ಸಂಜೆ ವೇಳೆ ಸರಬರಾಜು ಮಾಡಬೇಕು. ಫಾಗಿಂಗ್ ಕಾರ್ಯ ಕೈಗೊಳ್ಳಬೇಕು. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳು ಲಾರ್ವ ತಾಣಗಳ ಸಮೀಕ್ಷೆ ನಡೆಸಿ ಲಾರ್ವ ಕಂಡುಬಂದ ಕೂಡಲೇ ಸಂಪೂರ್ಣವಾಗಿ ನೀರು ಖಾಲಿ ಮಾಡುವಂತೆ ಸೂಚಿಸಬೇಕು ಎಂದರು.

ಪ್ರತಿದಿನ ಶಾಲೆಯಲ್ಲಿ ಲಾರ್ವಗಳ ಪ್ರಾತ್ಯಕ್ಷಿತೆ ಹಾಗೂ ಡೆಂಗ್ಯು ಜ್ವರ ಕುರಿತು ಆರೋಗ್ಯ ಶಿಕ್ಷಣ ನೀಡಬೇಕು. ಆಶಾ ಕಾರ್ಯಕತೆ–ರ್ಯರಿಂದ ಪ್ರತಿ ದಿನ ಜ್ವರ ಸಮೀಕ್ಷೆ ಮಾಡಬೇಕು. ಸಾಮಾನ್ಯ ಜ್ವರ ಪ್ರಕರಣ ಕಂಡುಬಂದಲ್ಲಿ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ಚಿಕಿತ್ಸಾ ಸೌಲಭ್ಯ ಪಡೆಯಲು ತಿಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಸಾಂಕ್ರಾಮಿಕ ರೋಗಶಾಸ್ತ್ರಜ್ಞೆ ಡಾ.ವಿಶಾಲಾಕ್ಷಿ, ಜಿಲ್ಲಾ ಕೀಟ ಶಾಸ್ತ್ರಜ್ಞೆ ನಂದಾ ಕಡಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದಮ್ಮೂರ್ ಬಸವರಾಜ್, ಕ್ಷೇತ್ರ ಕಾರ್ಯಕ್ರಮ ವ್ಯವಸ್ಥಾಪಕ ಪ್ರಹಲ್ಲಾದ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರಾಜ್ ರೆಡ್ಡಿ ಕ್ಷೇತ್ರ ಎಪಿಡಾಮ್ಲಾಜಿಸ್ಟ್ ರವಿಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ನವೀನ್ ಸೇರಿದಂತೆ ಪ್ರಾಥಮಿಕ ಸುರಕ್ಷತಾ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಹಾಜರಿದ್ದರು.

### ಬಳ್ಳಾರಿ: ಜಿಲ್ಲಾಡಳಿತದಿಂದ ‘ವಿಶ್ವ ಮಾನವೀಯ ದಿನ’ ಆಚರಣೆ
## ಎಲ್ಲರೂ ಮಾನವೀಯ ಮೌಲ್ಯ ಅಳವಡಿಸಿಕೊಳ್ಳಬೇಕಿದೆ: ಎಡಿಸಿ ಮಹಮ್ಮದ್ ಝುಬೇರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಪ್ರಸ್ತುತ ದಿನಗಳಲ್ಲಿ ನಾವೆಲ್ಲರೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕಿದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ಕಾರ್ಮಿಕ ಇಲಾಖೆ, ಗೃಹ ರಕ್ಷಕ ದಳ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ‘ವಿಶ್ವ ಮಾನವೀಯ ದಿನಾಚರಣೆ’ ಅಂಗವಾಗಿ ವರ್ಚುವಲ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಸ್ತುತ ಪ್ರಪಂಚದಲ್ಲಿ ನಡೆದಿದ್ದ ವಿವಿಧ ರಾಷ್ಟ್ರಗಳ ನಡುವಿನ ಯುದ್ಧದ ಸಂದರ್ಭದಲ್ಲಿ ಊಟ, ವಸತಿ, ವೈದ್ಯಕೀಯ ಸೌಲಭ್ಯ ಸೇರಿದಂತೆ ಸಾಕಷ್ಟು ಪ್ರಭಾವ ಬೀರಿತ್ತು. ಆ ಸಂದರ್ಭದಲ್ಲಿ ಸಹಾಯ ಮಾಡಲು ಮಾನವೀಯ ಮೌಲ್ಯಗಳೇ ಪ್ರಮುಖ ಕಾರಣವಾದವು. ಹಾಗಾಗಿ ತಮ್ಮ ಸುತ್ತ ಮುತ್ತ ಏನೇ ಅವಘಡ ಸಂಭವಿಸಿದಾಗ ತುರ್ತು ಸಂದರ್ಭದಲ್ಲಿ ಕಷ್ಟದಲ್ಲಿರುವವರಿಗೆ ಸಹಾಯ ಮಾಡುವುದೇ ಮಾನವೀಯತೆ ಆಗಿದೆ ಎಂದು ತಿಳಿಸಿದರು.

ಮಾನವೀಯ ಮೌಲ್ಯಗಳು ಸ್ವಯಂ ಪ್ರೇರಿತರಾಗಿ ಅಳವಡಿಸಿಕೊಳ್ಳಬೇಕಿದೆ. ಪ್ರವಾಹ, ಅನಿರೀಕ್ಷಿತ ಕಟ್ಟಡ ಕುಸಿತದ ಸಂದರ್ಭದಲ್ಲಿ, ಯುದ್ಧದ ಸಂದರ್ಭದಲ್ಲಿ ತಕ್ಷಣ ಭಾಗವಹಿಸಿ ಸಹಾಯ ಒದಗಿಸುವುದು ಮಾನವೀಯತೆಯ ಲಕ್ಷಣವಾಗಿದೆ. ಎಸ್.ಡಿ.ಆರ್.ಎಫ್ ಮತ್ತು ಎನ್.ಡಿ.ಆರ್.ಎಫ್ ತಂಡ ಆಗಮಿಸಲು ತಡವಾದಾಗ ಸುತ್ತ–ಮುತ್ತಲಿನವರು ಜಾಗರೂಕರಾಗಿ ಮಾನವೀಯತೆಯ ಮೂಲಕ ಸಹಾಯ ಕರ್ತವ್ಯ ಮರೆಯಬೇಕು. ಇಲ್ಲದಿದ್ದಲ್ಲಿ ಆ ಜೀವನವು ಮೌಲ್ಯಯುತವಾದುದಲ್ಲ ಎಂದು ತಿಳಿಸಿದರು.

ನಾವು ಸುರಕ್ಷಿತರಾಗಿರಬೇಕು. ಇತರರನ್ನು ಸುರಕ್ಷಿತವಾಗಿಟ್ಟುಕೊಳ್ಳಲು ಜಾಗರೂಕರಾಗಿರಬೇಕು ಎಂದು ತಿಳಿಸಿದ ಅಪರ ಜಿಲ್ಲಾಧಿಕಾರಿಗಳು, ಅಧಿಕಾರಿಗಳು ಸಹ ಸಾರ್ವಜನಿಕ ಸೇವೆ ಸೌಲಭ್ಯ ಒದಗಿಸಲು ವಿಳಂಬ ಮಾಡಬಾರದು. ಜನರನ್ನು ಕಚೇರಿಗಳಿಗೆ ಅಲೆದಾಡಿಸಬಾರದು ಎಂದರು.

ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ, 2008 ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ವಿಶ್ವ ಮಾನವೀಯ ದಿನವನ್ನು ಆಚರಿಸಲು ಅಂಗೀಕರಿಸಿತ್ತು. 2009 ರಲ್ಲಿ ಅಧಿಕೃತವಾಗಿ ಆಚರಿಸಲಾಯಿತು ಎಂದು ತಿಳಿಸಿದರು.

ಬಳಿಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಆರೋಗ್ಯ, ಕಾರ್ಮಿಕ, ಅಗ್ನಿಶಾಮಕ ಮತ್ತು ವಿಕಲಚೇತನರ ಕಲ್ಯಾಣ ಇಲಾಖೆಯ ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಐದು ವಿಷಯಗಳ ಕುರಿತು ಸಲಹೆ ಮತ್ತು ಅಂಶಗಳನ್ನು ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹನುಮನಗೌಡ ಪೊಲೀಸ್ ಪಾಟೀಲ್, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪರಿಣಿತ ಪರಮೇಶ, ಕಾರ್ಮಿಕ ಇಲಾಖೆಯ ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜೆ.ಖೈನೂರ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಅಧಿಕಾರಿ ಗೋವಿಂದಪ್ಪ.ಹೆಚ್.ಎಂ ಸೇರಿದಂತೆ ಜಿಲ್ಲಾ ಮಾನವೀಯ ಕಾರ್ಯಕರ್ತರು ವಿಡಿಯೋ ಸಂವಾದದಲ್ಲಿ ಭಾಗವಹಿಸಿದ್ದರು.

## ಅಂಚೆ ಇಲಾಖೆಯಿಂದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಅಂಚೆ ಇಲಾಖೆಯಿಂದ ಅಂಚೆ ಚೀಟಿಗಳ ಸಂಗ್ರಹ ಉತ್ತೇಜಿಸಲು ದೀನ್ ದಯಾಳ್ ಸ್ಪರ್ಶ್ ಯೋಜನೆಯಡಿ 6 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಈ ಯೋಜನೆಯಡಿ ಅಂಚೆ ಚೀಟಿಗಳ ಮೌಲ್ಯ, ಸಂಶೋಧನೆಯ ಹವ್ಯಾಸವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಲು ವಿದ್ಯಾರ್ಥಿ ವೇತನ ನೀಡಲಾಗುವುದು. ಚಿಕ್ಕವಯಸ್ಸಿನಲ್ಲಿ ಮಕ್ಕಳಲ್ಲಿ ಅಂಚೆ ಚೀಟಿಗಳ ಸಂಗ್ರಹ ಮತ್ತು ಉತ್ತೇಜನ ಮೂಲಕ ಸದಾಭಿರುಚಿಯ ಆರೋಗ್ಯಪೂರ್ಣ ಜ್ಞಾನಧಾರಿತ ಹವ್ಯಾಸ ರೂಢಿಸುವುದು ಮುಖ್ಯ ಉದ್ದೇಶವಾಗಿದೆ.

ಈ ಯೋಜನೆಯ ಲಾಭಪಡೆಯಲು ವಿದ್ಯಾರ್ಥಿಯು 2024–25ನೇ ಶೈಕ್ಷಣಿಕ ಸಾಲಿನಲ್ಲಿ ಶೇ.60 ರಷ್ಟು ಅಂಕ ಪಡೆದಿರಬೇಕು. ಅಂಚೆ ಚೀಟಿಗಳ ಠೇವಣಿ ಖಾತೆ ಅಥವಾ ಶಾಲೆಗಳ ಅಂಚೆ ಚೀಟಿ ಕ್ಲಬ್ ನಲ್ಲಿ ಸದಸ್ಯನಾಗಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.6,000 ವಿದ್ಯಾರ್ಥಿ ವೇತನ ನೀಡಲಾಗುವುದು.

ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಮತ್ತು ಯೋಜನೆ ಕಾರ್ಯದ ಆಧಾರದಲ್ಲಿ ಫಲಾನುಭವಿಯನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸುವ ಕೊನೆ ದಿನ ಸೆ.05 ಆಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ವೆಬ್‌ಸೈಟ್ www.indispost.gov.in ಅಥವಾ www.karnatakspost.gov.in ಮತ್ತು ಆಸಕ್ತ ವಿದ್ಯಾರ್ಥಿಗಳು ಮೊ.9880979730, 9741567829, 08392–266037 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ವಿಭಾಗ ಅಂಚೆ ಅಧೀಕ್ಷಕವರ ಕಚೇರಿಯ ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಳ್ಳಾರಿ: ಮಣ್ಣಿನ ಗಣೇಶ ಮೂರ್ತಿ ತಯಾರಿಸಿ ಸಂಭ್ರಮಿಸಿದ ಶಾಲಾ–ಕಾಲೇಜು ಮಕ್ಕಳು
## ಪರಿಸರ ಸ್ನೇಹಿ ಗೌರಿ–ಗಣೇಶ ಹಬ್ಬ ಆಚರಿಸಿ, ಪರಿಸರ ಮಾಲಿನ್ಯ ತಡೆಗಟ್ಟಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.19–ಪ್ಲಾಸ್ಟರ್ ಆಫ್ ಪ್ಯಾರೀಸ್ (ಪಿಒಪಿ) ನಿಂದ ತಯಾರಿಸಿದ ಗಣೇಶ ಮೂರ್ತಿಗಳು ಪರಿಸರಕ್ಕೆ ಹಾನಿಕಾರಕವಾಗಿದ್ದು, ಪ್ರತಿಯೊಬ್ಬರು ಪರಿಸರ ಸ್ನೇಹಿ ಮಣ್ಣಿನ ಗಣೇಶನ ಮೂರ್ತಿ ಪ್ರತಿಷ್ಠಾಪಿಸಿ ಪೂಜಿಸುವ ಮೂಲಕ ಪರಿಸರ ಮಾಲಿನ್ಯ ತಡೆಗಟ್ಟಲು ಕೈಜೋಡಿಸಿ, ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಅರಣ್ಯ ಇಲಾಖೆ ವತಿಯಿಂದ ನಗರದ ಬೆಳಗಲ್ ಕ್ರಾಸ್‌ನ ಅರಣ್ಯ ಇಲಾಖೆಯ ನರ್ಸರಿ ಪ್ರಕೃತಿ ಭವನದಲ್ಲಿ ಮಂಗಳವಾರ ಏರ್ಪಡಿಸಿದ್ದ ಪರಿಸರ ಸ್ನೇಹಿ ವೃಕ್ಷ ಗಣೇಶ ಮೂರ್ತಿ ಮಣ್ಣಿನಿಂದ ತಯಾರಿಸುವ ಕಾರ್ಯಾಗಾರವನ್ನು ಮಣ್ಣಿನ ಗಣೇಶನ ಮೂರ್ತಿ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಈ ಕಾರ್ಯಾಗಾರದಲ್ಲಿ ಮಾಡುವ ಮಣ್ಣಿನ ಮೂರ್ತಿಯ ಗಣೇಶನಲ್ಲಿ ವಿವಿಧ ಸಸ್ಯಗಳ ಬೀಜಗಳನ್ನು ಇಟ್ಟಿರುವುದರಿಂದ ಮನೆಯ ಮುಂದಿನ ಪಾಟ್(ಕುಂಡ)ನಲ್ಲಿ ಮೂರ್ತಿಗೆ ನೀರು ಹಾಕುವುದರ ಮೂಲಕ ವಿಸರ್ಜನೆ ಮಾಡುವುದರಿಂದ ಅದು ಸಸಿಯಾಗಿ ಬೆಳೆಯುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಮಾತನಾಡಿ, ಪಿಒಪಿ. ಗಣೇಶ ಮೂರ್ತಿಯನ್ನು ನದಿ ಅಥವಾ ಬಾವಿಯಲ್ಲಿ ವಿಸರ್ಜನೆ ಮಾಡುವುದರಿಂದ ಅದರ ವಿಷಕಾರಕಗಳು ಪರಿಸರಕ್ಕೆ ಹಾನಿಕಾರಕ ಆಗುವುದಲ್ಲದೇ ನೀರಿನಲ್ಲಿ ಬೆರೆತು ಬೆಳೆದ ಬೆಳೆಯ ಮೂಲಕ ಸಹ ನಮ್ಮ ದೇಹ ಸೇರಿ ಅನಾರೋಗ್ಯ ಉಂಟುಮಾಡುತ್ತವೆ ಎಂದು ತಿಳಿಸಿದರು.

ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಬಸವರಾಜ ಕೆ.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲಾ ಅರಣ್ಯ ಇಲಾಖೆ ವತಿಯಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಮಣ್ಣಿನಿಂದ ಗಣೇಶ ಮೂರ್ತಿ ತಯಾರು ಮಾಡುವ ತರಬೇತಿ ನೀಡುತ್ತಿದ್ದು, ಇದರ ಸದುಪಯೋಗವನ್ನು ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಹಂಪಿ ವಿಶ್ವವಿದ್ಯಾಲಯದ ಕಲಾ ವಿಭಾಗದ ಪಿಹೆಚ್‌ಡಿ ಸಂಶೋಧನಾರ್ಥಿಗಳು ಮಣ್ಣಿನ ಗಣೇಶ ಮೂರ್ತಿ ಮಾಡುವ ತರಬೇತಿ ನೀಡಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ವಲಯ ಅರಣ್ಯಾಧಿಕಾರಿ ಡಿ.ಕೆ. ಗಿರೀಶ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತರು ಸೇರಿದಂತೆ ನಗರದ ವಿವಿಧ 20 ಶಾಲಾ–ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸೇರಿ ಸುಮಾರು 2700 ಜನರು ಭಾಗವಹಿಸಿದ್ದರು.

## ಅದ್ದೂರಿಯಾಗಿ ಜರುಗಿದ ಶ್ರೀ ಏಳು ಕೋಟಿ ಮಲ್ಲಯ್ಯನ ಸರಪಳಿ ಹರಿಯುವ ಕಾರ್ಯಕ್ರಮ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಯಲಬುರ್ಗಾ ಶ್ರಾವಣ ಮಾಸದ ಅಂಗವಾಗಿ ತಿಂಗಳ ಪರ್ಯಂತರವಾಗಿ ನಿರಂತರವಾಗಿಬೆಳಗಿನಸಮಯದಲ್ಲಿ ಶ್ರೀ ಏಳು ಕೋಟಿ ಮಲ್ಲಯ್ಯ ಸ್ವಾಮಿಗೆ ರುದ್ರಾಭಿಷೇಕ ಬಿಲ್ವಾರ್ಚನೆ ಸಾಗಿ ಬಂದಿರುತ್ತದೆ ಇದರ ಪ್ರಯುಕ್ತವಾಗಿ ಅ 17 ರಂದು ರವಿವಾರ ಬೆಳಗ್ಗೆ 11 ಗಂಟೆಗೆ ಗೋಗಯ್ಯನವರಿಂದ ಮಲ್ಲಯ್ಯನ ಸರಪಳಿ ಹರಿಯುವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿದ ಬಳಿಕ ,ಸರ್ವ ಭಕ್ತರ ಸಹಕಾರದಲ್ಲಿ ಶ್ರೀ ಏಳು ಕೋಟಿ ಮಲ್ಲಯ್ಯ ಸ್ವಾಮಿಯ ಉತ್ಸವ ಮೂರ್ತಿಯ ಭವ್ಯ ಮೆರವಣಿಗೆ ಸುಮಂಗಲಿಯರ, ಕುಂಭ–ಕಳಸದೊಂದಿಗೆ,ಡೊಳ್ಳು, ಕರಡಿಮಜಲು ಭಜನೆ ಸಕಲ ವಾದ್ಯಗಳೊಂದಿಗೆ ನಗರದ ಪ್ರಮುಖ ರಾಜಬೀದಿಯಲ್ಲಿ ಮೆರವಣಿಗೆ ಸಾಗಿ ಬಂದು, ಸಂಜೆ 6 ಗಂಟೆಗೆ ದೇವಸ್ಥಾನ ತಲುಪಿ, ಉತ್ಸವ ಮೂರ್ತಿ ದೇವಸ್ಥಾನದ ಒಳಗೆ ಪ್ರವೇಶ ಮಾಡಿದ ನಂತರ ಮಹಾಪ್ರಸಾದ ಜರುಗಿತು. ಕೊಪ್ಪಳ ಜಿಲ್ಲೆಯ ಸುತ್ತಮುತ್ತಲಿನ ಸರ್ವ ಧರ್ಮದ ಭಕ್ತರು ಭಾಗವಹಿಸಿ ಯಶಸ್ವಿಗೊಳಿಸಿದರು. ಈ ವೇಳೆ ನಿವೃತ್ತ ನ್ಯಾಯಾಧೀಶರಾದ ಬಿ.ಕೆ.ಭೂತೆ, ಸಮಿತಿಯ ಪ್ರಮುಖರಾದ ಶಿವಕುಮಾರ ಭೂತೆ, ಶರಣಬಸಪ್ಪ ದಾನಕೈ, ಫಕೀರಪ್ಪ ಗಾಣಗೇರ, ಮಹೇಶ ಭೂತೆ, ರಾಮಣ್ಣ ನೆರೆಗಲ್ಲ, ತಿಪ್ಪಣ್ಣ ಉಪ್ಪಾರ, ಮಲ್ಲಿಕಾರ್ಜುನ ಸಾದರಖಾನ, ಶಂಕ್ರಪ್ಪ ಬಡಿಗೇರ, ಶರಣಪ್ಪ ಭಾವಿಕಟ್ಟಿ,,ದೇವಪ್ಪ ಉಪ್ಪಾರ, ಸಂಗಪ್ಪ ಕುಂಬಾರ, ಈಶಪ್ಪ ಬನ್ನಿಕೊಪ್ಪ, ಮಲ್ಲಿಕಾರ್ಜುನಗೌಡ ಪೋ.ಪಾಟಿಲ್, ಮಲ್ಲೇಶಗೌಡ ಮಾಲಿಪಾಟೀಲ್, ನಾಗರಾಜ ದಿವಟರ, ಮಹಾದೇವಪ್ಪ ಹಡಪದ, ಮಲ್ಲಪ್ಪ ಭೂತೆ, ವೀರೇಶ ಹಡಪದ ಮತ್ತುಗೋಗ್ಗಯ್ಯನವರಾದ ನಾಗಪ್ಪ ಇಟಗಿ, ನಾಗಪ್ಪ ಹುಂಡಿ, ಶಿವಪುತ್ರಪ್ಪ ಕೊಪ್ಪಳ ಹಾಗು ಶಿಮಣ್ಣ , ಬಸವಂತಪ್ಪ ಹಳ್ಳಿ ಬಸನಗೌಡ ಮಾಲಿಪಾಟೀಲ ಹಾಗು ಅರ್ಚಕರಾದ ಚನ್ನಬಸಯ್ಯ ಅರಕೇರಿಮಠ, ಶರಭಯ್ಯ ಶೀರೂರಮಠ ಸೇರಿದಂತೆ ಇತರರು ಇದ್ದರು.

## ಜನ ಸಾಮಾನ್ಯರ ಪಕ್ಷಕ್ಕೆ ನೋಟಿಸ್

ಮಲ್ಲಮ್ಮ ನುಡಿವಾರ್ತೆ

ಬಾಗಲಕೋಟೆ : ಆಗಸ್ಟ 19–ಭಾರತ ಚುನಾವಣಾ ಆಯೋಗವು ಪ್ರಜಾ ಪ್ರತಿನಿಧಿ ಕಾಯ್ದೆ 1951 ಕಲಂ 29ಎ ರಡಿ ನೋಂದಾಯಿಸಲಾಗಿರುವ ಜನ ಸಾಮಾನ್ಯರ ಪಾರ್ಟಿ (ಕರ್ನಾಟಕ) ಪಕ್ಷವು ಕಳೆದ ಆರು ವರ್ಷದ ಕಾಲಾವಧಿಯಲ್ಲಿ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸದೇ ಇರುವದರಿಂದ ಸದರಿ ಪಕ್ಷದ ನೋಂದಣಿಯನ್ನು ಏಕೆ ರದ್ದುಗೊಳಿಸಬಾರದು ಎಂಬ ಬಗ್ಗೆ ಸೆಪ್ಟೆಂಬರ 1 ರೊಳಗಾಗಿ ಲಿಖಿತ ಸಮಜಾಯಿಸಿಯನ್ನು ನೀಡುವಂತೆ ಸೂಚಿಸಿ, ಪಕ್ಷದ ಅಧ್ಯಕ್ಷರು ಅಥವಾ ಪ್ರಧಾನ ಕಾರ್ಯದರ್ಶಿಯವರಿಗೆ ಆಗಸ್ಟ 12 ರಂದು ಹೊರಡಿಸಿದ ನೋಟಿಸ್‌ನ್ನು ಜಾರಿ ಮಾಡಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಟಾಸ್ಕಪೋರ್ಸ, ಮರಳು ಉಸ್ತುವಾರಿ ಸಮಿತಿ ಸಭೆ ಗಣಿಗಾರಿಕೆಯಲ್ಲಿ ನಿಯಮ ಉಲ್ಲಂಘನೆ ಕಂಡು ಬಂದಲ್ಲಿ ಕ್ರಮ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 19– : ಜಿಲ್ಲೆಯಲ್ಲಿ ಈಗಾಗಲೇ ಅನುಮತಿ ಪಡೆದ ಮರಳು ಗಣಿಗಾರಿ–ಕೆ, ಗ್ರಾನೈಟ್ ಕಲ್ಲುಗಣಿ, ಕಲ್ಲು ಪುಡಿ ಮಾಡುವ ಘಟಕಗಳು, ಸಾಗಾಣಿಕೆಗಳು ನಿಯಮಾನುಸಾರ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಸೂಕ್ತ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮರಳು ಉಸ್ತುವಾರಿ ಸಮಿತಿ, ಜಿಲ್ಲಾ ಟಾಸ್ಕಪೋರ್ಸ (ಗಣಿ) ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮೊದಲು ಪರಾನಿಗೆ ನೀಡಿದ ಘಟಕಗಳ ಮೇಲೆ ಗಣಿ ಮತ್ತು ಭೂವಿಜ್ಞಾನ, ಲೋಕೋಪಯೋಗಿ ಹಾಗೂ ತಹಶೀಲ್ದಾರ ಸೇರಿ ಜಂ–ಟಿಯಾಗಿ ಪರಿಶೀಲನೆ ನಡೆಸಬೇಕು. ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಸೂಕ್ತ ಕ್ರಮಕ್ಕೆ ಮುಂದಾಗಬೇಕು. ಇಲ್ಲವೇ ಅನುಮತಿ ರದ್ದುಪಡಿಸಲು ಮುಂದಾಗಬೇಕು ಎಂದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲಾ ಮತ್ತು ತಾಲೂಕಾ ಸಮಿತಿಗಳಿಂದ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ, ದಾಸ್ತಾನುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಪರಿಶೀಲಿಸಲಾಗಿ ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ 9 ಇದೆ. ಆದರೆ ಅವರ ಮೇಲೆ ಏಕೆ ಪ್ರಕರಣ ದಾಖಲಿಸಿಲ್ಲ ಎಂದು ಜಿಲ್ಲಾಧಿಕಾರಿಗಳು ಪ್ರಶ್ನಿಸಿದರು. ಮೇಲೆ ಕೇವಲ ದಂಡ, ನೋಟಿಸ್ ಕೊಟ್ಟರೆ ಸಾಲದು ಪ್ರಕರಣ ದಾಖಲಿಸಬೇಕು. ಅಲ್ಲದೇ ಮರಳು ಗಣಿಗಾರಿಕೆ ಪರವಾನಿಗೆ ಬಂದ ಅರ್ಜಿಗಳನ್ನು ಸೂಕ್ತ ಪರಿಶೀಲನೆ ನಂತರ ಅನುಮತಿ ನೀಡುವ ಕೆಲಸವಾಗಬೇಕು ಎಂದರು.

ಪಟ್ಟಾ ಜಮೀನಿನಲ್ಲಿ ಮರಳು ಗಣಿಗಾರಿಕೆ ಕೋರಿ ಬಂದ ಅರ್ಜಿಗಳಲ್ಲಿ ನಿಯಮಾನುಸಾರ ಇದ್ದಲ್ಲಿ ಮಾತ್ರ ಅನುಮತಿ ನೀಡಬೇಕು. ಈ ಬಗ್ಗೆ ಅರ್ಜಿಗಳನ್ನು ಪರಿಶೀಲಿಸಿ, ನಂತರ ಘಟಕಗಳ ಸ್ಥಳಕ್ಕೂ ಸಹ ಭೇಟಿ ಸರಿಯಾಗಿದ್ದಲ್ಲಿ ಮಾತ್ರ ಪರವಾನಿಗೆ ನೀಡುವ ಕೆಲಸವಾಗಬೇಕು. ಪರವಾನಿಗೆ ನೀಡುವಾಗ ಎಲ್ಲವನ್ನು ಪರಿಶೀಲನೆ ಮಾಡಬೇಕು. ಪರವಾನಿಗೆ ನೀಡಿದ ನಂತರ ಸಮಸ್ಯೆಯಾಗುವದನ್ನು ತಪ್ಪಿಸಲು ಮೊದಲ ಹಂತದಲ್ಲಿಯೇ ಸೂಕ್ರ ಪರಿಶೀಲನೆ ಅಗತ್ಯವಾಗಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಜಿಲ್ಲಾಧಿಕಾರಿಗಳ ಜೊತೆ ಧ್ವನಿ ಗೂಡಿಸಿದರು.

ಕಲ್ಲುಪುಡಿ ಮಾಡುವ ಘಟಕಗಳ ಲೈಸನ್ಸ್ ನೀಡುವ, ಅವಧಿ ವಿಸ್ತರಿಸುವ ಕುರಿತು ಬಂದ ಅರ್ಜಿಗಳನ್ನು ಪರಿಶೀಲಿಸಿ ಫಾರಂ–ಸಿ ವಿತರಿಸುವ ಕೆಲಸವಾಗಬೇಕು. ಅಲ್ಲದೇ ಘಟಕ ಸ್ಥಾಪನೆ ಮಾಡುವ ಜಮೀನು ಎನ್.ಎ ಆಗಿರಬೇಕು. ಆಗದಿದ್ದಲ್ಲಿ ಅನುಮತಿಯನ್ನು ನೀಡಬಾರದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಮರಳು ಸಾಗಿಸುವ ವಾಹನಗಳಿಗೆ ಕಡ್ಡಾಯವಾಗಿ ಜಿ.ಪಿ.ಎಸ್ ಅಳವಡಿಸಿರಬೇಕು. ಅನುಮತಿ ಇಲ್ಲದ ವಾಹನಗಳ ಮೇಲೆ ಕ್ರಮವಹಿಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪನಿರ್ದೇಶಕ ಷಣ್ಮುಖ ಡಿ.ಎಚ್, ಜಿಲ್ಲಾ ಪರಿಸರ ಅಧಿಕಾರಿ ಅನಿಕುಮಾರ ಚಳಗೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರೈಲಿನಲ್ಲಿ ಹೃದಯಾಘಾತ ಕಲಾದಗಿ ಯುವಕನ ಸಾವು.



ಮಲ್ಲಮ್ಮ ನುಡಿ ವಾರ್ತೆ.

ಬಾಗಲಕೋಟೆ,ಆ.19 –ತಿರುಪತಿ ತಿಮ್ಮಪ್ಪನ ದರ್ಶನ ಪಡೆದು ಮರಳಿ ತನ್ನೂರಿಗೆ ಬರುತ್ತಿದ್ದ ತಾಲೂಕಿನ ಕಲಾದಗಿಯ ಯುವಕ ರೈಲಿನಲ್ಲಿ ಪ್ರಯಾಣಿಸುತ್ತಿದ್ದಾಗಲೇ ಹೃದಯಾಘಾತದಿಂದ ಸಾವನ್ನಪ್ಪಿದ್ದಾನೆ. ಮಂಗಳವಾರ ಬೆಳಿಗ್ಗೆ 6 ಗಂ–ಟೆಗೆ ತಿರುಪತಿಯಿಂದ ಹುಬ್ಬಳ್ಳಿಗೆ ಹೊರಟ ಪ್ಯಾಸೆಂಜರ್ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಕಲಾದಗಿಯ ಕಟ್ಟಡ ಕಾರ್ಮಿಕ ಯಲ್ಲಪ್ಪ ಅಡಗಲ್ಲ (35) ಮುಂಜಾನೆ 7 ಗಂಟೆ–ಯ ವೇಳೆಗೆ ಹೃದಯಾಘಾತಕ್ಕೆ ಒಳಗಾಗಿ ಸಾವನ್ನಪ್ಪಿದ್ದಾನೆಂದು ಹೇಳಲಾಗಿದೆ.

## ಸರಣಿ ಅಪಘಾತ – ಓರ್ವ ಸಾವು.

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.19–ಹುಬ್ಬಳ್ಳಿ–ಸೋಲಾಪುರ ರಾಷ್ಟ್ರೀಯ ಹೆದ್ದಾರಿಯ ಅನಗವಾಡಿ ಸೇತುವೆ ಬಳಿ ಮಂಗಳವಾರ ಸರಣಿ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ ವ್ಯಕ್ತಿಯೋರ್ವ ಮೃತಪಟ್ಟಿದ್ದಾನೆ. ಸಾರಿಗೆ ಸಂಸ್ಥೆ ಬಸ್ಸಿಗೆ ಕ್ರೂಸರ್ ವಾಹನವೊಂದು ಢಿಕ್ಕಿ ಹೊಡೆದು ಮೂವರು ಗಂಭೀರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲು ಸ್ಥಳಕ್ಕೆ ಬಂದ ಅಂಬುಲೆನ್ಸ್ ಗೆ ಅದೇ ಮಾರ್ಗದಲ್ಲಿ ತೆರಳುತ್ತಿದ್ದ ಓಮಿನಿ ಕಾರು ಢಿಕ್ಕಿ ಹೊಡೆದಿದೆ. ಆಗ ಓಮಿನಿ ಕಾರು–ಅಂಬುಲೆನ್ಸ್ ಎರಡೂ ಪಲ್ಟಿ ಆಗಿವೆ. ಪಲ್ಟಿಯಾದ ಓಮಿನಿ ಕಾರು ಅಲ್ಲೇ ದನ ಮೇಯಿಸುತ್ತಿದ್ದ ಚಿತ್ತಪ್ಪ ನೀಲನ್ನವರ ಎಂಬ ವ್ಯಕ್ತಿಗೆ ರಭಸದಿಂದ ತಾಕಿದಾಗ ಆ ವ್ಯಕ್ತಿ ತೀವ್ರವಾಗಿ ಗಾಯಗೊಂಡು ಆಸ್ಪತ್ರೆಗೆ ಸಾಗಿಸುವ ಮಾರ್ಗದಲ್ಲಿ ಸಾವನ್ನಪ್ಪಿದ್ದಾನೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ರಾಯಚೂರು ಆಗಸ್ಟ್ 19–ಜಿಲ್ಲೆಯ ಮುದಗಲ್ ಪಿ.ಎಮ್ ಶ್ರೀ ಜವಾಹರ್ ನವೋದಯ ವಿದ್ಯಾಲಯದವತಿಯಿಂದ ಪಿಯುಸಿ ವಿಜ್ಞಾನ ವಿಭಾಗದ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಆಗಸ್ಟ್ 20ರವರೆಗೆ ವಿಸ್ತರಿಸಲಾಗಿದೆ.

10ನೇತರಗತಿ ಪಾಸದ ರಾಯಚೂರು ಜಿಲ್ಲೆಯ ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ: https://forms.gle/6cgjmjq21ZkeqULs7 ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7204109046 ಅಥವಾ 9703473495ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಿ.ಎಮ್ ಶ್ರೀ ಜವಾಹರ್ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿವರಾಜ ತಂಗಡಗಿ ಅವರದ್ದು ಬೇಜವಾಬ್ದಾರಿ ಧೋರಣೆ ಎಸ್.ಗುರುಲಿಂಗನಗೌಡ ಆರೋಪ

(ವೀರೇಶ ಪೂಜಾರ)

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ತುಂಗಭದ್ರಾ ಜಲಾಶಯದ ವಿಚಾರದಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ ಬೇಜವಾಬ್ದಾರಿ ಧೋರಣೆಗಳನ್ನು ತಾಳಿದ್ದಾರೆ ಎಂದು ಭಾರತೀಯ ಜನತಾ ಪಾರ್ಟಿ ರಾಜ್ಯ ರೈತ ಮೋರ್ಚಾ ಘಟಕದ ಉಪಾಧ್ಯಕ್ಷರಾದ ಎಸ್. ಗುರುಗಲಿಂಗನಗೌಡ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಗಳ ದುರಸ್ತಿಯಲ್ಲಿ ಕರ್ನಾಟಕ ಸರ್ಕಾರ ದಿವ್ಯ ನಿರ್ಲಕ್ಷ್ಯ ತಾಳಿದ್ದಲ್ಲದೆ ರೈತರಿಗೆ ದ್ರೋಹ ಎಸಗಿದೆ. ಆ ಮೂಲಕ ರೈತರ ಬೆಳೆಗಳು ನಷ್ಟ ಹೊಂದಿದಲ್ಲಿ ಪ್ರತಿ ಎಕರೆಗೆ ತಲಾ ಒಂದು ಲಕ್ಷ ರೂಪಾಯಿ ಪರಿಹಾರ ಧನ ನೀಡಬೇಕೆಂದು ತಾಕೀತು ಮಾಡಿದ್ದಾರೆ. ಸರ್ಕಾರದ ಒಬ್ಬ ಜವಾಬ್ದಾರಿಯುತ ಸಚಿವರಾಗಿ ತಂಗಡಗಿ ಬೇಜವಾಬ್ದಾರಿ ಮತ್ತು ಬಾಲಿಶ ಹೇಳಿಕೆಗಳನ್ನು ನೀಡಿ ರೈತರಲ್ಲಿ ಆತಂಕ ಸೃಷ್ಟಿಸುವುದನ್ನು ತಕ್ಷಣವೇ ನಿಲ್ಲಿಸಬೇಕು. ಸುಳ್ಳು ಹೇಳಿ ಅಧಿಕಾರ ಪಡೆದ ನೀವು, ಆಡಳಿತದಲ್ಲೂ ಸುಳ್ಳು ಹೇಳಿ ರೈತರು ಮತ್ತು ಕೂಲಿಕಾರರ ಬದುಕನ್ನು ಬೀದಿಪಾಲು ಮಾಡಬೇಡಿ ಎಂದು ಕಿಡಿ ಕಾರಿದ್ದಾರೆ.

ಕ್ರಸ್ಟ್ ಗೇಟ್ ಅಳವಡಿಸಿ:

ತುಂಗಭದ್ರಾ ಜಲಾಶಯದ ತಜ್ಞರ ಸಲಹೆ ಪಡೆದು ಕೂಡಲೇ ಮುಂದಿನ ಹಂಗಾಮು ಮುಗಿದ ನಂತರ, ಪ್ರತಿ ಗುತ್ತಿಗೆದಾರನಿಗೆ ಮೂರು ಗೇಟುಗಳಂತೆ ನೀಡಿ, ಮೂರು ತಿಂಗಳ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ. ಇದರಿಂದ ರೈತರಿಗೆ ಎರಡು ಬೆಳೆಗಳೂ ಸಿಗುತ್ತವೆ ಮತ್ತು ಜಲಾಶಯದ ಸುರಕ್ಷತೆಯೂ ಖಚಿತವಾಗುತ್ತದೆ. ರೈತರಿಗೆ ನಿರೀ–ಕ್ಷೆಯಂತೆ ಎರಡೂ ಬೆಳೆಗಳೂ ಸಿಗುವಂತೆ ಕ್ರಮ ಕೈಗೊಳ್ಳಬೇಕು. ಜಲಾಶಯಕ್ಕೆ ಯಾವುದೇ ಅಪಾಯ ಎದುರಾಗದಿರುವಂತೆ ತಜ್ಞ ಇಂಜಿನಿಯರುಗಳ ಸಲಹೆಗಳಂತೆ ಕ್ರಸ್ಟ್ ಗೇಟ್ ಗಳ ಅಳವಡಿಕೆ ಮಾಡಬೇಕೆಂದು ತಿಳಿಸಿದ್ದಾರೆ.

ಸರ್ಕಾರದ್ದು ಭಂಡ ಧೈರ್ಯ:

ಕಳೆದ ಜೂನ್ 25 ರಂದು ಬೆಂಗಳೂರಿನಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ನಡೆದಿತ್ತು. ಈ ಸಭೆ ನಡೆಯುವ ಮೂರು ತಿಂಗಳು ಮುಂಚೆಯೇ ಕೇಂದ್ರ ಜಲಶಕ್ತಿ ಸಚಿವಾಲಯದ ತಾಂತ್ರಿಕ ತಜ್ಞರ ಸಮಿತಿಯು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ, ಗೇಟುಗಳ ಶಿಥಿಲಾವಸ್ಥೆಯ ಬಗ್ಗೆ ನಮಗ್ರ ಅಧ್ಯಯನ ನಡೆಸಿತ್ತು. "ಗೇಟುಗಳನ್ನು ತಕ್ಷಣವೇ ಬದಲಿಸಲೇಬೇಕು' ಎಂದು ಸ್ಪಷ್ಟ ಎಚ್ಚರಿಕೆಣಟಿಜಜಜಿಟಿಜಜ ನೀಡಿದ್ದರೂ ಸಾರಾಸಗಟಾಗಿ ನಿರ್ಲಕ್ಷಿಸಿ, ಭಂಡ ಧೈರ್ಯದಿಂದ ಜಲಾಶಯದಲ್ಲಿ 80 ಟಿಎಂಸಿ ನೀರನ್ನು ಸರ್ಕಾರ ಸಂಗ್ರಹಿಸಿದೆ ಎಂದು ಆರೋಪಿಸಿದ್ದಾರೆ.



ವಿಶ್ವಾಸ ಕಳೆದುಕೊಂಡ ಸರ್ಕಾರ:

ಅಂದೇ ಸರಿಯಾದ ಯೋಜನೆ ರೂಪಿಸಿದ್ದರೆ ಸಮಸ್ಯೆಯೇ ಇರುತ್ತಿರಲಿಲ್ಲ. ಕ್ರಸ್ಟ್ ಗೇಟ್ ಗಳನ್ನು ಆದ್ಯತೆ ಮೇರೆಗೆ ಬೇಸಿಗೆಯಲ್ಲಿ ಸರಿಪಡಿಸಬೇಕಾಗಿತ್ತು. ಆ ಅವಧಿಯಲ್ಲಿ ಎಲ್ಲಾ 33 ಗೇಟುಗಳ ದುರಸ್ತಿ ಕಾಮಗಾರಿಯನ್ನು ಒಂದೇ ಗುತ್ತಿಗೆದಾರನಿಗೆ ನೀಡುವ ಬದಲು, 11 ಗುತ್ತಿಗೆದಾರರಿಗೆ ತಲಾ 3 ಗೇಟುಗಳಂತೆ "ತುಂಡು ಗುತ್ತಿಗೆ' ನೀಡಿದ್ದರೆ, ಪ್ರತಿಯೊಬ್ಬರಿಗೂ ಒಂದು ಗೇಟು ಸರಿಪಡಿಸಲು ಅವಕಾಶ ಸಿಗುತ್ತಿತ್ತು. ಮೂರೇ ತಿಂಗಳಲ್ಲಿ ಸಂಪೂರ್ಣ ಕಾಮಗಾರಿ ಮುಗಿಸಬಹುದಿತ್ತು. ಟೆಂಡರ್ ನಲ್ಲಿ ಭಾಗವಹಿಸಲು ಕಂಪನಿಗಳು ಮುಂದೆ ಬರಲಿಲ್ಲ ಎಂಬ ಸಚಿವರ ಹೇಳಿಕೆ ಗಮನಿಸಿದರೆ ರಾಜ್ಯ ಸರ್ಕಾರದ ಮೇಲೆ ಯಾರಿಗೂ ವಿಶ್ವಾಸವಿಲ್ಲ ಎಂಬುದು ಇದರಿಂದ ಸಾಬೀತಾಗಿದೆ ಎಂದು ತಿಳಿಸಿದ್ದಾರೆ.

ಸುಮ್ಮನೆ ಕಾಲಹರಣವಾಗುತ್ತಿದೆ:

ಟೆಂಡರ್ ಪ್ರಕ್ರಿಯೆಯಲ್ಲಿ ಅವ್ಯವಸ್ಥೆ ಮತ್ತು ವಿಳಂಬ ಧೋರಣೆ ಅನುಸರಿಸಿರುವ ಸರ್ಕಾರ, ಟೆಂಡರ್ ಕರೆದಾಗಲೇ ಕಾಮಗಾರಿಯ ಕಾಲಮಿತಿಯನ್ನು ನಿಗದಿಪಡಿಸಬೇಕಿತ್ತು. ಸರ್ಕಾರವು ಟೆಂಡರ್ ಪ್ರಕ್ರಿಯೆಯನ್ನೇ ವಿಳಂಬವಾಗಿ ಆರಂಭಿಸಿದೆ. ಗುತ್ತಿಗೆದಾರರು ಹಂಗಾಮು ಆರಂಭವಾದ ಕಾರಣ ಕಾಮಗಾರಿ ಕೈಗೆತ್ತಿಕೊಳ್ಳಲು ಹಿಂದೇಟು ಹಾಕಿದ್ದಾರೆ. ಕಳೆದ ವರ್ಷ ಆಗಸ್ಟ್ ನಲ್ಲಿ 19ನೇ ಗೇಟ್ ಮುರಿದುಬಿದ್ದ ನಂತರ, ಬೇಸಿಗೆಯ ಮೂರು ತಿಂಗಳ ಸುವರ್ಣಾವಕಾಶವನ್ನು ಸರ್ಕಾರ ವೈಫಲ್ಯಗೊಳಿಸಿ, ಸುಮ್ಮನೇ ಕಾಲ ಹರಣ ಮಾಡಿ ರೈತರ ಕೃಷಿ ಚಟುವಟಿಕೆಗಳನ್ನು ವ್ಯರ್ಥ ಮಾಡಿದೆ. ಸರಿಯಾದ ಯೋಜನೆ ರೂಪಿಸಿದ್ದರೆ ಸಮಸ್ಯೆಯೇ ಇರುತ್ತಿರಲಿಲ್ಲ. ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿರುವ ಸರ್ಕಾರ ಮತ್ತು ಬೇಜವಾಬ್ದಾರಿ ಹೇಳಿಕೆ ನೀಡುತ್ತಿರುವ ಸಚಿವ ಶಿವರಾಜ ತಂಗಡಗಿ ಅವರು, ಇಡೀ ರೈತ ಸಮುದಾಯವನ್ನು ಕತ್ತಲಲ್ಲಿರಿಸಿ ಮೋಜು ನೋಡುತ್ತಿದ್ದಾರೆ ಎಂದು ಕಿಡಿ ಕಾರಿದ್ದಾರೆ.

ಬೇಜವಾಬ್ದಾರಿಯ ಪರಮಾವಧಿ:

ಸರ್ಕಾರದ ಐಸಿಸಿ ಸಭೆಯ ನಿರ್ಣಯವನ್ನು ನಂಬಿ, ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ಸುಮಾರು 19 ಲಕ್ಷ ಹೆಕ್ಟೇರ್ ಭೂಮಿಯಲ್ಲಿ ರೈತರು ಭತ್ತ, ಹತ್ತಿ, ಜೋಳ, ಮೆಣಸಿನಕಾಯಿಯಂತಹ ಬೆಳೆಗಳನ್ನು ಬಿತ್ತಿದ್ದಾರೆ. ಮಳೆಯಾಶ್ರಯದಲ್ಲಿ ಈಗಾಗಲೇ ಎರಡು ತಿಂಗಳ ಕಾಲ ಬೆಳೆಗಳು ನಿಂತಿವೆ. ಮುಂಗಾರು ಹಂಗಾಮಿನ ಕೊನೆಯ ಹಂತದಲ್ಲಿ ಬೆಳೆಗೆ ನೀರು ಅತ್ಯಗತ್ಯವಾಗಿದೆ. ಈ ಸಮಯದಲ್ಲಿ, "ಗೇಟುಗಳು ಶಿಥಿಲಗೊಂಡಿವೆ' ಎಂದು ಹೇಳಿ ರೈತರಲ್ಲಿ ಗೊಂದಲ ಮತ್ತು ಆತಂಕ ಸೃಷ್ಟಿಸುತ್ತಿರುವುದು ಸರ್ಕಾರದ ಬೇಜವಾಬ್ದಾರಿತನದ ಪರಮಾವಧಿಯಾಗಿದೆ. ಇದ–ರಿಂದ ನುಣುಚಿಕೊಳ್ಳಲು ಸಚಿವ ತಂಗಡಗಿ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ವಿಫಲ ಯತ್ನ ನಡೆಸುತ್ತಿದ್ದಾರೆ.

ನಾಟಕ ನಿಲ್ಲಿಸಿ:

ತಮ್ಮ ವೈಫಲ್ಯವನ್ನು ಮರೆಮಾಚಲು, ರಾಜ್ಯ ಸರ್ಕಾರವು ಕೇಂದ್ರದ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿದೆ. "ರಾಜ್ಯದ ಕಾರ್ಯದರ್ಶಿ ನೇಮಕಕ್ಕೆ ಕೇಂದ್ರಕ್ಕೆ 8 ಬಾರಿ ಒತ್ತಾಯ ಮಾಡಿದ್ದೇವೆ" ಎಂಬುದು ಬಾಲಿಶ ಮತ್ತು ಸತ್ಯಕ್ಕೆ ದೂರವಾದ ಮಾತು. ಜಲಾಶಯದ ನಿರ್ವಹಣೆ ಮತ್ತು ಆಡಳಿತಾತ್ಮಕ ಜವಾಬ್ದಾರಿ ಸಂಪೂರ್ಣವಾಗಿ ರಾಜ್ಯ ಸರ್ಕಾರದ್ದಾಗಿದೆ. ಕೇಂದ್ರ ಸರ್ಕಾರದ ಪಾತ್ರ ಕೇವಲ ತಾಂತ್ರಿಕ ಸಲಹೆಗೆ ಸೀಮಿತವಾಗಿರುತ್ತದೆ. ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಸಚಿವರು ಆಂಧ್ರ ಮತ್ತು ತೆಲಂಗಾಣ ರಾಜ್ಯಗಳ ಜೊತೆ ಸಮಾಲೋಚನೆ ನಡೆಸಿದ್ದಾಗಿ ಹೇಳುತ್ತಿದ್ದಾರೆ. ತಮ್ಮ ಮನೆ ಮುಂದಿನ ವಿದ್ಯುತ್ ಕಂಬ ಬಿದ್ದರೂ ಅದಕ್ಕೆ ಕೇಂದ್ರವೇ ಹೊಣೆ ಎನ್ನುವ ನಾಟಕವನ್ನು ಸಚಿವರು ಮೊದಲು ನಿಲ್ಲಿಸಬೇಕು ಎಂದು ಎಸ್.ಗುರುಲಿಂಗನಗೌಡ ಅವರು ಮಲ್ಲಮ್ಮ ನುಡಿ ಜಿಲ್ಲಾ ವರದಿಗಾರರಿಗೆ ತಿಳಿಸಿದ್ದಾರೆ.

## ತಿರುಗಲ್ ತಿಮ್ಮಪ್ಪ ವಾರ್ಷಿಕ ಜಾತ್ರೆ ಸಂಪನ್ನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಪ್ರತಿವರ್ಷದಂತೆ ಈ ವರ್ಷವೂ ಕೂಡ ಶ್ರಾವಣ ಮಾಸದ ನಾಲ್ಕನೇ ಶನಿವಾರದಂದು ಜಿಲ್ಲೆಯ ಐತಿಹಾಸಿಕ ದಿಂದಿರಿಗಿ ಪಟ್ಟಣವೆಂದು ಕರೆಯುವ ಕೆರೆಹಳ್ಳಿ ಬಳಿಯ ತಿರುಗಲ್ ತಿಮ್ಮಪ್ಪನ ವಾರ್ಷಿಕ ಜಾತ್ರಾ ಮಹೋತ್ಸವ ಶ್ರದ್ಧಾಭಕ್ತಿಯಿಂದ ಜರುಗಿತು.

ಹಂಪಿ ಕಿಷ್ಕಿಂದೆ ಪಶ್ಚಿಮ ಭಾಗದ ಪ್ರಥಮ ಬಾಗಿಲು ಎಂದು ಕರೆಯುವ ದಿಂದಿರಿಗಿ ಪಟ್ಟಣ ಕಂಪಿಲರಾಯ ಮತ್ತು ಗಂಡುಗಲಿ ಕುಮಾರರಾಮನ ಕಾಲಾವಧಿಯಲ್ಲಿ ಆಡಳಿತಕ್ಕೊಳಪಟ್ಟಿತ್ತು. ಅಂದಿನಿಂದ ಶೈವ–ವೈಷ್ಣವ ಸಂಗಮವೆನಿಸಿದ ತಿರುಗಲ್ ತಿಮ್ಮಪ್ಪ ದೇವಸ್ಥಾನದಲ್ಲಿ ಶ್ರಾವಣ ಮಾಸದ ಕೊನೆ ಶನಿವಾರದಂದು ಜಾತ್ರೆ ಆಚರಿಸುವುದು ವಾಡಿಕೆಯಾಗಿದೆ. ಈ ಬಾರಿ ಶ್ರಾವಣದಲ್ಲಿ ಐದು ಶನಿವಾರಗಳು ಬಂದಿದ್ದರಿಂದ ನಾಲ್ಕನೇ ಶನಿವಾರದಂದು ತಿರುಗಲ್ ತಿಮ್ಮಪ್ಪ ಜಾತ್ರಾ ಮಹೋತ್ಸವ ಆಚರಿಸಲಾಯಿತು ಎಂದು ಭಕ್ತರು ತಿಳಿಸಿದ್ದಾರೆ.

ಕೆರೆಹಳ್ಳಿ ಗ್ರಾಮದ ಪೂಜಾರ ಮನೆತನದ ಭೀಮಪ್ಪ ಗಗ್ಗರಿ ಇವರ ನೇತೃತ್ವದಲ್ಲಿ ಬೆಳಿಗ್ಗೆ ಮಾರುತಿಯ ಮೂರ್ತಿಯನ್ನು ಡೊಳ್ಳು ವಾದ್ಯಗಳು, ಭಜನೆ ಮತ್ತು ಕುಂಭ ಕಳಶದೊಂದಿಗೆ ತೇರಿನ ಹನುಮಪ್ಪ ಬೆಟ್ಟಕ್ಕೆ ಉತ್ಸವದ ಮೂಲಕ ಕರೆ ತರಲಾಯಿತು. ಅಲ್ಲಿನ ಮಜ್ಜನ ಬಾವಿಯಲ್ಲಿ ಮಾರುತಿ ಮೂರ್ತಿಗೆ ಸ್ನಾನ ಮಾಡಿಸಿ ಮಂದಿರಕ್ಕೆ ಕರೆ ತರಲಾಯಿತು. ತೇರಿನ ಹನುಮಂತನಿಗೆ ಎಲೆ ಚೆಟ್ಟಿ ಅಲಂಕಾರ ಪೂಜೆ ಸಲ್ಲಿಸಲಾಯಿತು. ಹತ್ತಿರದಲ್ಲಿಯೇ ಇದ್ದ ನೈಸರ್ಗಿಕ ಪುಷ್ಕರಣಿಯ ಗಂಗೆಯಿಂದ ತಿರುಗಲ್ ತಿಮ್ಮಪ್ಪ, ಲಕ್ಷ್ಮೀ ದೇವಿಯರ ಪಾಳು ಬಿದ್ದ ಮಂದಿರದಲ್ಲಿ ಅಭಿಷೇಕ, ಅಲಂಕಾರ, ಪೂಜೆ, ದೀಪ, ಧೂಪ ಮತ್ತು ಮಹಾಮಂಗಳಾರತಿ ಬೆಳಗಲಾಯಿತು. ಕೆಲಹೊತ್ತು ಭಜನೆ ಕಾರ್ಯಕ್ರಮ ಆಯೋಜಿಸಿ ಬಳಿಕ ಶ್ರೀ ತೇರಿನ ಹನುಮಂತದೇವರ ಮಂದಿರಕ್ಕೆ ಪಲ್ಲಕ್ಕಿಯನ್ನು ತರಲಾಯಿತು. ಮಹಾಮಂಗಳಾರತಿಯಾದ ಬಳಿಕ ಗುಡ್ಡದಲ್ಲಿ ತಯಾರಿಸಿದ ಭಕ್ಷವನ್ನು ದೇವರುಗಳಿಗೆ ನೈವೇದ್ಯ ನೀಡಲಾಯಿತು.



ಒಂದು ದಿನ ಮೊದಲೇ ಗುಡ್ಡಕ್ಕೆ ತೆರಳುವ ಭಕ್ತರು ಜಾತ್ರೆಯ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿರುತ್ತಾರೆ. ಕೊಪ್ಪಳ ಜಿಲ್ಲಾಡಳಿತ ದೇವಸ್ಥಾನಕ್ಕೆ ಕುಡಿಯುವ ನೀರು ಇತ್ಯಾದಿ ಸೌಲಭ್ಯಗಳನ್ನು ಹೊಂದಿಕೆ ಮಾಡಿಕೊಳ್ಳಲಾಗುತ್ತದೆ. ರಾತ್ರಿಯಿಡೀ ಭಜನಾ ಕಾರ್ಯಕ್ರಮ ಜರುಗುತ್ತದೆ. ಜಾತ್ರೆಯ ದಿನ ರಾತ್ರಿ ಕೆರೆಹಳ್ಳಿ ಗ್ರಾಮದಲ್ಲಿ ತೇರಿನ ಹನುಮಪ್ಪನ ಪಾಲಕಿ ಉತ್ಸವದ ಮೆರವಣಿಗೆ ನಡೆಯುತ್ತದೆ. ಮಾರನೆ ದಿನ ಭಾನುವಾರ ಭಜನಾ ಕಾರ್ಯಕ್ರಮದ ಜೊತೆಗೆ ವಾರ್ಷಿಕ ಜಾತ್ರೋತ್ಸವವನ್ನ ಸಂಪನ್ನಗೊಳಿಸಲಾಗುತ್ತದೆ ಎಂದು ಭಕ್ತರು ತಿಳಿಸಿದ್ದಾರೆ.

ಗುಡ್ಡಗಾಡು ಪ್ರದೇಶದಲ್ಲಿರುವ ನಾಗೇಶನಹಳ್ಳಿ, ಬಿಳೇಬಾವಿ, ಚಂದ್ರಗಿರಿ, ಯಡ್ರಹಳ್ಳಿ ಸೇರಿದಂತೆ ಬೂದುಗುಂಪ, ಗುಡ್ಡದಹಳ್ಳಿ, ಇಂದರಗಿ, ಶಹಪುರ ಸೇರಿದಂತೆ ಸುತ್ತಮುತ್ತಲಿನ ನಾನಾ ಗ್ರಾಮಗಳ ಭಕ್ತರು ತೇರಿನ ಹನುಮಂತ ದೇವರ ಜಾತ್ರೆಯಲ್ಲಿ ಪಾಲ್ಗೊಂಡು ಧನ್ಯತೆ ಹೊಂದಿದರು. ಈ ಜಾತ್ರೆ ಶತಮಾಳಿಂದಲೂ ಆಚರಣೆಯಲ್ಲಿದ್ದು ಕೆರೆಹಳ್ಳಿ ಗ್ರಾಮದ ಹಿರಿಯರಾದ ಸಿದ್ರಾಮಪ್ಪ ಭಟ್ಟರ್, ಮಲ್ಲಯ್ಯ ಉಡುಮಕಲ್, ಲಕ್ಕಪ್ಪ ಶಿಳ್ಳೆಕ್ಯಾತರ್, ಗವಿಸಿದ್ದಪ್ಪ ಡೊಳ್ಳಿನ್, ಗುರುರಾಜ ಬೋವಿ, ಹನುಮಂತಪ್ಪ ಉಪ್ಪಾರ, ರಾಮಣ್ಣ ದನಗರ, ಕಲ್ಲಪ್ಪ ತಳವಾರ, ಈರಪ್ಪ ಗುರಿಕಾರ, ವೀರೇಶ ಹಿರೇಮಠ ಸೇರಿದಂತೆ ಇತರೆ ಧುರೀಣರು ಸಂಪ್ರದಾಯವನ್ನು ಮುಂದುವರಿಸಿಕೊಂಡು ಬರುತ್ತಿದ್ದಾರೆ.

### ಇಂದು ಡಿ.ದೇವರಾಜ ಅರಸು ಜಯಂತಿ:

## ವಿವಿಧ ಸಮಾಜದ ಮುಖಂಡರು ಭಾಗಿಯಾಗಲು ಮನವಿ

ಮಲ್ಲಮ್ಮ ನುಡಿವಾರ್ತೆ


ರಾಯಚೂರು ಆಗಸ್ಟ್ 19–ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಗಸ್ಟ್ 20ರ ಬೆಳಿಗ್ಗೆ 10.30ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶ್ರೀ ಡಿ.ದೇವರಾಜ ಅರಸು ಅವರ ಜಯಂತಿ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಭಾಗಿಯಾಗಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಬೆಳಿಗ್ಗೆ 8.30ಕ್ಕೆ ನಗರದ ಅಂಬೇಡ್ಕರ್ ವೃತ್ತದಿಂದ ಚಾಲನೆ ನೀಡಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆ–ಯ ಅಂಗವಾಗಿ ಅವರ ಭಾವಚಿತ್ರ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು, ವಿವಿಧ ಸಂಘ, ಸಂಸ್ಥೆಯ ಮುಖಂಡರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕೃಷ್ಣ ವೇಷದಲ್ಲಿ ಅಥರ್ವ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.19: ಕರ್ನಾಟಕ ಇತಿಹಾಸ ಅಕಾಡೆಮಿಯ ಜಿಲ್ಲಾ ಅಧ್ಯಕ್ಷ ಟಿ. ಹೆಚ್. ಎಂ. ಬಸವರಾಜ್ ಇವರ ಎರೆಡು ವರ್ಷದ ಮೊಮ್ಮಗ ಟಿ. ಹೆಚ್. ಎಂ. ಅಥರ್ವ. ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಬಾಲಕೃಷ್ಣ ವೇಷದಲ್ಲಿ ಎಲ್ಲರ ಗಮನ ಸೆಳೆದಿದ್ದಾನೆ.



## 22 ರಂದು ನೇಮಕಾರಿಗೆ ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಆಗಸ್ಟ 19 –ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ವಿವಿಧ ಹುದ್ದೆಗಳ ನೇಮಕಾತಿಗಾಗಿ ಆಗಸ್ಟ 22 ರಂದು ಬೆಳಿಗ್ಗೆ 10.30 ರಿಂದ ಸಂಜೆ 4 ಗಂಟೆವರೆಗೆ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಯಲಿದ್ದು, ಹಲವು ಖಾಸಗಿ ಕಂಪನಿಗಳು ಭಾಗವಹಿಸಿ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. 19 ರಿಂದ 20 ವರ್ಷದೊಳಗಿನ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವೀಧರರು ತಮ್ಮ ಬಯೋಡಾಟಾ ಮತ್ತು ಮೂಲ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235337, 8147111236ಗೆ ಸಂಪರ್ಕಿಸಬಹುದಾಗಿದೆ.

# ಔರಾದ(ಬಿ), ಕಮಲನಗರ ಅತಿವೃಷ್ಟಿ

## ಪ್ರದೇಶಗಳೆಂದು ಘೋಷಿಸಿ: ಶಾಸಕ ಪ್ರಭು ಚವ್ಹಾಣ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ ಔರಾಧ:ಅ.19:ಔರಾದ(ಬಿ),ಕಮಲನಗರ ತಾಲ್ಲೂಕುಗಳನ್ನು ಅತೀವೃಷ್ಠಿ ಪ್ರದೇಶಗಳೆಂದು ಘೋಷಿಸಿ, ಹಾನಿಗೊಳಗಾದ ಜನತೆಗೆ ತಕ್ಷಣದ ಪರಿಹಾರಕ್ರಮಗಳನ್ನುಕೈಗೊಳ್ಳಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದ್ದಾರೆ.ಬೆಂಗಳೂರಿನಲ್ಲಿ ಆ.19ರಂದು ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಭೇಟಿ ಮಾಡಿ ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಅತೀವೃಷ್ಠಿಯಿಂದ ಉಂಟಾಗಿರುವ ಹಾನಿಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.ಕೆಲವು ದಿನಗಳಿಂದ ನಿರಂತರ ಧಾರಾಕಾರ ಮಳೆಯಾಗುತ್ತಿದೆ. ಭಾನುವಾರ ಒಂದೇ ದಿನ ಎರಡು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಸುಮಾರು 300 ಎಂ.ಎಂ ಮಳೆ ದಾಖಲಾಗಿದೆ. ಪ್ರತಿ ವರ್ಷ ಬರಗಾಲ ಆವರಿಸುವ ಕ್ಷೇತ್ರದಲ್ಲಿ ಈ ಬಾರಿ ಸುರಿದ ಮಳೆಯ ಪ್ರಮಾಣವು ಸಾಮಾನ್ಯ ಮಿತಿಯನ್ನು ಮೀರಿದ್ದು, ಬಿತ್ತನೆಯಾದ ಸೋಯಾಬೀನ್, ಉದ್ದು, ಹೆಸರು, ಜೋಳ, ಹತ್ತಿ ಮುಂತಾದ ಪ್ರಮುಖ ಕೃಷಿ ಬೆಳೆಗಳು ನೀರುಪಾಲಾಗಿವೆ. ಸಾವಿರಾರು ಹೆಕ್ಟೇರ್ ಬೆಳೆ ನಷ್ಟವಾಗಿದೆ. 100ಕ್ಕೂ ಮೇಲ್ಪಟ್ಟು ರೈತರ ಜಾನುವಾರುಗಳು ಸಾವನಪ್ಪಿವೆ ಎಂದು ತಿಳಿಸಿದ್ದಾರೆ.

ರೈತರು ಸಾಲ ಮಾಡಿ ಬೆಳೆದ ಬೆಳೆಗಳು ನೆಲಸಮವಾಗಿ ನಾಶವಾಗಿದ್ದು, ಅವರ ಜೀವನ ಭವಿಷ್ಯಗೊಂದಲಕ್ಕೆ ತಳ್ಳಲ್ಪಟ್ಟಿದೆ. ಜೊತೆಗೆ ಗ್ರಾಮಗಳು ಜಲಾವೃತ್ತಗೊಂಡು ಸುಮಾರು 50ಕ್ಕೂ ಹೆಚ್ಚು ಮನೆಗಳು ಕುಸಿದು ಕುಟುಂಬಗಳು ಬೀದಿಗೆ ಬಂದಿವೆ. ಅಷ್ಟೇ ಅಲ್ಲದೆ,ನಂದಿ ಬಿಜಲಗಾಂವ–ಚಿಕ್ಲಿ ಸೇತುವೆ, ಸಾವರಗಾಂವ–ಹಂಗರಗಾ ಸೇತುವೆ ಸೇರಿ ಹಲವು ಸೇತುವೆ, ಕೆರೆ–ಕಟ್ಟೆಗಳು ಒಡೆದು ಹಾನಿ ಸಂಭವಿಸಿದೆ. ರಸ್ತೆ, ವಿದ್ಯುತ್ ಲೈನ್‌ಗಳು, ನೀರು ಸರಬರಾಜು ವ್ಯವಸ್ಥೆಗಳು ಹಾನಿಗೊಳಗಾಗಿದ್ದು, ಸಾರಿಗೆ, ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಉಗ್ರಾಣ, ಶಾಲೆ, ಅಂಗನವಾಡಿಗಳು, ಸರ್ಕಾರಿ ಕಚೇರಿಗಳು ನೀರಿನಿಂದ ಹಾನಿಗೊಂಡು ಕಛೇರಿ ಕೆಲಸಗಳಿಗೂ ಅಡೆತಡೆ–ಯಾಗುತ್ತಿದೆ ಎಂದು ಕ್ಷೇತ್ರದ ಜನತೆ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡಿದ್ದಾರೆ.ಈ ತುರ್ತು ಪರಿಸ್ಥಿತಿಯನ್ನು ಮನಗಂಡು, ಔರಾದ(ಬಿ) ವಿಧಾನಸಭಾ ಕ್ಷೇತ್ರದ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳನ್ನು ಕೂಡಲೇ ಅತೀವೃಷ್ಠಿ ಪೀಡಿತ ಪ್ರದೇಶಗಳೆಂದು ಘೋಷಿಸಿ, ಹಾನಿಗೊಳಗಾದ ಜನತೆಗೆ ತಕ್ಷಣದ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಿದ್ದಾರೆ. ಇದೇ ವೇಳೆ ಕಂದಾಯ ಸಚಿವರಾದ ಕೃಷ್ಣಭೈರೇಗೌಡ, ಕೃಷಿ ಸಚಿವರಾದ ಚೆಲುವರಾಯಸ್ವಾಮಿ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರಿಗೂ ಮನವಿ ಪತ್ರ ಸಲ್ಲಿಸಿದ್ದಾರೆ.ನನ್ನ ಮನವಿಗೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳನ್ನು ಅತೀವೃಷ್ಠಿ ಪ್ರದೇಶಗಳೆಂದು ಘೋಷಿಸುವ ಭರವಸೆಯಿದೆ ಎಂದು ಶಾಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರಂತರ ಮಳೆಗೆ ಹೆಸರು, ಉದ್ದಿಗೆ ಕುತ್ತು



ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.19:ಜಿಲ್ಲೆಯಾದ್ಯಂತ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಗೆ ಹೆಸರು, ಉದ್ದಿಗೆ ಕುತ್ತು ಬಂದೊದಗಿದ್ದು, ರೈತರು ಚಿಂತಾಕ್ರಾಂತರಾಗಿದ್ದಾರೆ.

ಈ ಸಲ ಹೆಸರು ಮತ್ತು ಉದ್ದು ಉತ್ತಮ ರೀತಿಯಲ್ಲಿ ಬೆಳೆದಿದೆ. ರೈತರು ಇನ್ನೇನು ಬೆಳೆ ಕಟಾವು ಮಾಡಿ, ರಾಶಿ ಮಾಡಲು ಸಿದ್ಧತೆ ನಡೆಸಿದ್ದರು. ಆದರೆ, ಎಡೆಬಿಡದೆ ಸುರಿಯುತ್ತಿರುವ ಮಳೆ ಅವರ ಲೆಕ್ಕಾಚಾರ ತಲೆಕೆಳಗಾಗುವಂತೆ ಮಾಡಿದೆ. ಜಿಲ್ಲೆಯ ಬಹುತೇಕ ಕಡೆಗಳಲ್ಲಿ ಉದ್ದು, ಹೆಸರಿನ ಬೆಳೆ ನಡುವೆ ಅಪಾರ ಪ್ರಮಾಣದ ನೀರು ಸಂಗ್ರಹಗೊಂಡಿದೆ.ರೈತರ ಕಣ್ಣೆದುರಲ್ಲೇ ಬೆಳೆ ಮಣ್ಣು ಪಾಲಾಗುತ್ತಿದ್ದರೂ ಅವರು ಏನೂ ಮಾಡಲಾಗದ ಅಸಹಾಯಕ ಸ್ಥಿತಿಯಲ್ಲಿದ್ದಾರೆ.

ಒಂದೆರಡು ದಿನಗಳ ವರೆಗೆ ಬಿಡುವು ಕೊಟ್ಟರೂ ಹೇಗೋ ಅಲ್ಪಸ್ವಲ್ಪ ಬೆಳೆಯಾದರೂ ಉಳಿಸಿಕೊಳ್ಳಬಹುದು ಎಂಬುದು ರೈತರ ವಿಚಾರ. ಆದರೆ, ಮಳೆರಾಯ ಕೊಂಚವೂ ಬಿಡುವಿಲ್ಲದೆ ಧೋ.. ಎಂದು ಒಂದೇ ಸಮನೆ ಸುರಿಯುತ್ತಿದ್ದಾನೆ.

ಜಿಲ್ಲೆಯಲ್ಲಿ ಸೋಯಾ ಅವರೆ, ತೊಗರಿ, ಕಬ್ಬು ಹೆಚ್ಚಿನ ಪ್ರದೇಶದಲ್ಲಿ ಬೆಳೆದಿದ್ದು, ಸದ್ಯಕ್ಕೆ ಮಳೆಯಿಂದ ಈ ಬೆಳೆಗಳಿಗೆ ಯಾವುದೇ ಸಮಸ್ಯೆ ಇಲ್ಲ. ಹೆಚ್ಚಿನ ತೇವಾಂಶ ತಡೆದುಕೊಳ್ಳುವ ಶಕ್ತಿ ಈ ಬೆಳೆಗಳಿಗಿದೆ ಎಂದು ಕೃಷಿ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

'ಮಳೆ ಬೇಕೆಂದಾಗ ಸುರಿಯುವುದಿಲ್ಲ. ಬೇಡವೆಂದಾಗ ಸುರಿಯುತ್ತದೆ. ನಾಲ್ಕೈದು ದಿನ ಮಳೆ ಬಿಡುವು ಕೊಟ್ಟರೆ ಉದ್ದು, ಹೆಸರು ರಾಶಿ ಮಾಡಬಹುದು. ಆದರೆ, ಮಳೆ ಸ್ವಲ್ಪವೂ ಬಿಡುವು ಕೊಡುತ್ತಿಲ್ಲ. ಹಾಕಿದ ಬಂಡವಾಳವೂ ಕೈಸೇರುವ ಸಾಧ್ಯತೆ ಇಲ್ಲ' ಎಂದು ಕಮಠಾಣದ ರೈತ ಬಸವರಾಜ್ ಬೇಸರದಿಂದ ನುಡಿದರು. 'ಪ್ರಕೃತಿಯ ಮೇಲೆ ಯಾರದ್ದೂ ನಡೆಯುವುದಿಲ್ಲ. ಕೊಂಚ ಬಿಡುವು ಕೊಟ್ಟರೆ ಉದ್ದು, ಹೆಸರು ಉಳಿಯುತ್ತದೆ. ಆದರೆ, ಮಳೆ ನಿಲ್ಲುವ ಲಕ್ಷಣಗಳೇ ಕಾಣಸುತ್ತಿಲ್ಲ. ಎತ್ತರದ ಪ್ರದೇಶದಲ್ಲಿರುವ ರೈತರಿಗೆ ಇನ್ನೊಂದು ವಾರ ಕಾಲಾವಕಾಶ ಇದೆ. ಆದರೆ, ತಗ್ಗು ಪ್ರದೇಶದಲ್ಲಿ ಬೆಳೆ ಉಳಿಯುವುದು ಅನುಮಾನ' ಎನ್ನುತ್ತಾರೆ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್.

# ಸುಸ್ಥಿರ ಕಲಬುರಗಿ ನಗರ ವಿನ್ಯಾಸಕ್ಕೆ ಯೋಜನಾ ತತ್ವ ಅತ್ಯಗತ್ಯ:ಶೈಲೇಂದ್ರ ಸಿಂಗ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.19:ನಗರಭವಿಷ್ಯವನ್ನು ರೂಪಿಸುವಲ್ಲಿ ಯೋಜನಾ ವಿನ್ಯಾಸ ಪ್ರಮುಖ ಪಾತ್ರವ ಹಿಸುತ್ತದೆ. ಯೋಜಿತವಲ್ಲದ ಬೆಳವಣಿಗೆಯು ನಗರ ವಿಘಟನೆಗೆ ಕಾರಣವಾಗುತ್ತದೆ. ಹೀಗಾಗಿ ಕಲಬುರಗಿ ನಗರ ಸುಸ್ಥಿರ ಅಭಿವೃದ್ಧಿಗೆ ಯೋಜನಾ ತತ್ವ ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ನಗರ ಯೋಜನಾ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಶೈಲೇಂದರ್ ಸಿಂಗ್ ಅಭಿಪ್ರಾಯಪಟ್ಟರು.

ನಗರಭೂಸಾರಿಗೆನಿರ್ದೇಶನಾಲಯ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಕಲಬುರಗಿ ಮಹಾನಗರ ಪಾಲಿಕೆ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ, ಕಲಬುರಗಿ ನಗರ ಮೊಬಿಲಿಟಿ ಯೋಜನೆ, ವಿನ್ಯಾಸ ಹಾಗೂ ಕ್ರಿಯಾ ಸಂಶೋಧನಾ ಕೇಂದ್ರ ಹಾಗೂ ಪಿ.ಡಿ.ಎಸ್.ಎಸ್. ಸ್ಕೂಲ್ ಆಫ್ ಆರ್ಕಿಟೆಕ್ಚರ್ ವಿಭಾಗದ ಸಹಯೋಗದೊಂದಿಗೆ ಇತ್ತೀಚೆಗೆ ಕಲಬುರಗಿ ನಗರದ ಪಿ.ಡಿ.ಎ. ಕಾಲೇಜಿನಲ್ಲಿ ಮೂರು ದಿನಗಳ ಕಾಲ ವಿದ್ಯಾರ್ಥಿಗಳು, ಯುವ ವೃತ್ತಿಪರರು, ನಗರ ಯೋಜಕರು ಮತ್ತು ವಿನ್ಯಾಸಕರಿಗೆ ಆಯೋಜಿಸಿದ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸೂಕ್ತವಿನ್ಯಾಸವಿಲ್ಲದೆ ಬೆಳವಣಿಗೆಯು ವಿಘಟನೆಗೊಂಡ ನಗರಗಳಿಗೆ ಹೇಗೆ ಕಾರಣವಾಗುತ್ತದೆ ಎಂಬುದನ್ನು ಒತ್ತಿ ಹೇಳಿದ ಅವರು, ಸುಸ್ಥಿರ ನಗರ ಪರಿಸರವನ್ನು ನಿರ್ಮಿಸಲು ಹೊಸ ದೃಷ್ಟಿಕೋನಗಳು, ಆಲೋಚನೆಗಳ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಯುವ ಸಮೂಹ ಇದರ ಭಾಗಿಯಾಗಬೇಕು ಎಂದ ಅವರು, ನಗರ ಮೊಬಿಲಿಟಿ ಮತ್ತು ಅಭಿವೃದ್ಧಿಯಲ್ಲಿ ಸುಸ್ಥಿರ ಪರಿಹಾರಗಳೊಂದಿಗೆ ಕಲಬುರಗಿಯ ಭವಿಷ್ಯವನ್ನು ರೂಪಿಸಲು ಯುವ ಮನಸ್ಸುಗಳಿಗೆ ಮಾನ್ಸೂನ್ ಸ್ಟುಡಿಯೋ ಒಂದು ವೇದಿಕೆಯಾಗಿದೆ ಎಂದರು.

ಇದಕ್ಕು ಮುನ್ನ ಕಾರ್ಯಕ್ರಮ ಉದ್ಘಾಟಿಸಿದ ಎಚ್.ಕೆ.ಇ ಸಂಸ್ಥೆಯ ಉಪಾಧ್ಯಕ್ಷ ರಾಜಾ ಭೀಮಳ್ಳಿ ಮಾತನಾಡಿ ನಗರ ಸನ್ನಿವೇಶದಲ್ಲಿ ವಾಸ್ತುಶಿಲ್ಪಿಗಳ ಮಹತ್ವದ ಬಗ್ಗೆ ವಿವರಿಸಿದರು. ಕೆ.ಎಲ್.ಇ ಟೆಕ್ ವಿಶ್ವವಿದ್ಯಾಲಯದ ಪ್ರಮುಖ ತಜ್ಞ ಪ್ರಾಧ್ಯಾಪಕಿ ಆರ್. ಗೀತಾಂಜಲಿ ರಾವ್ ಅವರು ನಗರ ಯೋಜನೆ ಮತ್ತು ನಗರ ವಿನ್ಯಾಸದ ಕುರಿತು ಪ್ರಾತ್ಯಕ್ಷಿಕೆಯನ್ನು ಪ್ರಸ್ತುತಪಡಿಸಿದರು.

ಈ ಮೂರು ದಿನಗಳ ಕಾರ್ಯಕ್ರಮವು ವಿದ್ಯಾರ್ಥಿಗಳು, ಯುವ ವೃತ್ತಿಪರರು, ನಗರ ಯೋಜಕರು ಮತ್ತು ವಿನ್ಯಾಸಕರು ಒಟ್ಟಿಗೆ ಸೇರಿ ಮಾರುಕಟ್ಟೆ, ಸಾಗಣೆ ಹಾಗೂ ಪರಂಪರೆ ವಲಯಗಳಲ್ಲಿ ನೈಜ–ಪ್ರಪಂಚದ ಯೋಜನೆಗಳಲ್ಲಿ ಕೆಲಸ ಮಾಡಲು ತಿಳಿಹೇಳಿದಲ್ಲದೆ ಮುಂದಿನ ದಿನದಲ್ಲಿ ಕಲಬುರಗಿ ನಗರದಲ್ಲಿನ ಸವಾಲುಗಳಿಗೆ ಸ್ಥಳೀಯ ಆಧಾರಿತ ಸುಸ್ಥಿರ ನಗರ ಮೊಬಿಲಿಟಿಯ ಪರಿಹಾರಗಳನ್ನು ಕಂಡುಕೊಳ್ಳಲು ಪರಿಹಾರ ಸೂಚಿಸಿತ್ತು. ಮಾನ್ಸೂನ್ ಸ್ಟುಡಿಯೋ ಕಾರ್ಯಕ್ರಮವು ಶೈಕ್ಷಣಿಕ ಕಲಿಕೆಯನ್ನು ಪ್ರಾಯೋಗಿಕ ಅನುಭವ ನೀಡಿತು. ಸುಸ್ಥಿರ ನಗರ ಬೆಳವಣಿಗೆಗೆ ಪಾಲ್ಗೊಳ್ಳುವಿಕೆ ಜೊತೆಗೆ ಕ್ರಿಯಾತ್ಮಕ ಯೋಚನೆಗಳು ಹುಟ್ಟು ಹಾಕಿತ್ತು.

ನಗರಭೂಸಾರಿಗೆನಿರ್ದೇಶನಾಲಯದ ಪ್ರತಿನಿಧಿಗಳಿಂದ ಮಾರ್ಗದರ್ಶನ ಪಡೆದ ವಿದ್ಯಾರ್ಥಿಗಳು ಮಾರುಕಟ್ಟೆ, ಸಾಗಣೆ ಹಾಗೂ ಪರಂಪರೆ ವಲಯಗಳಿಗೆ ಭೇಟಿ ನೀಡಿ ನಗರಾಭಿವೃದ್ಧಿ ಮತ್ತು ಮೊಬಿಲಿಟಿಯಲ್ಲಿನ ಸವಾಲುಗಳಿಗೆ ಪರಿಹಾರಗಳನ್ನು ಪಡೆದುಕೊಂಡರು. ಕಾರ್ಯಕ್ರಮದ ಎರಡನೇ ದಿನದಂದು ಕೆ.ಎಲ್.ಇ ಟೆಕ್ ವಿಶ್ವವಿದ್ಯಾಲಯದ ಪ್ರೊ. ಕಲ್ಲೇಶ್‌ಕುಮಾರ್ ಪಟೇಲ್ ಅವರು ಪ್ರಸ್ತಾವಿತ ಪರಿಹಾರಗಳನ್ನು ಅಭಿವೃದ್ಧಿಪಡಿಸುವಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮತ್ತು ಮಾರ್ಗದರ್ಶನ ನೀಡಿದರು.

ಉದ್ಘಾಟನಾ ಕಾರ್ಯಕ್ರಮದಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಗಂಗಾಧರ ಮಳಗಿ, ಕೆ–ಕೆಆರ್‌ಡಿಬಿ ಹೆಚ್ಚುವರಿ ನಿರ್ದೇಶಕಿ ಪ್ರವೀಣ ಪ್ರಿಯಾ ಡೇವಿಡ್, ನಗರ ಭೂ ಸಾರಿಗೆ ನಿರ್ದೇಶನಾಲಯದ ವಿಶೇಷಾಧಿಕಾರಿ ಡಾ. ಮೋನಿಕಾ ಕಶ್ಕರಿ, ಎಚ್.ಕೆ.ಇ. ಆಡಳಿತ ಮಂಡಳಿ ಸದಸ್ಯ ಶರಣಬಸಪ್ಪ ಹರ್ವಾಲ್, ಕಾರ್ಯದರ್ಶಿ ಉದಯಕುಮಾರ್ ಚಿಂಚೋಳಿ,

ನಗರಾಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸದಸ್ಯ ಶಿವಕುಮಾರ್ ಪಾಟೀಲ್ ಸೇರಿದಂತೆ ನಗರ ಭೂ ಸಾರಿಗೆ ನಿರ್ದೇಶನಾಲಯದ ಅಧಿಕಾರಿಗಳು ಮತ್ತು ಪಿ.ಡಿ.ಎಸ್. ಎಸ್. ವಿಭಾಗದ ಅಧ್ಯಾಪಕರು ಉಪಸ್ಥಿತರಿದ್ದರು.

ವಿದ್ಯಾರ್ಥಿ ತಂಡಕ್ಕೆ ಸನ್ಮಾನ: ಮೂರು ದಿನಗಳ ಕಾರ್ಯಕ್ರಮದಲ್ಲಿ ತರಬೇತಿ ಪಡೆದ 3 ತಂಡಗಳಿಗೆ ನಗರ ವಿನ್ಯಾಸಕ್ಕೆ ಸಂಬಂಧಪಟ್ಟಂತೆ ನೀಡಲಾದ ಟಾಸ್ಕ್ ನಲ್ಲಿ ವಿಜೇತ ತಂಡಕ್ಕೆ ಕೆ.ಕೆ.ಆರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್ ಅವರು ಅಭಿನಂದಿಸಿದರು. ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಎಸ್. ಶಿಂಧೆ, ಕೆ.ಕೆ. ಆರ್.ಟಿ.ಸಿ ಚೀಫ್ ಸಿಸ್ಟಮ್ ಮ್ಯಾನೇಜರ್ ಸಂತೋಷ್ ಗೋಗೇರಿ, ನಗರ ಯೋಜನಾ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಶೈಲೇಂದರ್ ಸಿಂಗ್ ಅವರುಗಳು ಸಾಥ್ ನೀಡಿದರು. ಇದೇ ಸಂದರ್ಭದಲ್ಲಿ ಕಲಬುರಗಿಯ ಕಾರ್ಯಕ್ರಮ ಯಶಸ್ವಿಗೊಳಿಸಿದ್ದಕ್ಕಾಗಿ ಪಿಡಿಎಸ್‌ಎಸ್ ಕಾಲೇಜ್ ಆಫ್ ಆರ್ಕಿಟೆಕ್ಚರ್ ಮತ್ತು ನಗರ ಭೂ ಸಾರಿಗೆ ನಿರ್ದೇಶನಾಲಯದ ತಂಡಕ್ಕೆ ಅಧಿಕಾರಿ ವೃಂದ ಶ್ಲಾಘಿಸಿತು.

# ಕಮಲನಗರ ಭಾರಿ ಮಳೆಗೆ 38 ಮನೆಗಳ ಹಾನಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.19:ತಾಲೂಕಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಗೆ, ತಾಲೂಕು ತತ್ತರಿಸಿದೆ, ಮನೆ, ಜಾನುವಾರ, ಕಳೆದುಕೊಂಡ ಜನ ಗಂಗಲಾಗಿದ್ದಾರೆ, ಹೊಲದಲ್ಲಿ ನೀರು ನಿಂತು ರೈತ ಬೆಳೆದ ಬೆಳೆ ಸಂಪೂರ್ಣ ಹನಿಯಾಗಿದೆ. ಕೆಲವು ಕಡೆ ಸೇತುವೆಗಳು ಮುನುಗಿರುವ ವರದಿಯಿದೆ.ತಾಲೂಕಿನ, ಚಿಕ್ಲಿ, ಗಂಗನಬಿಡ, ದಾಬಕಾ, ನಂದಿ ಬಿಜಲಗಾಂವ,ಚಿಮ್ಮಗಾಂವ,ಹುಲಸುರ, ಹಾಲಹಳ್ಳಿ, ಹಂದಿಕೆರಾ ಸೇರಿದಂತೆ ಇಲ್ಲಿಯ ವರಗೆ 38 ಮನೆ ಬಿದ್ದಿವರ ವರದಿ ತೆಗೆದುಕೊಂಡಿರುವ ಬಗ್ಗೆ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಮಾಹಿತಿ ನೀಡಿದರು.ನಂದಿ ಬಿಜಲಗಾಂವ ರೈತರು ಒಬ್ಬರು ಗ್ರಾಮದ ಸೆಡನಲ್ಲಿ ಕಟ್ಟಿರುವ 15ಕ್ಕೂ ಹೆಚ್ಚು ಎಮ್ಮೆಗಳು ಪ್ರವಾಹದಲ್ಲಿ ಕೊಚ್ಚಿ–ಕೊಂಡು ಹೋಗಿರುತ್ತವೆ. ಹಂದಿಕೆರಾ ಗ್ರಾಮದಲ್ಲಿ ರೈತ ಎಮ್ಮೆ ಹಾವು ಕಚ್ಚಿ ಸತ್ತಿರುವ ವರದಿಯಾಗಿದೆ. ಹೀಗೆ ತಾಲೂಕಿನ್ಯಾದಂತ ಜನನ ನಾನು ರೀತಿಯ ಸಮಸ್ಯೆಗಳು ಎದುರಿಸುತ್ತಿದ್ದಾರೆ.

> "ಕಮಲನಗರ ತಾಲೂಕಿನಲ್ಲಿ ವಿಪರೀತವಾಗಿ ಸುರಿದ ಮಳೆಯಿಂದಾಗಿ, ಜನ, ಜಾನುವಾರು, ವಸತಿ, ರಸ್ತೆ, ಸೇತುವೆ ಹಾನಿ ಬಗ್ಗೆ ಜನ ಸಾಮನ್ಯರಿಂದ ಅನೇಕ ಹವಾಲುಗಳು ಬರುತ್ತಿವೆ ಎಲ್ಲವೂ ಸ್ವೀಕರಿಸಿ, ಸೂಕ್ತ ಪರಿಹಾರ ಕುಡಿಸುವ ಕಾರ್ಯ ಮಾಡುತ್ತೇವೆ."
> – ಅಮಿತ ಕುಮಾರ ಕುಲಕರ್ಣಿ ತಹಸೀಲ್ದಾರ ಕಮಲನಗರ.

# ಉಪ ಲೋಕಾಯುಕ್ತ ಬಿ.ವೀರಪ್ಪ ಅವರಿಗೆ ಖುದ್ದು ಭೇಟಿ ಮಾಡಿ ದೂರು ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 19 : ಆಗಸ್ಟ್ 28 ರಿಂದ 30 ರವರೆಗೆ ರಾಯಚೂರಜಿಲ್ಲೆಯಲ್ಲಿಗೌರವಾನ್ವಿತ ನ್ಯಾಯಮೂರ್ತಿ ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಉಪಸ್ಥಿತರಲಿದ್ದು ಸಾರ್ವಜನಿಕರು ಅವರಿಗೆ ನೇರವಾಗಿ ಭೇಟಿ ಮಾಡಿ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಆಗಸ್ಟ್ 29ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಜಿಲ್ಲಾ ಶಿಬಿರ ಕೈಗೊಳ್ಳಲಿದ್ದು, ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿ ಅಥವಾ ನೌಕರರಿಂದ ತಮಗೆ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದರೆ ಅಥವಾ ಅಧಿಕಾರಿ ಅಥವಾ ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆಕೊಡುವುದು ಅಥವಾ ಇನ್ಯಾವುದೇ ತರಹದ ಭ್ರಷ್ಟಾಚಾರ ಮತ್ತು ದುರಾಡಳಿತದಲ್ಲಿ ತೊಡಗಿ ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಗೌರವಾನ್ವಿತರ ಮುಂದೆ ತಮ್ಮ ಅಹವಾಲುಗಳನ್ನು ಲಿಖಿತರೂಪದಲ್ಲಿ ಸಲ್ಲಿಸಬಹುದಾಗಿದೆ. ಅದೆ ರೀತಿ ಆಗಸ್ಟ್ 30ರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.45 ಗಂಟೆಯೆರವರೆಗೆ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಗೌರವಾನ್ವಿತ ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ತನಿಖೆ ಅಥವಾ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳಲ್ಲಿ ಕಚೇರಿಯಿಂದ ನೋಟಿಸ್ ಕಳುಹಿಸಿರುವ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸಲಿದ್ದಾರೆ. ದೂರುದಾರರು ಮತ್ತು ಎದುರುದಾರರು ನಿಗದಿತ ಸಮಯದಲ್ಲಿ ಹಾಜರಾಗಿ ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ರಾಯಚೂರಿನ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್ ಚಿಟಗುಬ್ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರಂತರ ಮಳೆಗೆ "ಕೊಡೆ"ಯಾಸರೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕಳೆದ ಎರಡು ದಿನಗಳಿಂದ ಕಲಬುರಗಿ ನಗರದಲ್ಲಿ ಧಾರಾಕಾರ ಮಳೆಯೊಂದಿಗೆ ನಿರಂತರವಾಗಿ ಸುರಿಯುತ್ತಿರುವ ತುಂತುರು ಮಳೆಯಿಂದಾಗಿ ಸಾರ್ವಜನಿಕರು ಕೊಡೆ ಮೊರೆ ಹೋಗಿದ್ದು ನಗರದಾದ್ಯಂತ ಕೊಡೆಮಯವಾದ ದೃಶ್ಯ ಕ್ಯಾಮರ ಕಣ್ಣಲಿ ಸೆರೆಯಾಗಿದ್ದು ಹೀಗೆ.

# ವಿಜೃಂಭಣೆಯ ಅಳಿಯ ಚನ್ನ ಬಸವೇಶ್ವರ ಜಾತ್ರೆ



ಮಲ್ಲಮ್ಮನುಡಿವಾರ್ತೆ ಕೊಪ್ಪಳ:ಅ.19: ಕುಕನೂರು ತಾಲೂಕಿನ ಕಕ್ಕಿಹಳ್ಳಿ ಗ್ರಾಮದ ಅಳಿಯ ಚನ್ನಬಸವೇಶ್ವರ ಸ್ವಾಮಿಯ ಉಚ್ಚಯ ಮಂಗಳವಾರ ಅದೂರಿಯಾಗಿ ಜರುಗಿತು.ಯಲಬುರ್ಗಾ ಶ್ರೀಧರ ಮುರಡಿ ಹಿರೇಮಠದಬ ಸವಲಿಂಗೇಶ್ವರಸ್ವಾಮೀಜಿ ಮತ್ತು ಅನ್ನದಾನಿಶ್ವರ ಶಾಖಾ ಮಠದ ಶ್ರೀಗಳು ರಥೋತ್ಸವಕ್ಕೆ ಚಾಲನೆ ನೀಡಿದರು.ನೂರಾರುವರ್ಷಗಳಐತಿಹಾಸಿಕ ಧಾರ್ಮಿಕ ಕ್ಷೇತ್ರವಾಗಿರುವ ಅಳಿಯ ಚನ್ನಬಸವೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವ ಉಚ್ಚಾಯ ಎಳೆಯುವ ಮೂಲಕ ವಿಜೃಂಭಣೆ ಯಿಂದ ನಡೆಯಿತು.ಗುದ್ನೇಶ್ವರ ಮಠ ಮತ್ತು ಕೊನಾಪುರ ಗ್ರಾಮದ ಭಜನಾ ಮೇಳ ಮತ್ತು ಸಕಲ ಮಂಗಳ ವಾದ್ಯ ಮೇಳದೊಂದಿಗೆ ಮಂಗಳವಾರ ಸಂಜೆ ಸ್ವಾಮಿಯ ರಥೋತ್ಸವ ಜರುಗಿತು.ಶ್ರಾವಣ ಮಾಸದ ತಿಂಗಳು ಪೂರ್ತಿ ಅಜ್ಜಯ್ಯನ ಮಠದಲ್ಲಿ ಅಳಿಯ ಚನ್ನ ಬಸವೇಶ್ವರ ಸ್ವಾಮೀಯ ಗದ್ದುಗೆಗೆ ಅಭಿಷೇಕ,ಧಾರ್ಮಿಕ ಪೂಜಾ ಕೈಂಕರ್ಯಗಳು ನಡೆದವು.

# ೯೦ ದಿನಗಳ ಮಧ್ಯಸ್ಥಿಕೆ ಅಭಿಯಾನ

ಬೀದರ,ಅ19:ಗೌರವಾನ್ವಿತಪ್ರಧಾನ ಜಿಲ್ಲಾಮತ್ತುಸತ್ರನ್ಯಾಯಾಧೀಶರುಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನುಸೇವೆಗಳ ಪ್ರಾಧಿಕಾರ ಬೀದರ ಅವರ ಸಂಯುಕ್ತಾಶ್ರಯದಲ್ಲಿ ದಿನಾಂಕ: 01–07–2025 ರಿಂದ 90 ದಿನಗಳ ಮಧ್ಯಸ್ಥಿಕೆಅಭಿಯಾನಆರಂಭವಾಗಿದ್ದು, ಅದರಲ್ಲಿ ಬಾಕಿ ಇರುವ ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಲಯದ ಪ್ರಕರಣಗಳು ಮೋಟರ ಅಪಘಾತ,ಚೆಕ್

ಅಮಾನ್ಯ ಪ್ರಕರಣಗಳು ವಾಣಿಜ್ಯ, ಸೇವಾ ಪ್ರಕರಣಗಳು ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕರ ವ್ಯಾಜ್ಯ ಪ್ರಕರಣಗಳು, ಭೂ ಸ್ವಾಧಿನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆಮೂಲಕ ಇತ್ಯಾರ್ಥಪಡಿಸಲಾಗುತ್ತದೆ ಎಂದುಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಅವರು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.